

ಸುದ್ದಿಗಳ ಹೊನಲು

# ಸಂಜೆ ಮುಗಿಲು

ಸಂಪುಟ: 22, ಸಂಚಿಕೆ: 78, ಪುಟಗಳು: 8, ಶನಿವಾರ, 28 ಡಿಸೆಂಬರ್ 2024 RNI NO. KARKAN/2002/08054

epaper: www.sanjemugilu.com

ಕನ್ನಡ ಪ್ರಾದೇಶಿಕ ಸಂಜೆ ದಿನಪತ್ರಿಕೆ

ವೇಣು ಸಾರಥ್ಯದಲ್ಲಿ...

ಬೆಂಗಳೂರು। ಬೆಂಗಳೂರು ಗ್ರಾಮಾಂತರ। ಕೋಲಾರ। ಚಿಕ್ಕಬಳ್ಳಾಪುರ। ರಾಮನಗರ। ಮಂಡ್ಯ। ಮೈಸೂರು। ಚಾಮರಾಜನಗರ

₹3


ಸುಭಾಷಿತ

ಸ್ವಚ್ಛತೆ ದೈವತ್ವಕ್ಕೆ ಸಮಾನ. ಶುಚಿತ್ವವಿಲ್ಲದ ದೇಹ ಮತ್ತು ಮನಸ್ಸಿನಲ್ಲಿ ದೇವರು ನೆಲೆಸಲು ಸಾಧ್ಯವಿಲ್ಲ.

## ಪಂಚಾಂಗ

(ಶನಿವಾರ 28, ಡಿಸೆಂಬರ್-2024)

- ಶ್ರೀ ಕ್ರೋಧಿನಾಮ ಸಂವತ್ಸರ,
- ದಕ್ಷಿಣಾಯಣ, ಹಿಮಂತ ಋತು,
- ಮಾರ್ಗಶಿರ ಮಾಸ, ಕೃಷ್ಣ ಪಕ್ಷ,
- ತ್ರಯೋದಶಿ, ಶನಿವಾರ, ಅನುರಾಧ ನಕ್ಷತ್ರ
- ರಾಹುಕಾಲ - 09:33 ರಿಂದ 10:59
- ಗುಳಿಕಕಾಲ - 06:42 ರಿಂದ 08:07
- ಯಮಗಂಡಕಾಲ - 01:50 ರಿಂದ 03:16


ದಶಪ್ರಮತಿ ಮುದ್ರಣಾಲಯ

dashapramathi mudranalaya

PRE-PRESS PRINTERS

Contact: +91 9483589085 | e-mail: dashapramathimudranalaya@gmail.com

We Undertake Printing of Newspapers | Tabloids | Magazines


## ಸಂಕ್ಷಿಪ್ತ ಸುದ್ದಿ

### ಚರ್ಚ್‌ನಲ್ಲಿ ಜೈ ಶ್ರೀರಾಮ್ ಘೋಷಣೆ ಕೇಸ್ ದಾಖಲು

**ಶಿಲ್ಲಾಂಗ್:** ವ್ಯಕ್ತಿಯೊಬ್ಬ ಚರ್ಚ್‌ನೊಳಗೆ ಪ್ರವೇಶಿಸಿ ಜೈ ಶ್ರೀರಾಂ ಘೋಷಣೆ ಕೂಗಿದ ಘಟನೆ ಮೇಘಾಲಯದ ಪೂರ್ವ ಖಾಸಿ ಹಿಲ್ಸ್ ಜಿಲ್ಲೆಯಲ್ಲಿ ನಡೆದಿದೆ. ಈ ಸಂಬಂಧ ಪೊಲೀಸರು ಪ್ರಕರಣ ದಾಖಲಿಸಿದ್ದಾರೆ.

ಆಕಾಶ್ ಸಾಗರ್ ಎಂಬಾತ ಮಾವಿನ್ನಾಂಗ್ ಗ್ರಾಮದ ಚರ್ಚ್ ಒಳಗೆ ಅಕ್ರಮವಾಗಿ ಪ್ರವೇಶಿಸಿದ್ದಾನೆ. ಬಳಿಕ ಜೈ ಶ್ರೀರಾಂ ಘೋಷಣೆ ಕೂಗಿ ಅದರ ವಿಡಿಯೋ ಮಾಡಿ ಸಾಮಾಜಿಕ ಜಾಲತಾಣದಲ್ಲಿ ಹಂಚಿಕೊಂಡಿದ್ದಾನೆ. ಈ ಮೂಲಕ ಧಾರ್ಮಿಕ ಭಾವನೆಗಳಿಗೆ ಧಕ್ಕೆ ತಂದ ಆರೋಪದಡಿ ಪೊಲೀಸರು ಪ್ರಕರಣ ದಾಖಲಿಸಿ ತನಿಖೆ ನಡೆಸುತ್ತಿದ್ದಾರೆ. ಮೇಘಾಲಯ ಸಿಎಂ ಕಾನಾಡ್ ಸಂಗ್ಮಾ ಅವರು ಈ ಘಟನೆಯನ್ನು ಖಂಡಿಸಿದ್ದಾರೆ. ಇದು ಉದ್ದೇಶಪೂರ್ವಕ ಕೃತ್ಯವಾಗಿದೆ. ಇದರ ವಿರುದ್ಧ ಕಾನೂನು ಕ್ರಮ ಕೈಗೊಳ್ಳಲಾಗುವುದು. ಸರ್ಕಾರವು ಸಾಮಾಜಿಕ, ಧಾರ್ಮಿಕ ಅಥವಾ ಕೋಮು ಸಾಮರಸ್ಯ ಕದಡುವುದಕ್ಕೆ ಅವಕಾಶ ಮಾಡಿ ಕೊಡುವುದಿಲ್ಲ ಎಂದು ಎಚ್ಚರಿಸಿದ್ದಾರೆ.

**ಕರ್ನಾಟಕದಲ್ಲೂ ಇದೇ ಮಾದರಿಯ ಘಟನೆ:** 2023ರಲ್ಲಿ ಕರ್ನಾಟಕದ ದಕ್ಷಿಣ ಕನ್ನಡ ಜಿಲ್ಲೆಯ ಕಡಬದಲ್ಲಿ ಇಬ್ಬರು ವ್ಯಕ್ತಿಗಳು ಮಸೀದಿಯೊಳಗೆ ತೆರಳಿ ಜೈ ಶ್ರೀರಾಂ ಘೋಷಣೆ ಕೂಗಿದ್ದರು. ಈ ಪ್ರಕರಣ ಸುಪ್ರೀಂ ಕೋರ್ಟ್‌ನಲ್ಲಿ ವಿಚಾರಣೆ ಹಂತದಲ್ಲಿದೆ.

### ಕ್ಯಾಂಟರ್‌ಗೆ ಲಾರಿ ಡಿಕ್ಕಿಯಾಗಿ ಸ್ಫೋಟ: ಇಬ್ಬರ ಸ್ಥಿತಿ ಗಂಭೀರ



**ಚಿಕ್ಕಬಳ್ಳಾಪುರ:** ಸಿಎನ್‌ಜಿ ಗ್ಯಾಸ್ ಸಿಲಿಂಡರ್ ಸಾಗಿಸುತ್ತಿದ್ದ ಕ್ಯಾಂಟರ್‌ಗೆ ಗ್ರಾನೈಟ್ ಲಾರಿ ಡಿಕ್ಕಿ ಹೊಡೆದ ಪರಿಣಾಮ ಬೆಂಕಿ ಹೊತ್ತಿ ಉರಿದ ಘಟನೆ ಚಿಕ್ಕಬಳ್ಳಾಪುರದ ಹುನೇಗಲ್ ಗ್ರಾಮದ ಬಳಿ ಸಂಭವಿಸಿದೆ.

ಘಟನೆಯಲ್ಲಿ ಚಾಲಕ ನರಸಿಂಹಮೂರ್ತಿ ಹಾಗೂ ಮಾದಪ್ಪ ಎಂಬವರಿಗೆ ಸುಟ್ಟ ಗಾಯಗಳಾಗಿವೆ. ಗಾಯಾಳುಗಳನ್ನು ಬೆಂಗಳೂರಿನ ವಿಕ್ಟೋರಿಯಾ ಆಸ್ಪತ್ರೆಗೆ ದಾಖಲಿಸಲಾಗಿದೆ. ಹುನೇಗಲ್ ಬಳಿ ಯೂ ಟರ್ನ್ ಪಡೆಯಲು ನಿಂತಿದ್ದ ಸಿಎನ್‌ಜಿ ಸಿಲಿಂಡರ್ ತುಂಬಿದ್ದ ಲಾರಿಗೆ, ಕಲ್ಲು ದಿಮ್ಮೆಗಳನ್ನ ಸಾಗಿಸುತ್ತಿದ್ದ ಲಾರಿ ಡಿಕ್ಕಿ ಹೊಡೆದಿದೆ. ಅಪಘಾತದ ರಭಸಕ್ಕೆ ಸಿಎನ್‌ಜಿ ಗ್ಯಾಸ್ ಸೋರಿಕೆಯಾಗಿ ಬೆಂಕಿ ಹೊತ್ತಿಕೊಂಡಿದೆ. ಪುಟ 2

## ಕುಂಭಮೇಳಕ್ಕಾಗಿ ಮೈಸೂರಿನಿಂದ ಲಕ್ನೋಗೆ ವಿಶೇಷ ರೈಲು

**ಲಕ್ನೋ:** ಉತ್ತರ ಪ್ರದೇಶದ ಪ್ರಯಾಗ್ ರಾಜ್‌ನಲ್ಲಿರುವ ಗಂಗಾ, ಯಮುನಾ ಹಾಗೂ ಸರಸ್ವತಿ ನದಿಗಳ ಸಂಗಮ ಕ್ಷೇತ್ರವಾದ ತ್ರಿವೇಣಿ ಸಂಗಮದಲ್ಲಿ ನಡೆಯಲಿರುವ ಕುಂಭಮೇಳಕ್ಕಾಗಿ ಮೈಸೂರಿನಿಂದ ಲಕ್ನೋ ಜಂಕ್ಷನ್‌ಗೆ ವಿಶೇಷ ರೈಲು ವ್ಯವಸ್ಥೆ ಮಾಡಲಾಗಿದೆ.

ಕುಂಭಮೇಳದಲ್ಲಿ ಪಾಲ್ಗೊಳ್ಳುವ ಪ್ರಯಾಣಿಕರ ಹೆಚ್ಚುವರಿ ದಟ್ಟಣೆಯನ್ನು ಪೂರೈಲು ನೈರುತ್ಯ ರೈಲ್ವೆಯಿಂದ ಏಕಮುಖ ವಿಶೇಷ ರೈಲು ಸಂಚರಿಸಲಿವೆ.

ರೈಲು ಸಂಖ್ಯೆ 06216 ಮೈಸೂರು-ಲಕ್ನೋ ಜಂಕ್ಷನ್ ಏಕಮುಖ ಸ್ಪೆಷಲ್ ಎಕ್ಸ್‌ಪ್ರೆಸ್ ಡಿ.29 ರ ಭಾನುವಾರ ರಾತ್ರಿ 12:30 ಕ್ಕೆ ಮೈಸೂರಿನಿಂದ ಹೊರಟು ಡಿ.31 ರ ಮಂಗಳವಾರ ನಸುಕಿನ 4 ಗಂಟೆಗೆ ಲಕ್ನೋ ಜಂಕ್ಷನ್ ತಲುಪಲಿದೆ. ಪುಟ 2



## ರಾಜ್ಯದಲ್ಲಿ ಮುಂದಿನ 5 ದಿನಗಳ ಕಾಲ ಮಳೆ ಅಲರ್ಟ್

**ಬೆಂಗಳೂರು:** ರಾಜ್ಯದ ದಕ್ಷಿಣ ಒಳನಾಡು ಮತ್ತು ಮಲೆನಾಡು ಜಿಲ್ಲೆಗಳಲ್ಲಿ ಚದುರಿದಿಂದ ವ್ಯಾಪಕವಾಗಿ ಸಾಧಾರಣ ಮಳೆಯಾಗಲಿದೆ. ಕರಾವಳಿ ಮತ್ತು ಉತ್ತರ ಒಳನಾಡು ಜಿಲ್ಲೆಗಳಲ್ಲಿ ಅಲ್ಲಲ್ಲಿ ಚದುರಿದಂತೆ ಸಾಧಾರಣ ಮಳೆಯಾಗುವ ಸಾಧ್ಯತೆಯಿದೆ.

ರಾಜ್ಯದಾದ್ಯಂತ ಇಂದು ಮೋಡ ಕವಿದ ವಾತಾವರಣದೊಂದಿಗೆ ಸಾಧಾರಣ ಮಳೆಯಾಗುವ ಸಾಧ್ಯತೆಯಿದೆ. ಇನ್ನುಳಿದ ದಿನಗಳಲ್ಲಿ ಒಣ ಹವೆಯಿರುವ ಸಾಧ್ಯತೆಯಿದೆ. ರಾಜ್ಯದ ಒಳನಾಡು ಜಿಲ್ಲೆಗಳಲ್ಲಿ ಸಾಧಾರಣ ಹಾಗೂ ದಟ್ಟ ಮಂಜು ಆವರಿಸುವ ಸಾಧ್ಯತೆಯಿದೆ.

ಇನ್ನು, ಬಂಗಾಳಕೊಲ್ಲಿಯಲ್ಲಿ ವಾಯುಭಾರ ಕುಸಿತ ಉಂಟಾಗಿರುವ ಹಿನ್ನೆಲೆ, ಮುಂದಿನ 5 ದಿನಗಳ ಕಾಲ ಕರ್ನಾಟಕದಲ್ಲಿ ಭಾರೀ ಮಳೆಯಾಗುವ ಸಾಧ್ಯತೆ ಇದೆ



ಎಂದು ಭಾರತೀಯ ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ.

ಸಿಲಿಕಾನ್ ಸಿಟಿ ಬೆಂಗಳೂರು ಸೇರಿದಂತೆ, ರಾಜ್ಯದ ಹಲವೆಡೆ ಮಳೆಯಾಗಲಿದೆ ಎಂದು ಹವಾಮಾನ ಇಲಾಖೆ ಮಾಹಿತಿ ನೀಡಿದೆ. ಪುಟ 2

## ಡಾ. ಮನಮೋಹನ್ ಸಿಂಗ್ ಅಂತ್ಯಕ್ರಿಯೆ

# ಸ್ಮಾರಕ ವಿಚಾರದಲ್ಲೂ ವಿವಾದ

**ನವದೆಹಲಿ:** ಮಾಜಿ ಪ್ರಧಾನಿ ಡಾ. ಮನಮೋಹನ್ ಸಿಂಗ್ ಅಂತ್ಯಕ್ರಿಯೆಗೆ ಕೆಲವೇ ಗಂಟೆಗಳ ಮೊದಲು, ಅವರ ಸ್ಮಾರಕದ ನಿರ್ಮಾಣದ ಸ್ಥಳದ ಬಗ್ಗೆ ಕಾಂಗ್ರೆಸ್ ತಗಾದೆ ತೆಗೆದಿದೆ. ಇದು ಕೇಂದ್ರ ಸರ್ಕಾರದ ಹಾಗೂ ಕಾಂಗ್ರೆಸ್ ಮಧ್ಯೆ ವಿವಾದಕ್ಕೆ ಕಾರಣವಾಗಿದೆ. ಮಾಜಿ ಪ್ರಧಾನಿ ಹೆಸರಿನಲ್ಲಿ ಕೊಳಕು ರಾಜಕಾರಣ ಮಾಡಬೇಡಿ ಎಂದು ಕಾಂಗ್ರೆಸ್ ನಾಯಕರಿಗೆ ಬಿಜೆಪಿ ಆಗ್ರಹಿಸಿದೆ.

ಮನಮೋಹನ್ ಸಿಂಗ್ ಅಂತ್ಯಕ್ರಿಯೆ ನಡೆಯುವ ಸ್ಥಳದಲ್ಲಿಯೇ ಸ್ಮಾರಕ ನಿರ್ಮಿಸುವ ಸಾಧ್ಯತೆಯನ್ನು ಪರಿಶೀಲಿಸಬೇಕೆಂದು ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಶುಕ್ರವಾರ ಪ್ರಧಾನಿ ನರೇಂದ್ರ ಮೋದಿಗೆ ಮನವಿ ಮಾಡಿದ್ದರು. ಇದು ರಾಜಕಾರಣಿಗಳು ಮತ್ತು ಮಾಜಿ ಪ್ರಧಾನ ಮಂತ್ರಿಗಳ ಅಂತ್ಯಕ್ರಿಯೆಯ ಸ್ಥಳದಲ್ಲಿ ಅವರ ಸ್ಮಾರಕಗಳನ್ನು ನಿರ್ಮಿಸುವ ಸಂಪ್ರದಾಯಕ್ಕೆ ಅನುಗುಣವಾಗಿದೆ ಎಂದು ಖರ್ಗೆ ಹೇಳಿದ್ದರು.

ನಂತರ ಬಿಡುಗಡೆ ಮಾಡಿದ ಪತ್ರಿಕಾ ಪ್ರಕಟಣೆಯಲ್ಲಿ ಕೇಂದ್ರ ಗೃಹ ಸಚಿವ ಅಮಿತ್ ಶಾ, ಡಾ. ಸಿಂಗ್ ಅವರ ಸ್ಮಾರಕಕ್ಕೆ ಸ್ಥಳವನ್ನು ನಿಗದಿಪಡಿಸಲಾಗುವುದು ಎಂದು ಹೇಳಿದ್ದಾರೆ. ಅಂತ್ಯಕ್ರಿಯೆ ಮತ್ತು ಇತರ ವಿಧಿವಿಧಾನಗಳು ಮುಂದುವರಿಯಲಿದೆ. ಸ್ಮಾರಕಕ್ಕೆ ಜಾಗವನ್ನು 2-3 ದಿನಗಳಲ್ಲಿ ನಿರ್ಧರಿಸಲಾಗುವುದು ಎಂದು ಶಾ ಹೇಳಿದ್ದರು. ಇದಕ್ಕೆ ಕಾಂಗ್ರೆಸ್ ತೀವ್ರ ಆಕ್ಷೇಪ ವ್ಯಕ್ತಪಡಿಸಿದೆ.

ಮನಮಹೋಹನ್ ಸಿಂಗ್ ಅಂತ್ಯಕ್ರಿಯೆ ದೆಹಲಿಯ ನಿಗಮಬೋಧ್ ಘಾಟ್‌ನಲ್ಲಿ ನೆರವೇರಲಿದೆ.

**ಸಿಖ್ ಸಮುದಾಯದ ಏಕೈಕ ಪ್ರಧಾನಿಗೆ ಅವಮಾನ:** ಮಾಜಿ ಪ್ರಧಾನಿ ಮನಮೋಹನ್ ಸಿಂಗ್ ಅಂತ್ಯಕ್ರಿಯೆ ಮತ್ತು ಸ್ಮಾರಕಕ್ಕೆ ಸ್ಥಳ ನಿಗದಿಪಡಿಸದಿರುವುದು ಭಾರತದ ಮೊದಲ ಸಿಖ್ ಪ್ರಧಾನಿಗೆ ಮಾಡುತ್ತಿರುವ ಉದ್ದೇಶಪೂರ್ವಕ ಅವಮಾನವಾಗಿದೆ ಎಂದು ಕಾಂಗ್ರೆಸ್ ಟೀಕಿಸಿದೆ. ರಾಜ್‌ಘಾಟ್ ಬಳಿಯ ರಾಷ್ಟ್ರೀಯ ಸ್ಮಾರಕದಲ್ಲಿ ಮನಮೋಹನ್ ಸಿಂಗ್ ಅವರ ಅಂತ್ಯಕ್ರಿಯೆಯನ್ನು ಮಾಡಲು ಏಕೆ ಅನುಮತಿ ಇಲ್ಲ ಎಂದು ಕಾಂಗ್ರೆಸ್ ಪ್ರಶ್ನಿಸಿದೆ.

**ಸರ್ಕಾರದ ನಿರ್ಧಾರ ಒಪ್ಪಿಕೊಂಡಿರುವ ಸಿಂಗ್ ಕುಟುಂಬ:** ಕೇಂದ್ರ ಸಚಿವ ಸಂಪುಟ ಸಭೆ ಶುಕ್ರವಾರ ನಡೆದಿತ್ತು. ಸಭೆಯಲ್ಲಿ ಮನಮೋಹನ್ ಸಿಂಗ್ ಅವರಿಗೆ 2 ನಿಮಿಷ ಮೌನಾಚರಣೆ ಮಾಡುವ ಮೂಲಕ ಶ್ರದ್ಧಾಂಜಲಿ ಸಲ್ಲಿಸಿ ಸಂತಾಪ ಸೂಚಕ ನಿರ್ಣಯವನ್ನು ಅಂಗೀಕರಿಸಲಾಯಿತು. ಮೂಲಗಳ ಪ್ರಕಾರ, ಈ ಸಭೆಯ ನಂತರ ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರೇ ಮನಮೋಹನ್ ಸಿಂಗ್ ಕುಟುಂಬಕ್ಕೆ ಸ್ಮಾರಕ ನಿರ್ಮಾಣದ ಬಗ್ಗೆ ಮಾಹಿತಿ ನೀಡಿದರು. ಪುಟ 2

















## ಇಂದು ಅಂತ್ಯಕ್ರಿಯೆ

**ನವದೆಹಲಿ:** ದೇಶಕಂಡ ಖ್ಯಾತ ಅರ್ಥಶಾಸ್ತ್ರಜ್ಞ, ಮಾಜಿ ಪ್ರಧಾನಿ ಡಾ. ಮನಮೋಹನ್ ಸಿಂಗ್ ನಿಧನರಾಗಿದ್ದು, ಅವರ ಅಂತ್ಯಕ್ರಿಯೆ ದೆಹಲಿಯ ನಿಗಮಬೋಧ್ ಘಾಟ್‌ನಲ್ಲಿ ಸಕಲ ಸರ್ಕಾರಿ ಗೌರವಗಳೊಂದಿಗೆ ಕೆಲವೇ ಕ್ಷಣಗಳಲ್ಲಿ ನೆರವೇರಲಿದೆ. ಸದ್ಯ ದೆಹಲಿಯ ಎಐಸಿಸಿ ಪ್ರಧಾನ ಕಚೇರಿಯಿಂದ ಸಿಂಗ್ ಪಾರ್ಥಿವ ಶರೀರವನ್ನು ಮೆರವಣಿಗೆ ಮೂಲಕ ನಿಗಮಬೋಧ್ ಘಾಟ್‌ಗೆ ಕೊಂಡೊಯ್ಯಲಾಗುತ್ತಿದೆ.



ದೇಶದ ಗಣ್ಯಾತಿಗಣ್ಯರು ಅವರ ಅಗಲಿಕೆಗೆ ಸಂತಾಪ ವ್ಯಕ್ತಪಡಿಸಿದ್ದಾರೆ. ಏಳು ದಿನ ಶೋಕಾಚರಣೆಗೆ ಸರ್ಕಾರ ನಿರ್ಧರಿಸಿದೆ. ಕೇಂದ್ರ ಸಚಿವರು, ಸಂಸದರು, ಹಿರಿಯ ರಾಜಕಾರಣಿಗಳು ಅವರ ಪಾರ್ಥಿವ ಶರೀರದ ದರ್ಶನ ಪಡೆಯುತ್ತಿದ್ದಾರೆ. ಇಂದು ಮನಮೋಹನ್ ಸಿಂಗ್ ಅವರ ಅಂತ್ಯಕ್ರಿಯೆ ನಡೆಯಲಿದೆ. ಅದಕ್ಕೂ ಮುನ್ನ ಸಾರ್ವಜನಿಕರು, ಪಕ್ಷದ ಕಾರ್ಯಕರ್ತರಿಗೆ ದರ್ಶನಕ್ಕೆ ಅವಕಾಶ ಮಾಡಿಕೊಡಲಾಗಿದೆ.

ವಯೋಸಹಜ ಅನಾರೋಗ್ಯ ಕಾರಣದಿಂದ ಕೊನೆಯುಸಿರೆಳೆದ ಮಾಜಿ ಪ್ರಧಾನಿ ಮನಮೋಹನ್ ಸಿಂಗ್ ಅವರ ಅಂತಿಮ ಸಂಸ್ಕಾರ ಇಂದು ನಡೆಯಲಿದೆ. ದೆಹಲಿಯಲ್ಲಿರುವ ನಿಗಮ್ ಬೋಧ ಘಾಟ್‌ನಲ್ಲಿ ಬೆಳಗ್ಗೆ 11:45 ಕ್ಕೆ ಅವರ ಅಂತ್ಯಕ್ರಿಯೆ ನಡೆಯಲಿದೆ. ಪುಟ 2

## ಮುನಿರತ್ನ ವಿರುದ್ಧ ಅತ್ಯಾಚಾರ, ಹನಿಟ್ರ್ಯಾಪ್ ಆರೋಪ ಸಾಬೀತು ಚಾರ್ಜ್‌ಶೀಟ್ ಸಲ್ಲಿಕೆ

**ಬೆಂಗಳೂರು:** ರಾಜರಾಜೇಶ್ವರಿ ನಗರ ಕ್ಷೇತ್ರದ ಬಿಜೆಪಿ ಶಾಸಕ ಹಾಗೂ ಮಾಜಿ ಸಚಿವ ಮುನಿರತ್ನಗೆ ಮತ್ತೊಂದು ಸಂಕಷ್ಟ ಎದುರಾಗಿದೆ. ಶಾಸಕ ಮುನಿರತ್ನ ವಿರುದ್ಧ ಕೇಳಿಬಂದಿರುವ ಅತ್ಯಾಚಾರ, ಹನಿಟ್ರ್ಯಾಪ್ ಆರೋಪ ತನಿಖೆಯಲ್ಲಿ ರುಜುವಾತಾಗಿದೆ



ಎಂದು ನಗರದ ಜನಪ್ರತಿನಿಧಿಗಳ ವಿಶೇಷ ನ್ಯಾಯಾಲಯಕ್ಕೆ ಸಿಐಡಿ ವಿಶೇಷ ತನಿಖಾ ತಂಡ ಆರೋಪ ಪಟ್ಟಿ ಸಲ್ಲಿಸಿದೆ.

ತಮ್ಮ ವಿರೋಧಿಗಳನ್ನು ಹೆಚ್‌ಐವಿ-ಏಡ್ಸ್ ಪೀಡಿತರ ಮೂಲಕ ಹನಿಟ್ರ್ಯಾಪ್ ಬಲಗೆ ಬೀಳಿಸಿ ಏಡ್ಸ್ ಹರಡುವಿಕೆಗೆ ಶಾಸಕ ಮುನಿರತ್ನ ದುಷ್ಕೃತ್ಯ ಎಸಗಿದ್ದರು ಎಂದು ಎಸ್‌ಐಟಿ ಸಲ್ಲಿಸಿದ ಚಾರ್ಜ್‌ಶೀಟ್‌ನಲ್ಲಿ ಉಲ್ಲೇಖವಾಗಿದೆ. ಶಾಸಕ ಮುನಿರತ್ನ ಕೃತ್ಯಕ್ಕೆ ನೆರವು ನೀಡಿದ ಆರೋಪದ ಹೊತ್ತಿದ್ದ ಪ್ರಕರಣದ ಎ3 ಸುಧಾಕರ್, ಎ7 ಪಿ. ಶ್ರೀನಿವಾಸ್ ಮತ್ತು ಎ8 ಇನ್ಸ್‌ಪೆಕ್ಟರ್ ಐಯ್ಯಣ್ಣ ರೆಡ್ಡಿ ವಿರುದ್ಧ ದಾಖಲಾದ ಆಪಾದನೆ ಕೂಡ ತನಿಖೆಯಲ್ಲಿ ಸಾಬೀತಾಗಿದೆ. ಸದ್ಯ ಇನ್ಸ್‌ಪೆಕ್ಟರ್ ಬಿ. ಐಯ್ಯಣ್ಣ ರೆಡ್ಡಿಯನ್ನು ಎಸ್ ಐಟಿ ಪೊಲೀಸರು ಬಂಧಿಸಿದ್ದಾರೆ.

ಸೆಪ್ಟೆಂಬರ್ 18ರಂದು ಕಗ್ಗಲೀಪುರ ಪೊಲೀಸ್ ಠಾಣೆಯಲ್ಲಿ ಮಹಿಳೆಯೊಬ್ಬರು ಒಟ್ಟು ಏಳು ಜನರ ವಿರುದ್ಧ ಅತ್ಯಾಚಾರ ಆರೋಪ ಮಾಡಿ ದೂರು ದಾಖಲಿಸಿದ್ದರು. ಪ್ರಕರಣದ ತನಿಖೆಗೆ ಸರ್ಕಾರ ಎಸ್‌ಐಟಿ ರಚಿಸಿತ್ತು. ಪುಟ 2

## ವರ್ತೂರು ಪ್ರಕಾಶ್ ಸ್ನೇಹಿತೆ ಶ್ವೇತಗೌಡ ವಂಚನೆ ಪ್ರಕರಣ

# ಕೆಜಿ-ಕೆಜಿ ಚಿನ್ನ ರಿಕವರಿಗೆ ಪೊಲೀಸರ ಹರಸಾಹಸ!

**ಬೆಂಗಳೂರು:** ಮಾಜಿ ಸಚಿವ ವರ್ತೂರು ಪ್ರಕಾಶ್ ಸ್ನೇಹಿತೆ ಶ್ವೇತಗೌಡ ಚಿನ್ನಾಭರಣ ವಂಚನೆ ಪ್ರಕರಣ ಪೊಲೀಸರಿಗೆ ದೊಡ್ಡ ತಲೆನೋವು ತರಿಸಿದ್ದು, ಕೆಜಿ ಕೆಜಿ ಚಿನ್ನದಲ್ಲಿ ಕೇವಲ 700 ಗ್ರಾಂ ಮಾತ್ರ ಪೊಲೀಸರಿಗೆ ಸಿಕ್ಕಿದೆ ಎಂದು ಹೇಳಲಾಗಿದೆ. ಚಿನ್ನಾಭರಣ ರಿಕವರಿ ಪೊಲೀಸರಿ ಕಷ್ಟಕರವಾಗಿದ್ದು, ಬಾಕಿ ಉಳಿದ ಚಿನ್ನವನ್ನು ಪಡೆಯಲು ಹರಸಾಹಸ ಪಡುವಂತಾಗಿದೆ ಎಂದು ಹೇಳಲಾಗಿದೆ.

ಶ್ವೇತಾ ಗೌಡ ವಿರುದ್ಧ ಒಟ್ಟು 2,960 ಗ್ರಾಂ ಚಿನ್ನಾಭರಣ ಪಡೆದು ವಂಚಿಸಿದ್ದ ಆರೋಪ ಇದೆ. ಆದರೆ, ಇಲ್ಲಿಯವರೆಗೆ ರಿಕವರಿ ಆಗಿದ್ದು ಕೇವಲ 700 ಗ್ರಾಂ



ಮಾತ್ರ. ವರ್ತೂರ್ ಪ್ರಕಾಶ್ ಅವರ ಕಡೆಯಿಂದ 100 ಗ್ರಾಂ ಚಿನ್ನ. ಚನ್ನಾರಾಮ್ ಕಡೆಯಿಂದ 400 ಗ್ರಾಂ ಚಿನ್ನ ಪತ್ತೆಯಾಗಿದೆ. ಅಲ್ಲದೆ ತನಿಖೆ ವೇಳೆ ಅಲ್ಪ ಪ್ರಮಾಣದ ಚಿನ್ನ ಪತ್ತೆಯಾಗಿದ್ದು, ಉಳಿದ ಚಿನ್ನ ಪತ್ತೆಗೆ ಪೊಲೀಸರು ಹರಸಾಹಸ ಪಡುವಂತಾಗಿದೆ.

ಎಸ್ಕೇಪ್ ಆದವರಿಗಾಗಿ ಪೊಲೀಸ್ ಹುಡುಕಾಟ

ಈಗಾಗಲೇ ಶ್ವೇತಾಗೌಡ ಅವರನ್ನು ಕಸ್ಟಡಿಗೆ ಪಡೆದಿರುವ ಪೊಲೀಸರು ಒಂದು ವಾರ ವಿಚಾರಣೆ ನಡೆಸಿದ್ದಾರೆ. ಎಲ್ಲಾ ಚಿನ್ನವನ್ನು ಬಾಗಲಗುಂಟೆಯ ರಾಮ್ ದೇವ್ ಜ್ಯುವೆಲ್ಲರಿ ಕೊಟ್ಟಿದ್ದಾಗಿ ಶ್ವೇತಾಗೌಡ ಹೇಳಿಕೆ ನೀಡಿದ್ದಾರೆ ಎನ್ನಲಾಗಿದೆ. ಇನ್ನು ಜ್ಯುವೆಲ್ಲರಿ ಮಾಲೀಕ ಚನ್ನಾರಾಮ್‌ನನ್ನು ಪೊಲೀಸರು ಬಂಧಿಸಿದ್ದು, ಎಸ್ಕೇಪ್ ಆಗಿರುವ ಆತನ ಸಹೋದರರಿಗೆ ಹುಡುಕಾಟ ನಡೆಸುತ್ತಿದ್ದಾರೆ. ಪುಟ 2

## ಬಿಆರ್‌ಟಿ ಹುಲಿ ಸಂರಕ್ಷಿತಾರಣ್ಯದಲ್ಲಿ 2 ಹೊಸ ಸಫಾರಿ ಕೇಂದ್ರ ತೆರೆಯಲು ಚಿಂತನೆ

**ಚಾಮರಾಜನಗರ:** ಕಾಡು ಸುತ್ತುವುದು ಯಾರಿಗಿಷ್ಟ ಇಲ್ಲ ಹೇಳಿ. ವನ್ಯ ಪ್ರಿಯರಿಗೆ ಮತ್ತು ವನ್ಯ ಪ್ರಾಣಿಗಳನ್ನು ಕಣ್ತುಂಬಿಕೊಳ್ಳುವ ಪ್ರವಾಸಿಗರಿಗೆ ಬಿಳಿಗಿರಿರಂಗನ ಬೆಟ್ಟ ಹುಲಿ ಸಂರಕ್ಷಿತಾರಣ್ಯದ ಅಧಿಕಾರಿಗಳು ಸಿಹಿ ಸುದ್ದಿ ನೀಡಿದ್ದಾರೆ. ಚಾಮರಾಜನಗರ ಜಿಲ್ಲೆಯಲ್ಲಿ ಈಗಾಗಲೇ ನಾಲ್ಕು ಪ್ರಸಿದ್ಧ ಸಫಾರಿ ಕೇಂದ್ರಗಳಿವೆ. ಇದಕ್ಕೆ ಮತ್ತೇರಡು ಹೊಸ ಸಫಾರಿ ಕೇಂದ್ರಗಳು ಸೇರ್ಪಡೆಯಾಗುವ ಸಾಧ್ಯತೆ ದಟ್ಟವಾಗಿದೆ.

ಚಾಮರಾಜನಗರ ಜಿಲ್ಲೆಯ ಬಿಳಿಗಿರಿರಂಗನ ಬೆಟ್ಟ ಹುಲಿ ಸಂರಕ್ಷಿತಾರಣ್ಯ ರಾಜ್ಯದಲ್ಲಿ ಪ್ರಸಿದ್ಧ ವನ್ಯ ತಾಣವಾಗಿದೆ. ಈಗಾಗಲೇ ಈ ಅರಣ್ಯದ ಕೆ.ಗುಡಿ ವಲಯದಲ್ಲಿ ಒಂದು ಸಫಾರಿ ಕೇಂದ್ರ ತೆರೆಯಲಾಗಿದೆ. ನೂರಾರು ಪ್ರವಾಸಿಗರು ಭೇಟಿ ನೀಡಿ ಸಫಾರಿಯಲ್ಲಿ ಪಕ್ಷಿಗಳನ್ನು ಕಣ್ತುಂಬಿಕೊಂಡು



ಸಂತಸ ಪಟ್ಟು ಹೋಗುತ್ತಿದ್ದಾರೆ. ಅಲ್ಲದೇ ಈಗಿರುವ ಸಫಾರಿ ಪ್ರದೇಶದಲ್ಲಿ ಹೆಚ್ಚು ಜನರು ಪ್ರಾಣಿಗಳನ್ನು ಕಣ್ತುಂಬಿಕೊಳ್ಳಲೂ ಸಾಧ್ಯವಿಲ್ಲ. ಅದಕ್ಕೆ ಹೊಸದಾಗಿ ಸಫಾರಿ ಕೇಂದ್ರ ಆರಂಭಿಸುವಂತೆ ಡಿಮ್ಯಾಂಡ್ ಹೆಚ್ಚಾಗಿತ್ತು. ಈ ಹಿನ್ನೆಲೆಯಲ್ಲಿ ಎರಡು ಪ್ರದೇಶದಲ್ಲಿ ಹೊಸದಾಗಿ ಸಫಾರಿ ಕೇಂದ್ರ ಸ್ಥಾಪಿಸಲು ಅರಣ್ಯ ಇಲಾಖೆ ಅಧಿಕಾರಿಗಳು ಯೋಜನೆ ಸಿದ್ದಪಡಿಸಿದ್ದಾರೆ. ಪುಟ 2

# ಗಾಂಧಿಗಿರಿ ನಡೆಯಬೇಕಾದ ಕಾಲದಲ್ಲಿ ದಾದಾಗಿರಿ ನಡೆಯುತ್ತಿದೆ



**ಬೆಂಗಳೂರು:** ಗಾಂಧಿಗಿರಿ ನಡೆಯಬೇಕಾದ ಕಾಲದಲ್ಲಿ ದಾದಾಗಿರಿ ನಡೆಯುತ್ತಿದೆ. ಅದಕ್ಕೆ ತಾಜಾ ಉದಾಹರಣೆ ನನ್ನ ಮೇಲೆ ಹಾಗೂ ಮುನಿರತ್ನ ಮೇಲೆ ನಡೆದ ಹಲ್ಲೆ ಎಂದು ಸಿಟಿ ರವಿ ಆಕ್ರೋಶ ವ್ಯಕ್ತಪಡಿಸಿದರು.

ಶಾಸಕ ಮುನಿರತ್ನ ನಿವಾಸಕ್ಕೆ ಆಗಮಿಸಿ ಆರೋಗ್ಯ ವಿಚಾರಿಸಿದ ಬಳಿಕ ಮಾಧ್ಯಮಗಳ ಜೊತೆ ಮಾತನಾಡಿದ ಅವರು, ಇದು ಜಾಸ್ತಿ ದಿನ ನಡೆಯುವುದಿಲ್ಲ. ಮುನಿರತ್ನ ಅವರನ್ನ ಮಾತನಾಡಿಸಲು ಬಂದಿದ್ದೇನೆ. ಕಾಂಗ್ರೆಸ್ ಅಧಿಕಾರ ದುರುಪಯೋಗ ಮಾಡಿಕೊಂಡಿದೆ. ಮುನಿರತ್ನ ಅವರ ಮೇಲೆ ನಡೆದಿರುವ ಹಲ್ಲೆ ದುರಾದೃಷ್ಟಕರ. ಪ್ರಜಾಪ್ರಭುತ್ವದಲ್ಲಿ ಆಯ್ಕೆ ಆಗಿರುವ ಶಾಸಕರ ಮೇಲೆ ಈ ರೀತಿ ಆಗಬಾರದು ಎಂದರು.

ನನ್ನ ವಿಚಾರವನ್ನು ಮೂರು ಆಯಾಮದಲ್ಲಿ ನೋಡಬೇಕು. ಆರ್ಟಿಕಲ್ 194 ಪ್ರಕಾರ ಪರಮಾಧಿಕಾರವನ್ನು ಸಭಾಪತಿಗಳಿಗೆ ಕೊಡಲಾಗಿದೆ. ಸಭಾಪತಿಗಳ ನಿರ್ಣಯ ಅವರಿಗೆ ಬಿಟ್ಟಿದ್ದು. ಆದರೆ ಈ ಸರ್ಕಾರ ಕಾನೂನು ದುರ್ಬಳಕೆ ಮಾಡಿದೆ. ನನಗೆ ನೋಟಿಸ್ ಕೊಟ್ಟಿರಲಿಲ್ಲ, ಅಲ್ಲದೆ ಬಂಧನ ಮಾಡಿ ಅಮಾನವೀಯವಾಗಿ ನಡೆಸಿಕೊಂಡಿದ್ದಾರೆ ಎಂದು ದೂರಿದರು.

ಬಂಧನದ ನಂತರ ಮೂಲಭೂತ ಹಕ್ಕನ್ನು ಉಲ್ಲಂಘನೆ ಮಾಡಲಾಗಿದೆ. ನನ್ನ ಜೀವನದಲ್ಲಿ ಹೋರಾಟದ ಮೂಲಕ ಬಂದವನು ಬೆನ್ನು ತೋರಿಸಿ ಓಡಿಹೋದವನಲ್ಲ. ಇಂದಿರಾಗಾಂಧಿ ಅಧಿಕಾರವನ್ನ ದುರುಪಯೋಗ ಮಾಡಿಕೊಂಡು ತುರ್ತುಪರಿಸ್ಥಿತಿ ನಿರ್ಮಾಣ ಮಾಡಿದರು. ಈ ಗೂಂಡಾಗಿರಿ ಬಹಳ ದಿನ ನಡೆಯುವುದಿಲ್ಲ ಎಂದು ಕಿಡಿಕಾರಿದರು.

ನಾನು ಬೆನ್ನು ತೋರಿಸಿ ಓಡಿ ಹೋಗುವುದಿಲ್ಲ. ಆ ಅಭ್ಯಾಸ ನನಗಿಲ್ಲ. ತಪ್ಪು ಮಾಡಿದವರಿಗೆ ಶಿಕ್ಷೆ ಆಗಬೇಕು. ತುರ್ತು ಪರಿಸ್ಥಿತಿ ಹೇರಿದ್ದ ಇಂದಿರಾ ಗಾಂಧಿ ಅವರ ಪರಿಸ್ಥಿತಿ ಏನಾಯ್ತು? ಈಗಾಗಲೇ ನಾನು ಕೇಂದ್ರದ ಎಲ್ಲರ ಗಮನಕ್ಕೆ ತಂದಿದ್ದೇನೆ. ಪಕ್ಷ ನನ್ನ ಜೊತೆ ಇದೆ ಎಂದರು.

## ಮೂವರು ಕಿಲಾಡಿ ಕಳ್ಳಿಯರು ಅರೆಸ್ಟ್, ಒಬ್ಬಳು ಎಸ್ಕೇಪ್



**ಚಿಕ್ಕಬಳ್ಳಾಪುರ:** ಬುರ್ಖಾ ಧರಿಸಿಕೊಂಡು ಬಸ್‌ಗೆ ಹತ್ತಿದ್ರೆ ಸಾಕು ಆ ಮೂರ್ನಾಲ್ಕು ಮಂದಿ ಮಹಿಳೆಯರು ಬಸ್‌ನಲ್ಲಿ ಮಹಿಳೆಯರ ಕತ್ತಲ್ಲಿರೋ ಚಿನ್ನದ ಸರ ಹಾಗೂ ಬ್ಯಾಗ್‌ಗಳಲ್ಲಿರೋ ಕ್ಯಾಷ್ ಎಗರಿಸದೇ ಬಸ್‌ನಿಂದ ಕೆಳಗೆ ಇಳಿಯುತ್ತಿರಲಿಲ್ಲ. ಇಂತಹ ಖತರ್ನಾಕ್ ಬುರ್ಖಾಧಾರಿ ಮೂವರು ಕಿಲಾಡಿ ಕಳ್ಳಿಯರನ್ನ ಚಿಕ್ಕಬಳ್ಳಾಪುರ ಜಿಲ್ಲೆಯ ಗೌರಿಬಿದನೂರು ಪೊಲೀಸರು ಬಂಧಿಸಿದ್ದಾರೆ.

ಅಂದಹಾಗೆ ಕಲಬುರಗಿ ಮೂಲದ ರೇಖಾ ಬಾಯಿ, ಕರೀನಾ, ರೋಜಾ ಬಂಧಿತರಾಗಿದ್ದು ಪುಷ್ಪಾ ತಲೆಮರೆಸಿಕೊಂಡಿದ್ದಾಳೆ. ಅಂದಹಾಗೆ ಈ ನಾಲ್ವರಲ್ಲಿ ಪುಷ್ಪಾ ಹಾಗೂ ರೇಖಾ ಅಕ್ಕ ತಂಗಿಯರಾಗಿದ್ದು, ರೋಜಾ ಹಾಗೂ ಕರೀನಾ ಸಹ ಸಹೋದರಿಯರಾಗಿದ್ದಾರೆ. ನಾಲ್ವರು ಒಂದೇ ಕುಟುಂಬದವರಾಗಿದ್ದು ಬಸ್ ನಿಲ್ದಾಣ ಜನಸಂದಣಿ ಪ್ರದೇಶಗಳಲ್ಲಿ ಕಳವು ಮಾಡೋದೆ ಇವರ ಕಾಯಕವಾಗಿತ್ತು.

ಕಳೆದ ನವೆಂಬರ್ 16 ರಂದು ಚಿಕ್ಕಬಳ್ಳಾಪುರ ಜಿಲ್ಲೆಯ ಗೌರಿಬಿದನೂರು ಬಸ್ ನಿಲ್ದಾಣದಲ್ಲಿ ಶಾಂತಕುಮಾರಿ ಎಂಬಾಕೆ ಬೆಂಗಳೂರು ಬಸ್ ಹತ್ತುವ ಸಮಯದಲ್ಲಿ ಆಕೆಯ ಕತ್ತಿನಲ್ಲಿದ್ದ 50 ಗ್ರಾಂ ತೂಕದ 2 ಎಳೆ ಚಿನ್ನದ ಸರ ಕಳವು ಮಾಡಿದ್ರು. ಅದೇ ದಿನ ರತ್ನಮ್ಮ ಎಂಬಾಕೆಯ ಬ್ಯಾಗ್ ನಲ್ಲಿದ್ದ 1 ಲಕ್ಷ ಹಣ ಸಹ ಎಗರಿಸಿ ಎಸ್ಕೇಪ್ ಆಗಿದ್ರು. ಈ ಸಂಬಂಧ ಎರಡು ಪ್ರಕರಣಗಳ ದೂರು ಪಡೆದ ಪೊಲೀಸರು ಸಿಸಿಟಿವಿಗಳನ್ನ ಪರಿಶೀಲನೆ ಮಾಡಿದಾಗ ನಾಲ್ವರು ಬುರ್ಖಾಧಾರಿ ಮಹಿಳೆಯರ ಮೇಲೆ ಅನುಮಾನ ಮೂಡಿತ್ತು.

ನಂತರ ಇದೇ ಗೌರಿಬಿನದೂರು ಬಸ್ ನಿಲ್ದಾಣದಲ್ಲಿ ಕಳೆದ 3 ದಿನಗಳ ಹಿಂದೆ ಮತ್ತೆ ಕಳ್ಳತನಕ್ಕೆ ಹೊಂಚು ಹಾಕುತ್ತಿದ್ದಾಗ ರೆಡ್ ಹ್ಯಾಂಡಾಗಿ ಪೊಲೀಸರು ಮಹಿಳೆಯರನ್ನ ಬಂಧಿಸಿದ್ದಾರೆ. ಇನ್ನೂ ಸಿಸಿಟಿವಿ ಪರಿಶೀಲನೆ ವೇಳೆ ಮಹಿಳೆ ಬುರ್ಖಾ ಮೇಲೆ ಹಾಕಿದ್ದ ವೇಲ್ ಗಮನಿಸಿದ್ದ ಪೊಲೀಸರು ಮತ್ತೆ ಅದೇ ವೇಲ್ ಧರಿಸಿ ಮಹಿಳೆ ಇರೋದನ್ನ ಕಂಡು ಅನುಮಾನಗೊಂಡು ಬಂಧಿಸಿದ್ರು. ಬಳಿಕ ವಿಚಾರಣೆ ವೇಳೆ ಸತ್ಯ ಬಾಯ್ಬಿಟ್ಟಿದ್ದಾರೆ. ಕಳ್ಳತನವನ್ನೇ ವೃತ್ತಿಯಾಗಿಸಿಕೊಂಡಿದ್ದ ಈ ಕಳ್ಳಿಯರು ರಾಜ್ಯದ ನಾನಾ ಕಡೆ ಕಳ್ಳತನ ಮಾಡಿದ್ದಾರೆ. ಇನ್ನೂ ಬಂಧಿತರಿಂದ ಕಳವು ಮಾಡಿದ್ದ ಚಿನ್ನ ಹಾಗೂ ನಗದು ವಶಕ್ಕೆ ಪಡೆಯಲಾಗಿದೆ.

## ಎಲ್‌ಐಸಿ ಹಣಕ್ಕಾಗಿ ತಂದೆಯನ್ನೆ ಕೊಂದ ಮಗ

**ಮೈಸೂರು:** ಎಲ್‌ಐಸಿ ಹಣಕ್ಕಾಗಿ ಮಗ ತಂದೆಯನ್ನೇ ಕೊಂದಿರುವ ಘಟನೆ ಮೈಸೂರು ಜಿಲ್ಲೆಯ ಪಿರಿಯಾಪಟ್ಟಣ ತಾಲೂಕಿನ ಕೊಪ್ಪ ಸಮೀಪದ ಗೆರೋಸಿ ಕಾಲೋನಿಯಲ್ಲಿ ನಡೆದಿದೆ.

» **ಸಾವಿನ ಸುದ್ದಿ ತಿಳಿದು ಇನ್ನೊಬ್ಬ ಮಗ ಆತ್ಮಹತ್ಯೆ!**

ಅಪ್ಪ ಕೊಲೆಯಾದ ವಿಚಾರ ತಿಳಿದು ಇನ್ನೊಬ್ಬ ಮಗ ಆತ್ಮಹತ್ಯೆ ಮಾಡಿಕೊಂಡಿದ್ದಾನೆ. ಅಪ್ಪ ಅಣ್ಣಪ್ಪನ ಹೆಸರಿನಲ್ಲಿ ಮಗ ಪಾಂಡು ವಿಮೆ ಮಾಡಿಸಿದ್ದ. ಈ ವಿಮೆ ಹಣಕ್ಕಾಗಿ ಹಿಂಬದಿಯಿಂದ ತಲೆಗೆ ದೊಣ್ಣೆಯಲ್ಲಿ ಹೊಡೆದು ಕೊಂದಿದ್ದಾನೆ.

ಬಳಿಕ ಅಪರಿಚಿತ ವಾಹನ ಡಿಕ್ಕಿಯಾಗಿ ತಮ್ಮ ತಂದೆ ಸಾವನ್ನಪ್ಪಿದ್ದಾರೆ ಪಾಂಡು ಕಥೆ ಕಟ್ಟಿದ್ದ. ಬೈಲುಕುಪ್ಪೆ ಪೊಲೀಸರಿಗೂ ಪಾಂಡು ದೂರು ಕೊಟ್ಟಿದ್ದ. ಅಪರಿಚಿತ ವಾಹನ ಡಿಕ್ಕಿ ಓರ್ವ ಸಾವು ಅಂತಾ ದೂರು ದಾಖಲಾಗಿತ್ತು. ದೂರು ದಾಖಲಿಸಿಕೊಂಡು ಅನುಮಾನ ಬಂದ ಹಿನ್ನಲೆಯಲ್ಲಿ ಪಾಂಡುನನ್ನು ವಶಕ್ಕೆ ಪಡೆದು ಪೊಲೀಸರು ವಿಚಾರಣೆ ಮಾಡಿದ್ದಾಗ ಇನ್ಸೂರೆನ್ಸ್ ಪಾಲಿಸಿ ಹಣಕ್ಕಾಗಿ ಕೊಂದಿರೋದಾಗಿ ತಪ್ಪೊಪ್ಪಿಗೆ ನೀಡಿದ್ದಾನೆ.

## ವಕ್ಫ್ ಭೂಮಿ ವಿವಾದ
# ಕರ್ನಾಟಕಕ್ಕೆ ಹೆಚ್ಚಿನ ಮಾಹಿತಿ ಕೇಳಿದ ಜೆಪಿಸಿ




**ನವದೆಹಲಿ/ಬೆಂಗಳೂರು:** ವಕ್ಫ್ ಬೋರ್ಡ್ ಆಸ್ತಿ ವಿವಾದ ಕರ್ನಾಟಕದಲ್ಲಿ ಸಾಕಷ್ಟು ಸದ್ದು ಮಾಡಿದೆ. ವಕ್ಫ್ (ತಿದ್ದುಪಡಿ) ಮಸೂದೆ ಪರಿಶೀಲಿಸುತ್ತಿರುವ ಜಂಟಿ ಸಂಸದೀಯ ಸಮಿತಿಗೆ ಕರ್ನಾಟಕದ ಅಧಿಕಾರಿಗಳು ಗುರುವಾರ ಮಾಹಿತಿ ನೀಡಿದರು. ಕರ್ನಾಟಕ ನೀಡಿದ ಮಾಹಿತಿಗೆ ಸಮಿತಿ ತೀವ್ರ ಅಸಮಾಧಾನ ವ್ಯಕ್ತಪಡಿಸಿ, 15 ದಿನಗಳಲ್ಲಿ ವಿವರವಾದ ಉತ್ತರ ನೀಡುವಂತೆ ತಾಕೀತು ಮಾಡಿತು.

ವಕ್ಫ್ ಮಂಡಳಿಗಳು ಹಕ್ಕು ಸಾಧಿಸಿರುವ ಆಸ್ತಿಗಳು ಮತ್ತು ಸರ್ಕಾರ ಅಥವಾ ಸರ್ಕಾರಿ ಸಂಸ್ಥೆಗಳ ಅಧಿಕೃತ ಸ್ವಾಧೀನದಲ್ಲಿರುವ ವಕ್ಫ್ ಆಸ್ತಿಗಳ ವಿವರ ಸಲ್ಲಿಸುವಂತೆ ವಿವಿಧ ರಾಜ್ಯಗಳಿಗೆ ಜೆಪಿಸಿ ಸೂಚಿಸಿತ್ತು. ಜೆಪಿಸಿ ಅಧ್ಯಕ್ಷ ಜಗದಂಬಿಕಾ ಪಾಲ್ ನೇತೃತ್ವದ ಸಮಿತಿಯು ಕರ್ನಾಟಕದ ಅಭಿಪ್ರಾಯವನ್ನು ಆಲಿಸಿತು. ರಾಜ್ಯ ವಕ್ಫ್ ಮಂಡಳಿಯ ಮುಖ್ಯ ಕಾರ್ಯನಿರ್ವಾಹಣಾಧಿಕಾರಿ ಜಿಲಾನಿ ನೇತೃತ್ವದ ಅಧಿಕಾರಿಗಳ ತಂಡವು ಮಾಹಿತಿ ನೀಡಿದರು.

ಆದರೆ, ಕರ್ನಾಟಕದ ನಿಯೋಗ ನೀಡಿದ ಮಾಹಿತಿ ತೃಪ್ತಿಕರವಾಗಿಲ್ಲ. ಪ್ರತಿಕ್ರಿಯೆಯನ್ನು ಒದಗಿಸಲು 15 ದಿನಗಳ ಕಾಲಾವಕಾಶ ನೀಡಿದ್ದೇವೆ ಮತ್ತು ಅಗತ್ಯವಿದ್ದರೆ ಮತ್ತೆ ಕರೆಯುತ್ತೇವೆ ಎಂದು ಜಗದಂಬಿಕಾ ಪಾಲ್ ಸುದ್ದಿಗಾರರಿಗೆ ತಿಳಿಸಿದ್ದಾರೆ ಎಂದು ವರದಿಯಾಗಿದೆ.

ಬೆಳಗಾವಿಯಲ್ಲಿ ನಡೆದ ಚಳಿಗಾಲ ಅಧಿವೇಶನದಲ್ಲಿ ಕಂದಾಯ ಸಚಿವ ಕೃಷ್ಣ ಭೈರೇಗೌಡ ರಾಜ್ಯದಲ್ಲಿನ ವಕ್ಫ್ ಆಸ್ತಿ ಬಗ್ಗೆ ಮಾಹಿತಿ ನೀಡಿದ್ದರು. 2004 ರಿಂದ ಇಲ್ಲಿಯವರೆಗೆ 9800 ಆಸ್ತಿ ವಕ್ಫ್ ಅಂತ ನಮೂದು ಆಗಿದೆ. 9,800 ವಕ್ಫ್ ಆಸ್ತಿಯಲ್ಲಿ 11,204 ರೈತರ ಭೂಮಿ ವಕ್ಫ್ ಅಂತ ಆಗಿದೆ. 11,204 ರಲ್ಲಿ 9,121 ಮುಸ್ಲಿಂ ರೈತರ ಭೂಮಿ ವಕ್ಫ್ ಅಂತ ನಮೂದು ಆಗಿದೆ. 2,080 ಹಿಂದೂ ಭೂಮಿ ವಕ್ಫ್ ಅಂತ ಆಗಿದೆ. ಶೇ85 ರಷ್ಟು ಮುಸ್ಲಿಂ ರೈತರ ಭೂಮಿ ವಕ್ಫ್ ಅಂತ ಆಗಿದೆ. ಶೇ15 ರಷ್ಟು ಮಾತ್ರ ಹಿಂದೂ ರೈತರ ಭೂಮಿ ವಕ್ಫ್ ಅಂತ ನಮೂದು ಆಗಿದೆ ಎಂದು ತಿಳಿಸಿದ್ದರು.

ಕರ್ನಾಟಕದಲ್ಲಿ ವಕ್ಫ್ ಬೋರ್ಡ್ ಆಸ್ತಿ ವಿವಾದ ಸೃಷ್ಟಿಯಾಗಿತ್ತು. ವಿಜಯಪುರ, ಬೀದರ್ ಸೇರಿದಂತೆ ಅನೇಕ ಜಿಲ್ಲೆಗಳಲ್ಲಿನ ರೈತರ ಜಮೀನಿನ ಪಹಣಿಯಲ್ಲಿ ವಕ್ಫ್ ಅಂತ ನಮೂದು ಆಗಿತ್ತು. ಇದರಿಂದ ಆಕ್ರೋಶಗೊಂಡಿದ್ದ ರೈತರು ಸರ್ಕಾರದ ವಿರುದ್ಧ ಆಕ್ರೋಶಗೊಂಡಿದ್ದರು. ಇನ್ನು, ರಾಜ್ಯ ಬಿಜೆಪಿ, ಕಾಂಗ್ರೆಸ್ ಸರ್ಕಾರ ರೈತರ ಭೂಮಿಯನ್ನು ನುಂಗಲು ಹೊರಟಿದೆ ಎಂದು ಆರೋಪ ಮಾಡಿತ್ತು. ವಿಜಯಪುರ ಬಿಜೆಪಿ ಶಾಸಕ ಬಸನಗೌಡ ಪಾಟೀಲ್ ಯತ್ನಾಳ್ ವಕ್ಫ್ ಬೋರ್ಡ್ ವಿರುದ್ಧ ಅಹೋರಾತ್ರಿ ಧರಣಿ ನಡೆಸಿದ್ದರು.

## ಗುತ್ತಿಗೆದಾರ ಸಚಿನ್ ಅತ್ಮಹತ್ಯೆ ಕೇಸ್ ಇಬ್ಬರು ಹೆಡ್‌ಕಾನ್‌ಸ್ಟೇಬಲ್ ಸಸ್ಪೆಂಡ್


ಸಚಿನ್ ಪಾಂಚಾಳ, ಮೃತ ಗುತ್ತಿಗೆದಾರ

**ಬೀದರ್:** ಗುತ್ತಿಗೆದಾರ ಸಚಿನ್ ಪಾಂಚಾಳ ಆತ್ಮಹತ್ಯೆ ಪ್ರಕರಣಕ್ಕೆ ಸಂಬಂಧಿಸಿದಂತೆ ಕರ್ತವ್ಯಲೋಪ ಎಸಗಿದ ಬೀದರ್ ಗಾಂಧಿಗಂಜ್ ಪೊಲೀಸ್ ಠಾಣೆಯ ಇಬ್ಬರು ಹೆಡ್ ಕಾನ್‌ಸ್ಟೇಬಲ್‌ಗಳನ್ನು ಸಸ್ಪೆಂಡ್ ಮಾಡಲಾಗಿದೆ.

ಶ್ಯಾಮಲಾ ಮತ್ತು ರಾಜೇಶ್ ಅವರನ್ನು ಎಸ್‌ಪಿ ಎಸ್‌ಪಿ ಪ್ರದೀಪ್ ಗುಂಟಿ ಅಮಾನತುಗೊಳಿಸಿ ಆದೇಶ ಮಾಡಿದ್ದಾರೆ.

ಗುರುವಾರ (ಡಿ.26) ಡೆತ್‌ನೋಟ್ ಬರೆದು ಗುತ್ತಿಗೆದಾರ ಸಚಿನ್ ಪಾಂಚಾಳ ಸಾಮಾಜಿಕ ಜಾಲತಾಣದಲ್ಲಿ ಅಪ್ಲೋಡ್ ಮಾಡಿದ್ದರು. ಡೆತ್ ನೋಟ್ ನೋಡಿ ಗಾಬರಿಯಾದ ಕುಟುಂಬಸ್ಥರು ಬೀದರ್‌ನ ಗಾಂಧಿಗಂಜ್ ಪೊಲೀಸ್ ಠಾಣೆಗೆ ಧಾವಿಸಿದ್ದರು.

ಸಚಿನ್ ಪತ್ತೆ ಮಾಡುವಂತೆ ದೂರು ನೀಡಲು ಸಹೋದರ ಹಾಗೂ ಸಹೋದರಿ ಠಾಣೆಗೆ ಬಂದಿದ್ದಾರೆ. ಈ ವೇಳೆ ದೂರುದಾರರ ಮನವಿಗೆ ಹೆಡ್ ಕಾನ್‌ಸ್ಟೇಬಲ್ ಸರಿಯಾಗಿ ಸ್ಪಂದಿಸಿರಲಿಲ್ಲ. ಹೀಗಾಗಿ ಪೊಲೀಸರು ದೂರು ದಾಖಲಿಸಿಕೊಳ್ಳದೇ ನಿರ್ಲಕ್ಷ್ಯಿಸಿದ್ದಕ್ಕೆ ನಮ್ಮಣ್ಣ ಸಾವನ್ನಪ್ಪಿದ್ದಾನೆ ಎಂದು ಎಸ್‌ಪಿ ಮುಂದೆ ಕುಟುಂಬಸ್ಥರು ಅಳಲು ತೋಡಿಕೊಂಡಿದ್ದರು.

ಕರ್ತವ್ಯಲೋಪ ಆರೋಪ ಹಿನ್ನೆಲೆಯಲ್ಲಿ ಕಾನ್‌ಸ್ಟೇಬಲ್‌ಗಳನ್ನು ಅಮಾನತು ಮಾಲಾಗಿದೆ ಎಂದು ಪಬ್ಲಿಕ್ ಟಿವಿಗೆ ಬೀದರ್ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಪ್ರದೀಪ್ ಗುಂಟಿ ಮಾಹಿತಿ ನೀಡಿದ್ದಾರೆ.

**ಏನಿದು ಪ್ರಕರಣ?:** ಕಲಬುರಗಿ ಜಿಲ್ಲಾ ಉಸ್ತುವಾರಿ ಸಚಿವ ಪ್ರಿಯಾಂಕ್ ಖರ್ಗೆ ಆಪ್ತ ರಾಜು ಕಪನೂರು ಸೇರಿದಂತೆ ಎಳು ಜನರ ಮೇಲೆ ಗಂಭೀರ ಆರೋಪ ಮಾಡಿ ಯುವ ಗುತ್ತಿಗೆದಾರ ಸಚಿನ್ ಆತ್ಮಹತ್ಯೆ ಮಾಡಿಕೊಂಡಿದ್ದರು.ಗುರುವಾರ ಬೀದರ್ ನಗರ ಬಸವೇಶ್ವರ ವೃತ್ತದ ಬಳಿಯ ರೈಲ್ವೇ ಹಳಿಗೆ ಬಿದ್ದು ಬಿದ್ದು ಸಚಿನ್ ಆತ್ಮಹತ್ಯೆ ಮಾಡಿಕೊಂಡಿದ್ದಾರೆ.

ಡೆತ್ ನೋಟ್‌ನಲ್ಲಿ ಸಚಿವ ಪ್ರಿಯಾಂಕ್ ಖರ್ಗೆ ಆಪ್ತ ಕಲಬುರಗಿ ಮಹಾನಗರ ಪಾಲಿಕೆಯ ಮಾಜಿ ಕಾರ್ಪೊರೇಟರ್ ರಾಜು ಕಪನೂರು ವಿರುದ್ಧ ಕೆಲ ಗಂಭೀರ ಆರೋಪಗಳನ್ನು ಮಾಡಲಾಗಿದೆ. 5 ಲಕ್ಷ ರೂ. ಹೆಚ್ಚು ಹಣ ಪಡೆದು ಟೆಂಡರ್ ನೀಡದೆ ವಂಚನೆ ಮಾಡಿದ್ದು, ಜೊತೆಗೆ 1 ಕೋಟಿ ರೂ. ಹಣ ನೀಡದಿದ್ದರೆ ಕೊಲೆ ಮಾಡುವುದಾಗಿ ಬೆದರಿಕೆ ಹಾಕಿದ್ದಾರೆ ಎಂದು ರಾಜು ಕಪನೂರು ವಿರುದ್ಧ ಆರೋಪಿಸಲಾಗಿದೆ. ಡೆತ್ ನೋಟ್‌ನಲ್ಲಿ ಕಲಬುರಗಿಯ ಮಾಜಿ ಕಾರ್ಪೊರೇಟ್ ರವಿ ಕಪನೂರು, ನಂದಕುಮಾರ್ ನಾಗಭುಜಂಗೆ, ಗೋರಖನಾಥ್ ಸೇರಿ 6 ಜನರ ವಿರುದ್ಧ ಜೀವ ಬೆದರಿಕೆ ಆರೋಪ ಮಾಡಲಾಗಿದೆ.

## ವ್ಹೀಲಿಂಗ್ ಮಾಡ್ತಾ ಕ್ಯಾಂಟರ್‌ಗೆ ಡಿಕ್ಕಿ ಇಬ್ಬರು ಯುವಕರ ದಾರುಣ ಸಾವು

**ಚಿಕ್ಕಬಳ್ಳಾಪುರ:** ವ್ಹೀಲಿಂಗ್ ಕ್ರೇಜ್‌ಗೆ ಇಬ್ಬರು ಯುವಕರು ಸಾವನ್ನಪ್ಪಿರುವ ದಾರುಣ ಘಟನೆ ಬೆಂಗಳೂರು ಗ್ರಾಮಾಂತರ ಜಿಲ್ಲೆಯ ದೇವನಹಳ್ಳಿ ತಾಲ್ಲೂಕಿನ ವಿಜಯಪುರದಲ್ಲಿ ನಡೆದಿದೆ.

ವಿಜಯಪುರ-ದೇವನಹಳ್ಳಿ ಬೈಪಾಸ್ ರಸ್ತೆಯಲ್ಲಿ ಡಿಯೋ ಗಾಡಿ ಮೂಲಕ ವ್ಹೀಲಿಂಗ್ ಮಾಡುವ ವೇಳೆ ಎದುರಗಡೆ ಬರ್ತಿದ್ದ ಕ್ಯಾಂಟರ್‌ಗೆ ಗಾಡಿ ಡಿಕ್ಕಿಯಾಗಿದೆ. ಅಪಘಾತದಲ್ಲಿ ಬೈಕ್‌ನಲ್ಲಿದ್ದ ಅರ್ಫಾಜ್ ಹಾಗೂ ಮನೋಜ್ ಸ್ಥಳದಲ್ಲೇ ಸಾವನ್ನಪ್ಪಿದ್ದಾರೆ.

ಇನ್ನೂ ಯುವಕರು ವ್ಹೀಲಿಂಗ್ ಮಾಡುತ್ತಿರೋ ದೃಶ್ಯ ರಸ್ತೆ ಬದಿಯ ಅಂಗಡಿಯೊಂದರ ಸಿಸಿ ಟಿವಿಯಲ್ಲಿ ಸೆರೆಯಾಗಿದೆ. ವಿಜಯಪುರ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಪ್ರಕರಣ ನಡೆದಿದೆ. ಮೃತದೇಹಗಳನ್ನ ದೇವನಹಳ್ಳಿ ಖಾಸಗಿ ಆಸ್ಪತ್ರೆಯ ಶವಾಗಾರಕ್ಕೆ ರವಾನೆ ಮಾಡಲಾಗಿದೆ.



## ಹಳ್ಳಕ್ಕೆ ಬಿದ್ದ ಖಾಸಗಿ ಬಸ್
# 42 ಭಕ್ತಾಧಿಗಳ ಸ್ಥಿತಿ ಗಂಭೀರ



**ಆನೇಕಲ್:** ಚಾಲಕನ ನಿಯಂತ್ರಣ ತಪ್ಪಿ ಖಾಸಗಿ ಬಸ್ ಹಳ್ಳಕ್ಕೆ ಬಿದ್ದ ಪರಿಣಾಮ 42 ಭಕ್ತಾಧಿಗಳ ಗಂಭೀರವಾಗಿ ಗಾಯಗೊಂಡಿರುವ ಘಟನೆ ತಮಿಳುನಾಡಿನ ಕೃಷ್ಣಗಿರಿ ಜಿಲ್ಲೆಯಲ್ಲಿ ನಡೆದಿದೆ.

ನಿನ್ನೆ ಬಸ್ ಧರ್ಮಪುರಿ ಸಮೀಪದ ಇಟ್ಟಿಯಂಪಟ್ಟೆ ಗ್ರಾಮದಿಂದ ಹೋಗುತ್ತಿದ್ದ ಓಂ ಶಕ್ತಿ ದೇವಸ್ಥಾನಕ್ಕೆ ತೆರಳುತ್ತಿತ್ತು. ಈ ವೇಳೆ ಕೃಷ್ಣಗಿರಿ ಜಿಲ್ಲೆಯ ಉತಂಗರೈ ಚೆನ್ನಮಲ್ಲೈ ಶಾಲೆ ಬಳಿ ಚಾಲಕನ ನಿಯಂತ್ರಣ ತಪ್ಪಿ ಬಸ್ ಹಳ್ಳಕ್ಕೆ ಬಿದ್ದಿದೆ. ಬಿದ್ದ ಪರಿಣಾಮ ದೇವಸ್ಥಾನಕ್ಕೆ ತೆರಳುತ್ತಿದ್ದ 42 ಭಕ್ತಾದಿಗಳು ಗಂಭೀರವಾಗಿ ಗಾಯಗೊಂಡಿದ್ದಾರೆ.

ತಕ್ಷಣವೇ ಸ್ಥಳೀಯರು ಗಾಯಳುಗಳನ್ನು ಹತ್ತಿರದ ಆಸ್ಪತ್ರೆಗೆ ರವಾನಿಸಿದ್ದು, ಉತಂಗರೈ ಸರ್ಕಾರಿ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾರೆ. ತುಂತುರು ಮಳೆಯಿಂದಾಗಿ ಖಾಸಗಿ ಬಸ್ ಅಪಘಾತಕ್ಕೀಡಾಗಿದ್ದು, ಅಪಘಾತದ ದೃಶ್ಯಗಳು ಸಿಸಿ ಕ್ಯಾಮೆರಾದಲ್ಲಿ ಸೆರೆಯಾಗಿದೆ.

ಸದ್ಯ ಉತಂಗರೈ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

## ಲಕ್ನೋಗೆ ವಿಶೇಷ ರೈಲು

ಈ ರೈಲು ಮಂಡ್ಯ, ಕೆಎಸ್‌ಆರ್ ಬೆಂಗಳೂರು, ಯಶವಂತಪುರ ಜಂಕ್ಷನ್, ತುಮಕೂರು, ಅರಸೀಕೆರೆ ಜಂಕ್ಷನ್, ಕಡೂರು, ಚಿಕ್ಕಜಾಜೂರು ಜಂಕ್ಷನ್, ದಾವಣಗೆರೆ, ಹಾವೇರಿ, ಎಸ್‌ಎಸ್‌ಎಸ್ ಹುಬ್ಬಳ್ಳಿ ಜಂಕ್ಷನ್, ಧಾರವಾಡ, ಬೆಳಗಾವಿ, ಘಟಪ್ರಭಾ, ಮಿರಜ್ ಜಂಕ್ಷನ್, ಸಾಂಗ್ಲಿ, ಕರಡ್, ಪುಣೆ ಜಂಕ್ಷನ್, ದೌಂಡ್ ಕಾರ್ಡ್ ಲೈನ್, ಅಹ್ಮದ್ನಗರ, ಮನ್ಮಾಡ್ ಜಂಕ್ಷನ್, ಭೂಸಾವಲ್ ಜಂಕ್ಷನ್, ಖಾಂಡ್ವಾ, ತಲ್ವಾಡಿಯಾ, ಭೋಪಾಲ್, ಖಾಂಡ್ವಾ, ತಲ್ವಾಡಿಯಾ, ಚನೇರಾ, ಖಾಂಡ್ವಾ, ತಲ್ವಾಡ್ಯ, ಚನೇರಾ, ಖಾಂಡ್ವಾ ನಿಲ್ದಾಣಗಳಲ್ಲಿ ನಿಲ್ಲಲಿದ್ದು, ಪ್ರಯಾಣಿಕರು ಸೇವೆಯನ್ನ ಬಳಸಿಕೊಳ್ಳಬಹುದು.

ವಿಶೇಷ ರೈಲು 11 ಸೆಕೆಂಡ್ ಜನರಲ್ ಕ್ಲಾಸ್ ಬೋಗಿಗಳು, 7 ಸ್ಲೀಪರ್ ಕ್ಲಾಸ್ ಬೋಗಿಗಳು ಮತ್ತು ಎಸ್‌ಎಲ್‌ಆರ್/ಡಿ ಸೇರಿದಂತೆ 20 ಬೋಗಿಗಳನ್ನು ಒಳಗೊಂಡಿರುತ್ತದೆ. ಹೆಚ್ಚಿನ ಮಾಹಿತಿಯು ಭಾರತೀಯ ರೈಲ್ವೆಯ ವೆಬ್‌ಸೈಟ್ ತಿತಿತಿ.ಜಟಿಡಣಡಿಥಿ.ಟಿಜಟಿಚಿಟಿಡಿಚಿಟ.ಠಡಿಚಿ.ಟಿ ನಲ್ಲಿ ಲಭ್ಯವಿದೆ ಎಂದು ಭಾರತೀಯ ರೈಲ್ವೆ ಇಲಾಖೆ ತಿಳಿಸಿದೆ.

## ಮಳೆ ಅಲರ್ಟ್

ಬೆಂಗಳೂರು, ಬೆಂಗಳೂರು ಗ್ರಾಮಾಂತರ, ಮೈಸೂರು, ಮಂಡ್ಯ, ಕೋಲಾರ, ಹಾಸನ, ತುಮಕೂರು, ಚಿಕ್ಕಬಳ್ಳಾಪುರ, ದೊಡ್ಡಬಳ್ಳಾಪುರ, ರಾಮನಗರ, ಚಾಮರಾಜನಗರ, ಚಿತ್ರದುರ್ಗದಲ್ಲಿ ಮುಂದಿನ ಐದು ದಿನಗಳ ಕಾಲ ಮಳೆಯಾಗಲಿದೆ.

ಇನ್ನು, ರಾಜ್ಯ ರಾಜಧಾನಿ ಬೆಂಗಳೂರಿನಲ್ಲಿ ನಿನ್ನೆಯಿಂದಲೇ ಜಿಟಿಜಿಟಿ ಮಳೆ ಪ್ರಾರಂಭವಾಗಿದೆ. ನಗರದಲ್ಲಿ ಇದೇ ರೀತಿಯಾಗಿ ಮೋಡಕವಿದ ವಾತಾವರಣ ಇರುತ್ತದೆ ಎಂದು ಹವಾಮಾನ ಇಲಾಖೆ ಈ ಬಗ್ಗೆ ಮಾಹಿತಿ ನೀಡಿದೆ.

## ವಿಚಾರದಲ್ಲೂ ವಿವಾದ

ಅವರ (ಮನಮೋಹನ್ ಸಿಂಗ್) ಅವರ ಸ್ಥಾನಮಾನಕ್ಕೆ ಅನುಗುಣವಾಗಿ ಸ್ಮಾರಕವನ್ನು ನಿರ್ಮಿಸಲು ಸರ್ಕಾರಕ್ಕೆ 3-4 ದಿನಗಳ ಕಾಲಾವಕಾಶ ಬೇಕಾಗುತ್ತದೆ ಎಂದು ಶಾ ಹೇಳಿದ್ದರು. ಸ್ಮಾರಕದ ಬಗ್ಗೆ ಕುಟುಂಬವು ಸರ್ಕಾರದ ನಿರ್ಧಾರವನ್ನು ಒಪ್ಪಿಕೊಂಡಿತ್ತು.

ಕಾಂಗ್ರೆಸ್ ಮೂಲಗಳ ಪ್ರಕಾರ, ಮನಮೋಹನ್ ಸಿಂಗ್ ಅಂತ್ಯಕ್ರಿಯೆ ಮತ್ತು ಅವರ ಸ್ಮಾರಕ ಸ್ಥಳಕ್ಕೆ ಸಂಬಂಧಿಸಿದಂತೆ ಪ್ರಿಯಾಂಕಾ ಗಾಂಧಿ ಅವರು ಕೇಂದ್ರ ಸರ್ಕಾರಕ್ಕೆ ಸಲಹೆಗಳನ್ನು ನೀಡಿದ್ದರು. ವೀರಭೂಮಿ (ರಾಜೀವ್ ಗಾಂಧಿ ಸಮಾಧಿ ಸ್ಥಳ) ಮತ್ತು ಶಕ್ತಿ ಸ್ಥಳ (ಇಂದಿರಾ ಗಾಂಧಿ ಸಮಾಧಿ ಸ್ಥಳ) ಬಳಿ ಅವರ ಅಂತಿಮ ಸಂಸ್ಕಾರವನ್ನು ಮಾಡಬೇಕು ಮತ್ತು ಅಟಲ್ ಜೀ ಅವರಿಗೆ ಮಾಡಿದಂತೆ ಅಲ್ಲಿ ಸ್ಮಾರಕವನ್ನು ನಿರ್ಮಿಸಬೇಕು ಎಂದು ಪ್ರಿಯಾಂಕಾ ಹೇಳಿದ್ದರು. ನಿಗಮಬೋಧ ಘಾಟ್ ನಿರ್ಧಾರವನ್ನು ಸರ್ಕಾರ ಹಿಂಪಡೆಯಬೇಕು ಎಂದು ಆಗ್ರಹಿಸಿದ್ದರು. ಆದರೆ ಕೇಂದ್ರ ಸರ್ಕಾರವು ದೇಶದ ಮೊದಲ ಸಿಖ್ ಪ್ರಧಾನಿ ಮನಮೋಹನ್ ಸಿಂಗ್ ಅವರನ್ನು ನಿಗಮಬೋಧ ಘಾಟ್‌ನಲ್ಲಿ ಅಂತ್ಯಸಂಸ್ಕಾರ ಮಾಡುವುದಾಗಿ ಘೋಷಿಸುವ ಮೂಲಕ ಅವಮಾನಿಸುತ್ತಿದೆ ಎಂದು ಅವರು ಟೀಕಿಸಿದ್ದಾರೆ.

**ಕಾಂಗ್ರೆಸ್‌ಗೆ ಬಿಜೆಪಿ ತಿರುಗೇಟು:** ಸಿಂಗ್ ಸ್ಮಾರಕ ವಿಚಾರದಲ್ಲಿ ಕಾಂಗ್ರೆಸ್ ಕೊಳಕು ರಾಜಕೀಯ ಮಾಡುವುದನ್ನು ನಿಲ್ಲಿಸಬೇಕು ಎಂದು ಬಿಜೆಪಿ ತಿರುಗೇಟು ನೀಡಿದೆ. ಈ ವಿಚಾರವಾಗಿ ಪಕ್ಷವು ಮಾಧ್ಯಮ ಹೇಳಿಕೆ ಬಿಡುಗಡೆ ಮಾಡಿ, ಹಿಂದೆ ಕಾಂಗ್ರೆಸ್ ಸರ್ಕಾರ ಮಾಡಿರುವ ಎಡವಟ್ಟುಗಳನ್ನು ಉಲ್ಲೇಖಿಇದೆ.

''ಮಾಜಿ ಪ್ರಧಾನಿ ನರಸಿಂಹ ರಾವ್ ಜೀ ಮರಣದ ನಂತರ ಕಾಂಗ್ರೆಸ್ ನವರು ಹೇಗೆ ನಡೆಸಿಕೊಂಡರು ಎಂಬುದನ್ನು ಕಾಂಗ್ರೆಸ್ ನೆನಪಿಸಿಕೊಳ್ಳಬೇಕು. ಪ್ರಣಬ್ ಮುಖರ್ಜಿ ಅವರ ಪುತ್ರಿ ಕೂಡ ಮಾಜಿ ರಾಷ್ಟ್ರಪತಿಯಾಗಿದ್ದ ತಮ್ಮ ತಂದೆಯನ್ನು ಕಾಂಗ್ರೆಸ್ ಎಷ್ಟು

### ಮೊದಲನೇ ಪುಟದಿಂದ...

ಹೀನಾಯವಾಗಿ ನಡೆಸಿಕೊಂಡಿದೆ ಎಂದು ಟ್ವೀಟ್ ಮಾಡಿದ್ದರು'' ಎಂದು ಬಿಜೆಪಿ ಪ್ರಕರಣೆಯಲ್ಲಿ ಉಲ್ಲೇಖಿಸಲಾಗಿದೆ.

## ಇಂದು ಅಂತ್ಯಕ್ರಿಯೆ

ಮನಮೋಹನ್ ಸಿಂಗ್ ಅಂತ್ಯಕ್ರಿಯೆ ನಡೆಸುವ ಬಗ್ಗೆ ಕೇಂದ್ರ ಗೃಹ ಇಲಾಖೆಯು ರಕ್ಷಣಾ ಇಲಾಖೆಗೆ ಪತ್ರ ಬರೆದಿದೆ. ಮಾಜಿ ಪ್ರಧಾನಿ ಮನಮೋಹನ್ ಸಿಂಗ್ ನಿಧನ ಹಿನ್ನೆಲೆ ಸರ್ಕಾರಿ ಗೌರವಗಳೊಂದಿಗೆ ಅಂತ್ಯಕ್ರಿಯೆ ನಡೆಸಲು ಸಕಲ ವ್ಯವಸ್ಥೆ ಮಾಡಿಕೊಳ್ಳಲು ಸೂಚಿಸಿದೆ.

ಸದ್ಯ ಮನಮೋಹನ್ ಸಿಂಗ್ ಅವರ ಪಾರ್ಥಿವ ಶರೀರವನ್ನು ಅವರ ನಿವಾಸದಲ್ಲಿ ಇಡಲಾಗಿದ್ದು, ಗಣ್ಯರು ಅಂತಿಮ ದರ್ಶನ ಪಡೆಯುತ್ತಿದ್ದಾರೆ. ಬೆಳಗ್ಗೆ 8 ಗಂಟೆಗೆ ದೆಹಲಿಯಲ್ಲಿರುವ ಎಐಸಿಸಿ ಕಚೇರಿಗೆ ಪಾರ್ಥಿವ ಶರೀರವನ್ನು ಶಿಫ್ಟ್ ಮಾಡಲಿದ್ದು 8:30 ರಿಂದ 9:30 ರ ವರೆಗೂ ಸಾರ್ವಜನಿಕರು ಮತ್ತು ಕಾರ್ಯಕರ್ತರ ದರ್ಶನಕ್ಕೆ ವ್ಯವಸ್ಥೆ ಮಾಡಲಾಗುತ್ತಿದೆ. 9:30 ಬಳಿಕ ಮನಮೋಹನ್ ಸಿಂಗ್ ಅವರ ಅಂತಿಮ ಯಾತ್ರೆ ಆರಂಭವಾಗಲಿದೆ.

ಬಳಿಕ ಬೆಳಗ್ಗೆ 11:45 ರ ವೇಳೆ ಸಿಖ್ ಧಾರ್ಮಿಕ ವಿಧಿವಿಧಾನಗಳ ಮೂಲಕ ಧಾರ್ಮಿಕ ಪ್ರಕ್ರಿಯೆ ನಡೆಯಲಿದ್ದು, ಬಳಿಕ ಸರ್ಕಾರಿ ಗೌರವಗಳೊಂದಿಗೆ ಸಿಂಗ್ ಅಂತ್ಯಕ್ರಿಯೆ ನಡೆಯಲಿದೆ.

## ತೆರೆಯಲು ಚಿಂತನೆ

ಬಿಳಿಗಿರಿರಂಗನ ಬೆಟ್ಟ ಹುಲಿ ಸಂರಕ್ಷಿತಾರಣ್ಯದ ಕೊಳ್ಳೇಗಾಲ ತಾಲೂಕಿನ ಗುಂಡಾಲ್ ಹಾಗೂ ಚಾಮರಾಜನಗರ ತಾಲೂಕಿನ ಬೂದಿಪಡಗ ಎಂಬಲ್ಲಿ ಎರಡು ಕಡೆ ಹೊಸದಾಗಿ ಸಫಾರಿ ಕೇಂದ್ರ ತೆರೆಯುವುದರ ಜೊತೆಗೆ ಜನರಿಗೆ ಪರಿಸರದ ಬಗ್ಗೆ ಅರಿವು ಮೂಡಿಸುವ ಕೆಲಸ ಮಾಡುತ್ತೇವೆ. ಇಕೋ ಟೂರಿಸಂಗೆ ಉತ್ತೇಜನ ಕೊಡುವ ಕೆಲಸಕ್ಕೆ ಮುಂದಾಗಿದ್ದೇವೆ. ಇದರಿಂದ ಪ್ರವಾಸಿಗರಿಗೂ ಕೂಡ ವನ್ಯ ಪ್ರಾಣಿಗಳ ದರ್ಶನದ ಜೊತೆಗೆ ಜನರಲ್ಲಿ ಅರಿವು ಮೂಡಿಸಲು ಸಾಧ್ಯವಾಗುತ್ತೆ ಎಂದು ಅರಣ್ಯ ಅಧಿಕಾರಿಗಳು ತಿಳಿದ್ದಾರೆ.

ಒಟ್ಟಾರೆ ಈಗಾಗಲೇ ಬಿಳಿಗಿರಿರಂಗನ ಬೆಟ್ಟ ಹುಲಿ ಸಂರಕ್ಷಿತಾರಣ್ಯದ ಕೆ.ಗುಡಿಯಲ್ಲಿ ಸಫಾರಿ ಕೇಂದ್ರವಿದ್ದು ಪ್ರವಾಸಿಗರು ವಾರಾಂತ್ಯದ ವೇಳೆ ಲಗ್ಗೆ ಇಡುತ್ತಿದ್ದಾರೆ. ಇದೀಗ ಮತ್ತೆರಡು ಹೊಸ ಸಫಾರಿ ಕೇಂದ್ರ ತೆರೆಯಲು ಮುಂದಾಗಿರುವುದರಿಂದ ಪ್ರವಾಸಿಗರು ವನ್ಯ ಪ್ರಾಣಿ, ಪಕ್ಷಿ ಹಾಗೂ ಪ್ರಾಕೃತಿಕ ಸೌಂದರ್ಯವನ್ನು ಕಣ್ತುಂಬಿಕೊಳ್ಳಬಹುದಾಗಿದೆ.

## ಪೊಲೀಸರ ಹರಸಾಹಸ!

ಪ್ರಕರಣದ ಬಗ್ಗೆ ಪುಲಕೇಶಿನಗರ ಎಸಿಪಿ ಗೀತಾ ನೇತೃತ್ವದ ತಂಡ ತನಿಖೆ ನಡೆಸುತ್ತಿದೆ.

**ವಿಚಾರಣೆಗೆ ಹಾಜರಾಗಿದ್ದ ವರ್ತೂರು ಪ್ರಕಾಶ್:** ಪ್ರಕರಣ ಸಂಬಂಧ ಮಾಜಿ ಸಚಿವ ವರ್ತೂರು ಪ್ರಕಾಶ್ ಪೊಲೀಸ್ ಠಾಣೆಗೆ ಹಾಜರಾಗಿ ತಮ್ಮ ಹೇಳಿಕೆ ದಾಖಲಿಸಿದ್ದರು. ಮಾಜಿ ಸಚಿವ ವರ್ತೂರು ಪ್ರಕಾಶ್ ಹೊರಗೊಂದು, ಒಳಗೊಂದು ಹೇಳಿಕೆ ನೀಡಿದ್ದಾರೆ ಎಂಬ ಮಾತು ಕೇಳಿಬಂದಿತ್ತು. ಪೊಲೀಸರ ವಿಚಾರಣೆ ವೇಳೆ ಸತ್ಯಾಂಶ ಬಾಯಿಬಿಟ್ಟಿರೋ ವರ್ತೂರು ಪ್ರಕಾಶ್, ಮಾಧ್ಯಮದ ಮುಂದೆ ಬೇರೆ ಹೇಳಿದ್ದಾರೆ ಎನ್ನಲಾಗಿತ್ತು.

**'ನನ್ನ ಮನಸಿಗೂ ನೋವಾಗಿದೆ':** ಪೊಲೀಸ್ ವಿಚಾರಣೆ ಬಳಿಕ ಮಾಧ್ಯಮದವರ ಜೊತೆ ಮಾತನಾಡಿದ್ದ ಮಾಜಿ ಸಚಿವ ವರ್ತೂರು ಪ್ರಕಾಶ್, ನನ್ನ ಮೇಲೆ ಸುಳ್ಳು ಸುದ್ದಿ ಹಬ್ಬಿಸಿದ್ದಾರೆ. ನನಗೆ ಆಕೆ ಸ್ನೇಹಿತೆ ಅಲ್ಲ ಎಂದಿದ್ದರು. ಅಲ್ಲದೆ ಐದಾರು ತಿಂಗಳ ಹಿಂದೆ ಪರಿಚಯ ಆಗಿದೆ. ನನ್ನ ಹೆಸರು ಬಳಸಿಕೊಂಡು ಚಿನ್ನಾಭರಣ ಖರೀದಿ ಮಾಡಿಕೊಂಡಿದ್ದಾಳೆ. ನನ್ನ ಮನಸಿಗೂ ನೋವಾಗಿದೆ ಎಂದು ಹೇಳಿದ್ದರು. ಬಂಗಾರದ ಅಂಗಡಿಯವರು ಎರಡು ಕೋಟಿ ಚಿನ್ನಭಾರಣ ಕೊಟ್ಟಿದ್ದಾರೆ. ಚಿನ್ನದ ಅಂಗಡಿಯವರು ಹೇಗೆ ಚಿನ್ನ ಕೊಟ್ಟರು ಗೊತ್ತಿಲ್ಲ. ನನ್ನ ತರ ಕೆಲ ರಾಜಕಾರಣಿಗಳು ಹೆಸರು, ಫೋಟೋ ತೆಗೆದುಕೊಂಡು ವಂಚನೆ ಮಾಡಿದ್ದಾಳೆ. ಕೆಲ ದೂರುಗಳು ಅಕೆಯ ವಿರುದ್ಧ ಸಹ ಬಂದಿದೆ. ಪೊಲೀಸರ ವಿಚಾರಣೆ ವೇಳೆ ಎಲ್ಲಾ ಮಾಹಿತಿಯನ್ನ ಕೊಟ್ಟಿದ್ದಿನಿ ಎಂದು ಹೇಳಿಕೆ ನೀಡಿದ್ರು. ಆದರೆ, ಮಾಜಿ ಸಚಿವರು ಪೊಲೀಸರ ಮುಂದೆ ನೀಡಿರೊ ಹೇಳಿಕೆಯೇ ಬೇರೆ ಎನ್ನಲಾಗಿದೆ.

ಮಾಜಿ ಸಚಿವ ವರ್ತೂರು ಪ್ರಕಾಶ್, ಆಕೆ ಜೊತಗೆ ಒಳ್ಳೆಯ ಪರಿಚಯ ಸ್ನೇಹ ಇತ್ತು ಎಂದು ಪೊಲೀಸರ ಮುಂದೆ ಹೇಳಿದ್ದಾರೆ ಎನ್ನಲಾಗಿದೆ. ಆಕೆ ನನಗೆ 100ಕ್ಕೂ ಹೆಚ್ಚು ಗ್ರಾಂ ಚಿನ್ನ ನೀಡಿದ್ದಳು. ಹನ್ನೆರಡೂವರೆ ಲಕ್ಷ ಹಣ ಕೂಡ ನೀಡಿದ್ದಾರೆ ಎಂದಿದ್ದಾರೆ. ವರ್ತೂರು ಪ್ರಕಾಶ್ ಒಟ್ಟು 20 ಲಕ್ಷ ಮೌಲ್ಯದ ಮಾಲು ವಾಪಸ್ಸು ನೀಡಿದ್ದಾರೆ ಎನ್ನಲಾಗಿದೆ. ಹಣ ಮತ್ತು ಚಿನ್ನವನ್ನು ಮಗನಿಗೆ ಕೊಟ್ಟಿದ್ದೆ ಎಂದು ಪೊಲೀಸರಿಗೆ ನೀಡಿದದ್ದಾರೆ. ಅಲ್ಲದೆ ಆಕೆಯ ಜೊತೆಗಿನ ಸ್ನೇಹ ಸಂಬಂಧ ಮತ್ತು ಒಟ್ಟಿಗೆ ವ್ಯವಹಾರದ ಬಗ್ಗೆ ವರ್ತೂರು ಪ್ರಕಾಶ್ ಒಪ್ಪಿಕೊಂಡಿದ್ದಾರೆ ಎನ್ನಲಾಗಿದೆ.

## ಜಾರ್ಜ್‌ಶೀಟ್ ಸಲ್ಲಿಕೆ

ಈ ಬಗ್ಗೆ ತನಿಖೆ ನಡೆಸಿದ ಎಸ್‌ಐಟಿ, ಶಾಸಕ ಮುನಿರತ್ನ ವಿರುದ್ಧ ಅತ್ಯಾಚಾರ ಹಾಗೂ ಅವರ ಸಹಚರರ ಮೇಲೆ ಕೃತ್ಯಕ್ಕೆ ಸಹಕರಿಸಿದ ಆರೋಪದಡಿ ಆರೋಪ ಪಟ್ಟಿ ಸಲ್ಲಿಸಿದೆ. ಪ್ರಕರಣ ಸಂಬಂಧ ಎಸ್ ಐಟಿ 146 ಸಾಕ್ಷಿಗಳನ್ನು ವಿಚಾರಣೆಗೊಳಪಡಿಸಿತ್ತು. ಇದರಲ್ಲಿ ನ್ಯಾಯಾಧೀಶರ ಮುಂದೆ ಸಿಆರ್‌ಪಿಸಿ 164ರಡಿ 8 ಜನರ ಸಾಕ್ಷಿದಾರರು ಹೇಳಿಕೆ ನೀಡಿದ್ದಾರೆ. 850 ದಾಖಲೆ ಒಳಗೊಂಡ 2,481 ಪುಟಗಳ ಚಾರ್ಜ್‌ಶೀಟ್ ಸಲ್ಲಿಕೆ ಎಸ್‌ಐಟಿ ಸಲ್ಲಿಕೆ ಮಾಡಿದೆ.

ಯಾವ್ಯಾವ ಸೆಕ್ಷನ್‌ಗಳಡಿ ಜಾರ್ಜ್‌ಶೀಟ್

376(2)ಎನ್ (ನಿರಂತರ ಅತ್ಯಾಚಾರ), 3081202 (ಅಪರಾಧಿಕ ಸಂಚು), 504 (ಉದ್ದೇಶ ಪೂರ್ವಕ ಅವಮಾನ), 506 (ಜೀವ ಬೆದರಿಕೆ), 270 (ಅಪಾಯಕಾರಿ ರೋಗ ಹರಡುವಿಕೆ. ಆರೋಪಿಗಳ ವಿರುದ್ಧ ಪ್ರಮುಖವಾಗಿ ಲೈಂಗಿಕ ಕಿರುಕುಳಕ್ಕಾಗಿ ಐಪಿಸಿ 354ಎ, ಅನುಮತಿ ಇಲ್ಲದೆ ಮಹಿಳೆ ಯ ಅಶ್ಲೀಲ ದೃಶ್ಯ ಸೆರೆಹಿಡಿದಿರುವುದಕ್ಕೆ ಸೆಕ್ಷನ್ 354 ಸಿ, ಮಹಿಳೆಯ ಮೇಲೆ ಪದೇ ಪದೇ ಅತ್ಯಾಚಾರವೆಸಗಿದ್ದಕ್ಕಾಗಿ ಐಪಿಸಿ ಸೆಕ್ಷನ್ 376 (2) (ಟಿ), ಸಂತ್ರಸ್ತೆಯ ಕೊಲ್ಲುವ ಉದ್ದೇಶಕ್ಕೆ ಸೆಕ್ಷನ್ 308, ಅಪರಾಧಿಕ ಒಳಸಂಚಿಗೆ ಸೆಕ್ಷನ್ 120 ಃ, ಉದ್ದೇಶಪೂರ್ವಕವಾಗಿ ಅವಮಾನಕ್ಕಾಗಿ ಸೆಕ್ಷನ್ 504, ಜೀವಕ್ಕೆ ಅಪಾಯಕಾರಿ ಕಾಯಿಲೆಯ ಸೋಂಕನ್ನು ಹರಡುವ ಮಾರಣಾಂತಿಕ ಕೃತ್ಯಕ್ಕಾಗಿ ಸೆಕ್ಷನ್ 270 ಮತ್ತು ವ್ಯಕ್ತಿಯ ಖಾಸಗಿ ಚಿತ್ರವನ್ನ ಒಪ್ಪಿಗೆಯಿಲ್ಲದೆ ಸೆರೆಹಿಡಿದಿದ್ದಕ್ಕೆ ಐಟಿ ಕಾಯ್ದೆ 2000ರ ಸೆಕ್ಷನ್ 66ಇ ಅಡಿಯಲ್ಲಿ ಚಾರ್ಜ್ ಶೀಟ್ ಸಲ್ಲಿಕೆಯಾಗಿದೆ.

ಮುನಿರತ್ನ ವಿರುದ್ಧ ಅತ್ಯಾಚಾರ, ಜಾತಿ ನಿಂದನೆ, ಬೆದರಿಕೆ ಹಾಗೂ ಹನಿಟ್ರ್ಯಾಪ್ ಯತ್ನ ಸೇರಿ 4 ಪ್ರಕರಣಗಳು ದಾಖಲಾಗಿದ್ದವು. ಈ ಪೈಕಿ ಬಿಬಿಎಂಪಿ ಮಾಜಿ ಸದಸ್ಯ ವೇಲು ನಾಯ್ಕರ್‌ಗೆ ಜಾತಿನಿಂದನೆ ಹಾಗೂ ಬಿಜೆಪಿ ಕಾರ್ಯಕರ್ತೆ ಮೇಲಿನ ಅತ್ಯಾಚಾರ ಪ್ರಕರಣಗಳ ತನಿಖೆಯನ್ನು ಪೂರ್ಣಗೊಳಿಸಿ ಸಿಐಡಿ ನವೆಂಬರ್ 30ರಂದು ಚಾರ್ಜ್‌ಶೀಟ್ ಸಲ್ಲಿಕ್ಕೆ ಮಾಡಿತ್ತು. ಸದ್ಯ ಗುತ್ತಿಗೆದಾರನ ಬಳಿ ಲಂಚ ಕೇಳಿದ ಪ್ರಕರಣ ಸಂಬಂಧ ಪ್ರಾಸಿಕ್ಯೂಷನ್ ಅನುಮತಿಗೆ ಎಸ್‌ಐಟಿ ಕಾಯುತ್ತಿದೆ.

## ಗಂಭೀರ

ಪರಿಣಾಮ ಭಾರೀ ಪ್ರಮಾಣದ ಸ್ಫೋಟ ಸಂಭವಿಸಿದೆ.

ಘಟನೆಯಿಂದ ಹುನೇಗಲ್ ಗ್ರಾಮಸ್ಥರು ಬೆಚ್ಚಿಬಿದ್ದಿದ್ದಾರೆ. ಘಟನಾ ಸ್ಥಳಕ್ಕೆ ಆಗಮಿಸಿ ಅಗ್ನಿಶಾಮಕ ದಳದ ಸಿಬ್ಬಂದಿ ಬೆಂಕಿ ನಂದಿಸಿದ್ದಾರೆ. ಸ್ಥಳಕ್ಕೆ ಪೊಲೀಸರು ಭೇಟಿ ನೀಡಿ ಕ್ರೇನ್ ಮೂಲಕ ಹಾನಿಗೊಳಗಾದ ವಾಹನ ತೆರವುಗೊಳಿಸಿ ಸಂಚಾರಕ್ಕೆ ಅನುಕೂಲ ಮಾಡಿಕೊಟ್ಟಿದ್ದಾರೆ.

## ಬಾಣಂತಿಯರಿಗೆ ನೀಡಲಾಗಿದ್ದ ಐವಿ ದ್ರಾವಣ ಬಳಕೆಗೆ ಯೋಗ್ಯವಲ್ಲ, ವರದಿ



**ಸಿಂಧನೂರು:** ಸಿಂಧನೂರು ತಾಲೂಕು ಆಸ್ಪತ್ರೆಯಲ್ಲಿ ನಾಲ್ವರು ಬಾಣಂತಿಯರ ಸಾವಿಗೆ ಕಾರಣವಾಗಿದೆ ಎನ್ನಲಾಗಿರುವ IV ರಿಂಗರ್ ಲ್ಯಾಕ್ಟೇಟ್ ದ್ರಾವಣವನ್ನು ಪರೀಕ್ಷೆಗೆ ಒಳಪಡಿಸಿದ್ದು, ಆಘಾತಕಾರಿ ಅಂಶ ಬೆಳಕಿಗೆ ಬಂದಿದೆ. IV ರಿಂಗರ್ ಲ್ಯಾಕ್ಟೇಟ್ ದ್ರಾವಣದಲ್ಲಿನ ಎಂಡೋ ಟಾಕ್ಸಿನ್ ಎಂಬ ಅಂಶ ಬಳಕೆಗೆ ಯೋಗ್ಯವಲ್ಲ (ನೆಗೆಟಿವ್) ಅಂತ ಬೆಂಗಳೂರು ಮತ್ತು ಹೈದರಾಬಾದ್ ನ ಲ್ಯಾಬ್ ಗಳ ವರದಿಯಲ್ಲಿ ಬಹಿರಂಗಗೊಂಡಿದೆ.

ರಾಯಚೂರು ಜಿಲ್ಲಾಡಳಿತ ಒಟ್ಟು ಮೂರು ಲ್ಯಾಬ್ ಗಳಿಗೆ ತಲಾ 6 IV ರಿಂಗರ್ ಲ್ಯಾಕ್ಟೇಟ್ ದ್ರಾವಣ ಸ್ಯಾಂಪಲ್ ಪರೀಕ್ಷೆಗೆ ಕಳುಹಿಸಿತ್ತು. ಬೆಂಗಳೂರಿನ ವೈದ್ಯಕೀಯ ಕಾಲೇಜು ನೀಡಿದ ವರದಿಯಲ್ಲಿ 6 ಸ್ಯಾಂಪಲ್ ಪೈಕಿ 4 ಸ್ಯಾಂಪಲ್ ಗಳು ಉಪಯೋಗಕ್ಕೆ ಯೋಗ್ಯವಲ್ಲ, ಎರಡು ಉಪಯೋಗಕ್ಕೆ ಯೋಗ್ಯವಾಗಿವೆ ಎಂದು ಹೇಳಿದೆ. ಇನ್ನು, ಹೈದರಾಬಾದ್ ನ ವಿಂಪ್ಟಾ ಲ್ಯಾಬ್ ವರದಿಯಲ್ಲಿ 6 ಸ್ಯಾಂಪಲ್ ಪೈಕಿ, ನಾಲ್ಕು ಉಪಯೋಗಕ್ಕೆ ಯೋಗ್ಯವಿದ್ದು, ಎರಡು ಯೋಗ್ಯವಲ್ಲ ಅಂತ ವರದಿಯಲ್ಲಿ ಉಲ್ಲೇಖವಾಗಿದೆ. ಸದ್ಯ, ಸರ್ಕಾರದ ಡ್ರಗ್ ಕಂಟ್ರೋಲ್ ಲ್ಯಾಬ್‌ನ ವರದಿ ಮಾತ್ರ ಬಾಕಿ ಇದೆ ಎಂದು ರಾಯಚೂರು ಜಿಲ್ಲಾಧಿಕಾರಿ ನಿತೀಶ್ ಕೆ ಮಾಹಿತಿ ನೀಡಿದ್ದಾರೆ.

ಬೆಂಗಳೂರು ಮತ್ತು ಹೈದರಾಬಾದ್‌ನ ಲ್ಯಾಬ್ ಗಳು ನೀಡಿದ್ದ ವರದಿಯಲ್ಲಿ ಜಿಲ್ಲಾಡಳಿತ ಸರ್ಕಾರಕ್ಕೆ ಸಲ್ಲಿಸಿದ್ದು ತನಿಖೆ ಮುಂದುವರಿಸಿದೆ. ರಾಯಚೂರು ಜಿಲ್ಲೆಯಲ್ಲಿ ಕಳೆದ 3 ತಿಂಗಳಲ್ಲಿ 10 ಬಾಣಂತಿಯರು ಮೃತಪಟ್ಟಿದ್ದಾರೆ. ಸಿಂಧನೂರು ತಾಲೂಕು ಆಸ್ಪತ್ರೆ ಒಂದರಲ್ಲೇ ನಾಲ್ವರು ಬಾಣಂತಿಯರು ಮೃತಪಟ್ಟಿದ್ದರು.

ಸಿಂಧನೂರು ತಾಲೂಕು ಆಸ್ಪತ್ರೆಗೆ ಅಕ್ಟೋಬರ್ ತಿಂಗಳಲ್ಲಿ ದಾಖಲಾಗಿದ್ದ ನಾಲ್ವರು ಬಾಣಂತಿಯರು ಸಿಸೇರಿಯನ್ ಬಳಿಕ ಮೃತಪಟ್ಟಿದ್ದರು. ರಾಯಚೂರು ಜಿಲ್ಲೆಯವರೇಯಾದ ಮೌಸಂಬಿ ಮಂಡಲ್ , ಚನ್ನಮ್ಮ, ಚಂದ್ರಕಲಾ, ರೇಣುಕಮ್ಮ ಮೃತ ಬಾಣಂತಿಯರು. ಈ ನಾಲ್ವರು ಬಾಣಂತಿಯರಿಗೂ ಬಳ್ಳಾರಿ ಜಿಲ್ಲಾಸ್ಪತ್ರೆಯಲ್ಲಿ ಬಳಕೆಯಾಗಿದ್ದ ಖಗಿದ್ರಾವಣವೇ ನೀಡಲಾಗಿತ್ತು ಎಂದು ಹೇಳಲಾಗಿತ್ತು.

**ತನಿಖೆ ನಡೆಸುತ್ತಿರುವ ಸರ್ಕಾರ:** ಬಳ್ಳಾರಿ, ರಾಯಚೂರು, ಬೆಳಗಾವಿ ಮತ್ತು ಹುಬ್ಬಳ್ಳಿಯಲ್ಲಿನ ಬಾಣಂತಿಯರ ಸಾವಿನ ಸಂಖ್ಯೆ ಬೆಳಕಿಗೆ ಬರುತ್ತಿದ್ದಂತೆ ಆರೋಗ್ಯ ಇಲಾಖೆ ತನಿಖೆ ನಡೆಸುತ್ತಿದೆ. ಕಳೆದ ಮೂರು ತಿಂಗಳಲ್ಲಿ ಕರ್ನಾಟಕದಲ್ಲಿ ಎಷ್ಟು ಬಾಣಂತಿಯರು ಮೃತಪಟ್ಟಿದ್ದಾರೆ ಇವರ ಸಾವಿಗೆ ಕಾರಣವೇನು ಎಂಬುವುದರ ಕುರಿತು ಸಮಗ್ರವಾಗಿ ತನಿಖೆ ನಡೆಸುತ್ತಿದ್ದು, ಎಲ್ಲ ಮಾಹಿತಿಯನ್ನು ಕಲೆ ಹಾಕುತ್ತಿದೆ.

## ಚಿಕ್ಕಬಳ್ಳಾಪುರ ಬಳಿ ಭೀಕರ ಅಪಘಾತ

**ಚಿಕ್ಕಬಳ್ಳಾಪುರ:** ಬೆಂಗಳೂರು ಹೈದರಾಬಾದ್ ರಾಷ್ಟ್ರೀಯ ಹೆದ್ದಾರಿ 44ರ ಚಿಕ್ಕಬಳ್ಳಾಪುರ ತಾಲೂಕಿನ ಹುನೇಗಲ್ ಗ್ರಾಮದಲ್ಲಿ ಶುಕ್ರವಾರ ತಡರಾತ್ರಿ ಸಿಎನ್ ಜಿ ಗ್ಯಾಸ್ ಸಿಲಿಂಡರ್ ಗಳನ್ನು ತುಂಬಿದ್ದ ಕ್ಯಾಂಟರ್ ವೊಂದಕ್ಕೆ ಗ್ರಾನೈಟ್ ದಿಮ್ಮಿಗಳನ್ನು ಸಾಗಿಸುತ್ತಿದ್ದ ಲಾರಿಯೊಂದು ಹಿಂದಿನಿಂದ ಡಿಕ್ಕಿ ಹೊಡೆದ ಕಾರಣ ಭೀಕರ ಅಗ್ನಿ ಅನಾಹುತ ಸಂಭವಿಸಿದೆ. ಸಿಎನ್ ಜಿ ಗ್ಯಾಸ್ ಸಿಲಿಂಡರ್ ಗಳು ಸ್ಫೋಟಗೊಂಡು ನೂರು ಅಡಿ ಎತ್ತರ ಬೆಂಕಿಯ ಕೆನ್ನಾಲಿಗೆ ಚಿಮ್ಮಿದೆ. ಅದೃಷ್ಟವಶಾತ್ ಭಾರಿ ಅನಾಹುತ ತಪ್ಪಿದ್ದು, ಎರಡೂ ಲಾರಿಗಳಲ್ಲಿದ್ದ ಚಾಲಕರು ಹಾಗೂ ಕ್ಲೀನರ್ ಗಳಿಗೆ ಗಾಯಗಳಾಗಿವೆ.



ಮೇಘಾ ಸಿಎನ್ ಜಿ ಗ್ಯಾಸ್ ಡಿಸ್ಟ್ರಿಬ್ಯೂಷನ್ ಕಂಪನಿಗೆ ಸೇರಿದ ಸಿಎನ್ ಜಿ ಗ್ಯಾಸ್ ಸಿಲೆಂಡರ್ ಗಳನ್ನು ತುಂಬಿದ್ದ ಕ್ಯಾಂಟರ್ ಹುನೇಗಲ್ ಬಳಿ ಯೂ ಟರ್ನ್ ಮಾಡುತ್ತಿದ್ದಾಗ ಹಿಂದಿನಿಂದ ಬಂದ ಗ್ರಾನೈಟ್ ದಿಮ್ಮಿಗಳನ್ನು ಸಾಗಿಸುತ್ತಿದ್ದ ಲಾರಿಯೊಂದು ರಭಸವಾಗಿ ಡಿಕ್ಕಿ ಹೊಡೆದಿದೆ. ಇದರಿಂದ ಸಿಎನ್ ಜಿ ಗ್ಯಾಸ್ ಸಿಲೆಂಡರ್ ಗಳು ಸ್ಫೋಟಗೊಂಡು ಬೆಂಕಿ ಆವರಿಸಿದೆ. ಬೆಂಕಿಯ ಕೆನ್ನಾಲಿಗೆ ನೂರು ಅಡಿ ಎತ್ತರ ಚಿಮ್ಮಿದ್ದು, ಸುತ್ತಮುತ್ತ ಇದ್ದ ಸ್ಥಳೀಯರು ಹಾಗೂ ವಾಹನ ಸವಾರರನ್ನು ಆತಂಕಕ್ಕೀಡು ಮಾಡಿತ್ತು.

**ಗಂಟೆಗಳ ಕಾಲ ಹೆದ್ದಾರಿ ಬಂದ್:** ಘಟನೆಯಲ್ಲಿ ಎರಡೂ ಲಾರಿಗಳ ಇಬ್ಬರು ಚಾಲಕರು ಹಾಗೂ ಓರ್ವ ಕ್ಲೀನರ್ ಗೆ ಸುಟ್ಟ ಗಾಯಗಳಾಗಿದ್ದು, ಅವರನ್ನು ಬೆಂಗಳೂರಿನ ವಿಕ್ಟೋರಿಯಾಗೆ ದಾಖಲಿಸಲಾಗಿದೆ. ಘಟನೆಯಿಂದ ಬೆಂಗಳೂರು ಹೈದರಾಬಾದ್ ರಾಷ್ಟ್ರೀಯ ಹೆದ್ದಾರಿ 44ರ ಚಿಕ್ಕಬಳ್ಳಾಪುರ ತಾಲೂಕಿನ ಹುನೇಗಲ್ ಬಳಿ ಕೆಲವು ಗಂಟೆಗಳ ಕಾಲ ಹೆದ್ದಾರಿ ಬಂದ್ ಮಾಡಲಾಗಿತ್ತು. ತಕ್ಷಣ ಸ್ಥಳಕ್ಕೆ ಬಂದ ಚಿಕ್ಕಬಳ್ಳಾಪುರ ಅಗ್ನಿಶಾಮಕ ದಳ ಸಿಬ್ಬಂದಿ ಹಾಗೂ ಚಿಕ್ಕಬಳ್ಳಾಪುರ ಗ್ರಾಮಾಂತರ ಠಾಣೆ ಪೊಲೀಸರು ಬೆಂಕಿ ನಂದಿಸಿ ಎರಡು ವಾಹನಗಳನ್ನೂ ರಸ್ತೆ ಬದಿ ನಿಲ್ಲಿಸಿದ್ದಾರೆ.

# ಮನಮೋಹನ್ ಸಿಂಗ್ ಪ್ರಾಮಾಣಿಕ ಪ್ರಧಾನಿ

## ಕರ್ನಾಟಕದ ಆರ್ಥಿಕ ಸ್ಥಿತಿ ಉತ್ತಮವಾಗಿದೆ ಎಂದು ಪ್ರಶಂಸಿದ್ದನ್ನು ಸ್ಮರಿಸಿದ ಮುಖ್ಯಮಂತ್ರಿ ಸಿದ್ದರಾಯಯ್ಯ



**ಬೆಳಗಾವಿ / ಬೆಂಗಳೂರು:** ಮಾಜಿ ಪ್ರಧಾನಿ ಮನಮೋಹನ್ ಸಿಂಗ್ ಅವರ ಬದುಕು, ಆರ್ಥಿಕ ನೀತಿಗಳು ನಮ್ಮೆಗೆಲ್ಲ ಪ್ರೇರಣೆ. ಶ್ರೇಷ್ಠ ಆರ್ಥಿಕ ತಜ್ಞರಾಗಿದ್ದ ಅವರು, 2013-18 ರವರೆಗೆ ಕರ್ನಾಟಕದ ಆರ್ಥಿಕ ಸ್ಥಿತಿ ಉತ್ತಮವಾಗಿದೆ ಎಂದು ಬಣ್ಣಿಸಿದ್ದನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ಸ್ಮರಿಸಿದರು. ಅವರು ಇಂದು ಬೆಳಗಾವಿಯಲ್ಲಿ ಮಾಧ್ಯಮದವರೊಂದಿಗೆ ಮಾತನಾಡುತ್ತಾ, ಮಾಜಿ ಪ್ರಧಾನಿ ಮನಮೋಹನ್ ಸಿಂಗ್ ಅವರು ನಿಧನಕ್ಕೆ ಸಂತಾಪ ಸೂಚಿಸಿದ ಮುಖ್ಯಮಂತ್ರಿಗಳು, ಈಗಿನ ಪಾಕಿಸ್ತಾನದ ಪಂಜಾಬ್ ಪ್ರಾಂತ್ಯದಲ್ಲಿ ಜನಿಸಿದ ಮನಮೋಹನ್ ಸಿಂಗ್ ರವರು ಜಗತ್ತಿನ ಖ್ಯಾತ ಅರ್ಥಶಾಸ್ತ್ರಜ್ಞರಾಗಿ ಬೆಳೆದವರು. ಪಿ.ವಿ. ನರಸಿಂಹರಾವ್ ಅವರ ಸಂಪುಟದಲ್ಲಿ ಆರ್ಥಿಕ ಕಾರ್ಯದರ್ಶಿಗಳಾಗಿ ಸೇವೆ ಸಲ್ಲಿಸಿದ್ದರು. ಉದಾರೀಕರಣದ ಮೂಲಕ ಭಾರತವನ್ನು ವಿಶ್ವಮಟ್ಟಕ್ಕೆ ಕೊಂಡೊಯ್ಯುವಲ್ಲಿ ಪ್ರಮುಖ ಪಾತ್ರ ವಹಿಸಿದವರು. ಅವರ ಅಪಾರ ಜ್ಞಾನ ಹಾಗೂ ದೂರದೃಷ್ಟಿಯ ಯೋಜನೆಗಳು, ಭಾರತವು ಆರ್ಥಿಕ ಮುಗ್ಗಟ್ಟಿನಿಂದ ಹೊರಬರಲು ಕಾರಣವಾಯಿತು ಎಂದರು.

**ದೇಶದ ಆರ್ಥಿಕತೆಯಲ್ಲಿ ಮನಮೋಹನ್ ಸಿಂಗ್‌ರ ಹೆಜ್ಜೆಗುರುತು :** 2004 ರಲ್ಲಿ ಕಾಂಗ್ರೆಸ್ ಪಕ್ಷ ಬಹುಮತ ಸಾಧಿಸಿ, ಸೋನಿಯಾ ಗಾಂಧಿಯವರು ಪ್ರಧಾನಿಯಾಗಲು ನಿರಾಕರಿಸಿದ ಸಂದರ್ಭದಲ್ಲಿ ಮನಮೋಹನ್ ಸಿಂಗ್ ಅವರನ್ನು ಪ್ರಧಾನ ಮಂತ್ರಿಯಾಗಿ ಆಯ್ಕೆಮಾಡಲಾಗುತ್ತದೆ. ಹತ್ತು ವರ್ಷಗಳ ಕಾಲ ಪ್ರಧಾನಿ ಮಂತ್ರಿಯಾಗಿ ದೇಶದ ಅಧಿಕಾರದ ಚುಕ್ಕಾಣಿಯನ್ನು ಹಿಡಿದ ಮನಮೋಹನ್ ಸಿಂಗ್ ಅವರು ದೇಶವನ್ನು ಆರ್ಥಿಕವಾಗಿ, ಸಾಮಾಜಿಕವಾಗಿ ಅಭಿವೃದ್ಧಿಗೊಳಿಸಿದರು. ದೇಶ ಕಂಡ ಪ್ರಾಮಾಣಿಕ ಪ್ರಧಾನಮಂತ್ರಿಗಳಲ್ಲಿ ಒಬ್ಬರು. ರಾಜಕಾರಣದಲ್ಲಿ ಪ್ರಾಮಾಣಿಕತೆ ಕಾಣಸಿಗುವುದು ವಿರಳ. ಆದರೆ ತಮ್ಮ ಅಧಿಕಾರವಧಿಯಲ್ಲಿ ಪ್ರಾಮಾಣಿಕವಾಗಿ ಶ್ರಮಿಸಿ, ದೇಶದ ಆರ್ಥಿಕತೆಯಲ್ಲಿ ತಮ್ಮ ಹೆಜ್ಜೆಗುರುತನ್ನು ಬಿಟ್ಟುಹೋಗಿದ್ದಾರೆ ಎಂದರು.

**ಅವರ ನಿಧನದಿಂದ ದೇಶಕ್ಕೆ ದೊಡ್ಡ ನಷ್ಟ :** ಅವರ ಬದುಕು, ಆರ್ಥಿಕ ನೀತಿಗಳು ನಮ್ಮೆಗೆಲ್ಲ ಪ್ರೇರಣೆ ಹಾಗೂ ಸ್ಪೂರ್ತಿ ನೀಡುತ್ತಿದೆ. ದೀರ್ಘಾವಧಿಯವರೆಗೆ ಅಧಿಕಾರದಲ್ಲಿದ್ದರೂ ಅತ್ಯಂತ ಸರಳ, ವಿನಯವಂತರಾಗಿದ್ದ ಶ್ರೀಯುತರು ದೇಶದ ಗೌರವಯುತ ವ್ಯಕ್ತಿಯಾಗಿದ್ದರು. ಇಂದು ಅವರು ನಮ್ಮನ್ನು ಅಗಲಿದ್ದು, ಭಾರತಕ್ಕೆ ಆದ ದೊಡ್ಡ ನಷ್ಟ. ಅವರ ಸಾವಿನ ದು:ಖವನ್ನು ಭರಿಸುವ ಶಕ್ತಿಯನ್ನು ಕುಟುಂಬ ವರ್ಗದವರಿಗೆ, ಅಭಿಮಾನಿ ಬಳಗ ಭಗವಂತ ನೀಡಲಿ ಎಂದು ಪ್ರಾರ್ಥಿಸುವುದಾಗಿ ತಿಳಿಸಿದರು.



**ಆಹಾರ ಭದ್ರತೆ ಕಾಯ್ದೆಯಡಿ ಅನ್ನಭಾಗ್ಯ ಯೋಜನೆ:** ಮನಮೋಹನ್ ಸಿಂಗ್ ದೇಶದಲ್ಲಿ ಮೊದಲ ಬಾರಿಗೆ ಆಹಾರ ಭದ್ರತೆ ಕಾಯ್ದೆಯನ್ನು ಜಾರಿಗೆ ತಂದವರು. ದೇಶದ ಬಡತನವಿದ್ದದ್ದರಿಂದ, ಕಡಿಮೆ ದರದಲ್ಲಿ ಆಹಾರ ಲಭಿಸುವಂತಾಗಬೇಕೆಂಬ ಸದುದ್ದೇಶದಿಂದ ಈ ಕಾನೂನನ್ನು ಜಾರಿಗೆ ತರಲಾಯಿತು. ನಂತರ ನಾನು ಮುಖ್ಯಮಂತ್ರಿಯಾಗಿದ್ದ ಅವಧಿಯಲ್ಲಿ ಬಿಪಿಎಲ್ ಕಾರ್ಡ್ದಾರರಿಗೆ ಅನ್ನಭಾಗ್ಯ ಯೋಜನೆಯಡಿ ಒಂದು ರೂ. ದರದಲ್ಲಿ ಒಂದು ಕೆಜಿ ಅಕ್ಕಿ ನೀಡುವ ಯೋಜನೆಯನ್ನು ರಾಜ್ಯದಲ್ಲಿ ಜಾರಿಗೆ ತರಲಾಯಿತು. ನಂತರದ ದಿನಗಳಲ್ಲಿ ಐದು ಕೆಜಿ ಯಿಂದ ಏಳು ಕೆಜಿಯವರೆಗೆ ಹೆಚ್ಚಿಸಿ ಅಕ್ಕಿಯನ್ನು ಉಚಿತವಾಗಿ ನೀಡಲಾಗುತ್ತಿತ್ತು. ಇಂದು ನರೇಂದ್ರ ಮೋದಿಯವರು ನೀಡುತ್ತಿರುವ ಐದು ಕೆಜಿ ಆಹಾರಧಾನ್ಯ ಹಂಚಿಕೆಯ ಯೋಜನೆ ಪ್ರಾರಂಭವಾದದ್ದು ಮನಮೋಹನ್ ಸಿಂಗ್ ಅವರ ದೂರದೃಷ್ಟಿಯಿಂದ. ದೇಶದ ಬಡವರು, ನಿರುದ್ಯೋಗಿಗಳ ಕಷ್ಟನಿವಾರಣೆಗೆ ಪೂರಕ ಯೋಜನೆಗಳನ್ನು ಜಾರಿಗೊಳಿಸಿದ್ದರು ಎಂದರು.

**ಕರ್ನಾಟಕದ ಆರ್ಥಿಕ ಸ್ಥಿತಿ ಉತ್ತಮವಾಗಿದೆ ಎಂದು ಪ್ರಶಂಸೆ :** ಮನಮೋಹನ್ ಸಿಂಗ್ ರವರೊಂದಿಗಿನ ಮುಖ್ಯಮಂತ್ರಿಗಳ ಒಡನಾಟದ ಬಗ್ಗೆ ಪ್ರತಿಕ್ರಿಯೆ ನೀಡಿ, ಅವರು ಪ್ರಧಾನಿಯಾಗಿದ್ದಾಗ ಭೇಟಿ ಮಾಡಿದ್ದೂ, ನಾನು ಮುಖ್ಯಮಂತ್ರಿಯಾಗಿದ್ದ ಸಂದರ್ಭದಲ್ಲಿ ಕರ್ನಾಟಕದಲ್ಲಿ ನಡೆದ ಕಾರ್ಯಕ್ರಮವೊಂದಕ್ಕೆ ಆಗಮಿಸಿ, ರಾಜ್ಯದ ಆರ್ಥಿಕತೆಯ ಅಭಿವೃದ್ಧಿಗೆ ಸಲಹೆ ಸೂಚನೆಗಳನ್ನು ನೀಡಿದ್ದರು ಎಂದರು.

## ಬಸವರಾಜ ಹೊರಟ್ಟಿ ತೀವ್ರ ಸಂತಾಪ

**ಬೆಂಗಳೂರು:** ವಿಶ್ವ ಕಂಡ ಶ್ರೇಷ್ಠ ಆರ್ಥಿಕ ತಜ್ಞ, ಉದಾರ ಆರ್ಥಿಕ ನೀತಿಯ ಹರಿಕಾರ ಹಾಗೂ ಮಾಜಿ ಪ್ರಧಾನಿ ಮನಮೋಹನ ಸಿಂಗ್ ಅವರ ನಿಧನಕ್ಕೆ ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ತೀವ್ರ ಸಂತಾಪ ವ್ಯಕ್ತಪಡಿಸಿದ್ದಾರೆ.



ಶೋಕ ಸಂದೇಶದಲ್ಲಿ ಅವರು, ದೇಶದ ಪ್ರಧಾನಿಯಾಗಿ 2004ರಿಂದ 2014ರವರೆಗೆ ದೇಶವನ್ನು ಮುನ್ನಡೆಸಿದ್ದ ಮನಮೋಹನ್ ಸಿಂಗ್, ಮಾಜಿ ಪ್ರಧಾನಿ ಜವಾಹರ್ ಲಾಲ್ ನೆಹರು ಹಾಗೂ ಮಾಜಿ ಪ್ರಧಾನಿ ಇಂದಿರಾಗಾಂಧಿ ಅವರ ನಂತರ ಅತಿಹೆಚ್ಚು ಅವಧಿಗೆ ಪ್ರಧಾನಿಯಾಗಿ ಕೆಲಸ ನಿರ್ವಹಿಸಿದ ಹಿರಿಮೆ ಹೊಂದಿದ್ದರು, ಹಣದುಬ್ಬರ ನಿಯಂತ್ರಣಕ್ಕೆ ಸಾಕಷ್ಟು ಶ್ರಮಿಸಿದ್ದ ಮನಮೋಹನ್ ಸಿಂಗ್, ಆಹಾರ ಹಕ್ಕು ಕಾಯ್ದೆ, ಆರ್ ಟಿ ಐ ಕಾಯ್ದೆ, ಸರ್ವ ಶಿಕ್ಷಣ ಅಭಿಯಾನ, ಮನ್ರೇಗಾ ಯೋಜನೆ, ಕಡ್ಡಾಯ ಶಿಕ್ಷಣವನ್ನು ಮೂಲಭೂತ ಹಕ್ಕನ್ನಾಗಿಸಿದ್ದು ಸೇರಿದಂತೆ ಹಲವು ಕ್ರಾಂತಿಕಾರಿ ಯೋಜನೆಗಳನ್ನು ಜಾರಿಗೊಳಿಸಿ ದೇಶದ ಸರ್ವಾಂಗೀಣ ಅಭ್ಯುದಯಕ್ಕೆ ಶ್ರಮಿಸಿದ್ದ ಶ್ರೇಷ್ಠ ರಾಜನೀತಿಜ್ಞ ಎಂದು ಹೊರಟ್ಟಿ ಬಣ್ಣಿಸಿದ್ದಾರೆ. ಸರಳ ಸಜ್ಜನಿಕೆಯ ವ್ಯಕ್ತಿತ್ವ ಹೊಂದಿ, ಮಿತಭಾಷಿಯಾಗಿದ್ದ ಡಾ.ಮನಮೋಹನ್ ಸಿಂಗ್, ಹಲವಾರು ಸಂದರ್ಭದಲ್ಲಿ ದೇಶದಲ್ಲಿ ಎದುರಾಗಿದ್ದ ಆರ್ಥಿಕ ಸಂಕಷ್ಟಗಳಿಗೆ ಸೂಕ್ತ ಪರಿಹಾರ ಕಂಡುಹಿಡಿದ ನವಭಾರತದ ನಿರ್ಮಾತೃ ಎಂದರೇ ಅತಿಶಯೋಕ್ತಿಯಾಗಲಾರದು ಎಂದಿರುವ ಬಸವರಾಜ ಹೊರಟ್ಟಿ, ಡಾ.ಸಿಂಗ್ ಅವರ ನಿಧನದಿಂದ ಭಾರತ ಶ್ರೇಷ್ಠ ಆರ್ಥಿಕ ತಜ್ಞನನ್ನು ಕಳೆದುಕೊಂಡು ಬಡವಾಗಿದೆ, ಅವರ ಅಗಲಿಕೆಯ ನೋವನ್ನು ಸಹಿಸುವ ಶಕ್ತಿಯನ್ನು ಅವರ ಕುಟುಂಬ ವರ್ಗಕ್ಕೆ ಹಾಗೂ ಅವರ ಅಪಾರ ಅಭಿಮಾನಿಗಳಿಗೆ ಭಗವಂತ ಕರುಣಿಸಲಿ ಎಂದು ಬಸವರಾಜ ಹೊರಟ್ಟಿ ಪ್ರಾರ್ಥಿಸಿದ್ದಾರೆ.

## ಮಾಜಿ ಪ್ರಧಾನಿ ಹೆಸರು ಎಂದೆಂದಿಗೂ ಚಿರಸ್ಥಾಯಿ

**ಬೆಂಗಳೂರು:** ದೇಶ ಕಂಡ ಅತ್ಯುತ್ತಮ ಪ್ರಧಾನ ಮಂತ್ರಿಗಳಲ್ಲಿ ಒಬ್ಬರಾದ ಆರ್ಥಿಕ ತಜ್ಞ, ಸುಧಾರಕ ಡಾ. ಮನಮೋಹನ್ ಸಿಂಗ್ ಅವರ ಅಗಲಿಕೆ ಆಘಾತ ಉಂಟು ಮಾಡಿದೆ. ಹಣಕಾಸು ಸಚಿವರಾಗಿ ಹಾಗೂ ಹಾಗೂ 10 ವರ್ಷಗಳ ಕಾಲ ಪ್ರಧಾನಿಯಾಗಿ ಅವರು ಜಾರಿಗೆ ತಂದ ಉದಾರೀಕರಣ ಸೇರಿದಂತೆ ಹಲವು ಆರ್ಥಿಕ ಸುಧಾರಣಾ ಕ್ರಮಗಳು ಇಂದಿಗೂ ದೇಶದ ಹಣಕಾಸಿನ ಸದೃಡತೆಗೆ ನೆರವಾಗಿವೆ.ಜೊತೆಗೆ ಜಾಗತಿಕ ಮನ್ನಣೆಗೆ ಪಾತ್ರವಾಗಿವೆ. ಭಾರತದ ಆರ್ಥಿಕ ಇತಿಹಾಸದಲ್ಲಿ ಡಾ ಮನಮೋಹನ್ ಸಿಂಗ್ ಅವರ ಹೆಸರು ಎಂದೆಂದಿಗೂ ಚಿರಸ್ಥಾಯಿಯಾಗಿ ಉಳಿಯಲಿದೆ. ವಿದೇಶಗಳು ಆರ್ಥಿಕ ಸಂಕಷ್ಟಕ್ಕೆ ಸಿಲುಕಿ, ಅಲ್ಲಿನ ಬ್ಯಾಂಕ್‌ಗಳು ಮುಚ್ಚುತ್ತಿದ್ದಾಗ ನಮ್ಮ ದೇಶದ ಬ್ಯಾಂಕುಗಳು ಸಶಕ್ತವಾಗುತ್ತಾ ಸಾಗಿ ಜಾಗತಿಕ ಮಟ್ಟದಲ್ಲಿ ಮೆಚ್ಚುಗೆಗೆ ಪಾತ್ರವಾಗಿದ್ದು ಸ್ಮರಣೀಯ. ಅತ್ಯಂತ ಮಿತ ಭಾಷಿಯಾದರೂ ಕ್ಲಿಷ್ಟ ಸಂದರ್ಭದಲ್ಲಿ ವಿಚಲಿತರಾಗದೆ ಸ್ಪಷ್ಟ, ಕಠಿಣ ನಿರ್ಧಾರಗಳನ್ನು ಕೈಗೊಳ್ಳುವ ಸಾಮರ್ಥ್ಯ ಹೊಂದಿದ್ದ ಮನಮೋಹನ್ ಸಿಂಗ್ ಅವರು ದಕ್ಷ ಆಡಳಿತಗಾರರೂ ಆಗಿದ್ದರು. ಅವರ ಅಗಲಿಕೆ ದೇಶಕ್ಕೆ ತುಂಬಲಾರದ ನಷ್ಟ ಉಂಟು ಮಾಡಿದೆ. ಎರಡು ಬಾರಿ ಪ್ರಧಾನ ಮಂತ್ರಿಯಾಗಿದ್ದಾಗಲೂ ಅವರು ಅನುಸರಿಸಿದ ವಿದೇಶಾಂಗ ನೀತಿ, ದಿಟ್ಟ ನಿರ್ಧಾರಗಳು ಜಾಗತಿಕ ಮಟ್ಟದಲ್ಲಿ ಭಾರತದ ಇಮೇಜು ಬದಲಿಸಲು ಹಾದಿ ಮಾಡಿಕೊಟ್ಟಿದೆ. ಭಾರತ ಇಂದು ಒಂದು ಬಲಿಷ್ಟ ಆರ್ಥಿಕ ಶಕ್ತಿಯಾಗಿ ಹೊರಹೊಮ್ಮಲು ಮಾಜಿ ಪ್ರಧಾನಿ ಮನಮೋಹನ್ ಸಿಂಗ್ ಅವರ ಪಾತ್ರ ಅಪಾರ. ಕೇವಲ ಆರ್ಥಿಕ ತಜ್ಞ ಮಾತ್ರವಲ್ಲದೆ, ಬೋಧಕರಾಗಿ, ಸಚಿವಾಲಯದ ಅಧಿಕಾರಿಯಾಗಿಯೂ ಮೆಚ್ಚುಗೆಗೆ ಪಾತ್ರವಾಗಿದ್ದ ಮನಮೋಹನ್ ಸಿಂಗ್ 30 ವರ್ಷಗಳ ಕಾಲ ರಾಜ್ಯಸಭೆ ಸದಸ್ಯರಾಗಿ ಅನುಪಮ ಸೇವೆ ಸಲ್ಲಿಸಿದ್ದಾರೆ. ಡಾ. ಮನಮೋಹನ್ ಸಿಂಗ್ ಅವರ ಆತ್ಮಕ್ಕೆ ಸದ್ಗತಿ ಸಿಗಲಿ, ಕುಟುಂಬಕ್ಕೆ, ಅಭಿಮಾನಿಗಳಿಗೆ ಅವರ ಅಗಲಿಕೆಯ ದುಃಖ ಬರಿಸುವ ಶಕ್ತಿ ನೀಡಲಿ ಎಂದು ಭಗವಂತನಲ್ಲಿ ಪ್ರಾರ್ಥಿಸುವೆ ಎಂದು ಕೃಷಿ ಸಚಿವರಾದ ಎನ್. ಚಲುವರಾಯಸ್ವಾಮಿ ತಮ್ಮ ಸಂತಾಪ ಸಂದೇಶದಲ್ಲಿ ತಿಳಿಸಿದ್ದಾರೆ.



## ಭಾರತ ಆರ್ಥಿಕವಾಗಿ ಬೆಳೆಯಲು ಭದ್ರ ಬುನಾದಿ ಹಾಕಿದ್ದ ಧೀಮಂತ ನಾಯಕ

**ಬೆಂಗಳೂರು:** ಮಾಜಿ ಪ್ರಧಾನಿ ಡಾ. ಮನಮೋಹನ್ ಸಿಂಗ್ ಅವರು ನಿಧನ ಹೊಂದಿರುವ ಸುದ್ದಿ ಕೇಳಿ ಅತ್ಯಂತ ದುಖ ಉಂಟು ಮಾಡಿದೆ. ಆರ್ಥಿಕ ತಜ್ಞರಾಗಿ, ಪ್ರಧಾನ ಮಂತ್ರಿಯಾಗಿ ಹತ್ತು ವರ್ಷಗಳ ಕಾಲ ದೇಶವನ್ನು ಮುನ್ನಡೆಸಿದ್ದರು. ದೇಶದ ಆರ್ಥಿಕತೆಗೆ ದೊಡ್ಡ ಬದಲಾವಣೆ ತಂದಿದ್ದರು ಎಂದು ಮಾಜಿ ಮುಖ್ಯಮಂತ್ರಿ ಹಾಗೂ ಸಂಸದ ಬಸವರಾಜ ಬೊಮ್ಮಾಯಿ ಸಂತಾಪ ವ್ಯಕ್ತಪಡಿಸಿದ್ದಾರೆ.



ಮನಮೋಹನ್ ಸಿಂಗ್ ಅವರು ಅಂತಾರಾಷ್ಟ್ರೀಯ ಸಂಸ್ಥೆಗಳಾದ ವಿಶ್ವ ಸಂಸ್ಥೆ, ಐಎಂಎಫ್ ನಲ್ಲಿ ಒಳ್ಳೆಯ ಸಂಪರ್ಕ ಇಟ್ಟುಕೊಂಡಿದ್ದರಿಂದ ಈ ದೇಶವನ್ನು ಉಳಿಸಲು ಸಾಧ್ಯವಾಯಿತು. ರಿಸರ್ವ್ ಬ್ಯಾಂಕ್ ಗೌರ್ನರ್ ಆಗಿ ಕೆಲಸ ಮಾಡಿದ್ದು, ಈ ದೇಶದಲ್ಲಿ ಹಲವಾರು ಯೋಜನೆಗಳನ್ನು ಜಾರಿಗೆ ತರಲು ಕಾರಣವಾಗಿದೆ. ದೇಶ ಆರ್ಥಿಕವಾಗಿ ಇಷ್ಟು ದೊಡ್ಡ ಮಟ್ಟದಲ್ಲಿ ಬೆಳೆಯಲು ಮನಮೋಹನ್ ಸಿಂಗ್ ಭದ್ರ ಬುನಾದಿ ಹಾಕಿದ್ದಾರೆ ಎಂದು ತಿಳಿಸಿದ್ದಾರೆ.

ಮನಮೋಹನ್ ಸಿಂಗ್ ಅವರು ಅತ್ಯಂತ ಸಜ್ಜನ ರಾಜಕಾರಣಿ ಆಗಿದ್ದರು. ಒಬ್ಬ ಮುತ್ಸದ್ದಿ ರಾಜಕಾರಣಿಯನ್ನು ದೇಶ ಕಳೆದುಕೊಂಡಿದೆ. ಅವರು ದೇಶಕ್ಕಾಗಿ ಸದಾ ಚಿಂತನೆ ಮಾಡುತ್ತಿದ್ದರು. ಹಲವಾರು ದೂರದೃಷ್ಟಿಯ ನಿರ್ಣಯಗಳನ್ನು ತೆಗೆದುಕೊಂಡಿದ್ದರು. ಅದರ ಲಾಭ ಈಗ ದೇಶಕ್ಕೆ ಆಗುತ್ತಿದೆ. ಅವರು ಪ್ರಚಾರ ಪ್ರಿಯ ರಾಜಕಾರಣ ಮಾಡಿರಲಿಲ್ಲ, ವಾಸ್ತವ ರಾಜಕಾರಣ ಮಾಡಿದ್ದರು. ಕೆಲವು ಅಪ್ರೀಯವಾದ ನಿರ್ಣಯಗಳನ್ನು ದೇಶದ ಹಿತ ದೃಷ್ಟಿಯಿಂದ ತೆಗೆದುಕೊಂಡಿದ್ದರು. ಅವರ ಗಟ್ಟಿ ನಿಲುವು, ಧಿಮಂತಿಕೆಯ ಗುಣ ಹಲವಾರು ಸಂದರ್ಭಗಳಲ್ಲಿ ಗೊತ್ತಾಗುತ್ತದೆ. ಭಾರತ ಚೀನಾ, ಅಮೇರಿಕಾ, ಯುರೋಪ್ ದೇಶಗಳಿಗೆ ಪೈಪೋಟಿ ಕೊಡಲು ಮನಮೋಹನ್ ಸಿಂಗ್ ಅವರು ಭದ್ರ ಬುನಾದಿ ಹಾಕಿದ್ದರು ಎಂದು ತಿಳಿಸಿದ್ದಾರೆ.

ಅವರ ಅಗಲಿಕೆ ದೇಶಕ್ಕೆ ತುಂಬಲಾರದ ನಷ್ಟವುಂಟು ಮಾಡಿದೆ. ದೇವರು ಅವರ ಆತ್ಮಕ್ಕೆ ಚಿರಶಾಂತಿ ನೀಡಲಿ, ಅವರ ಅಗಲಿಕೆಯ ದುಖವನ್ನು ಭರಿಸುವ ಶಕ್ತಿಯನ್ನು ಅವರ ಕುಟುಂಬ ಹಾಗೂ ಅವರ ಅಭಿಮಾನಿಗಳಿಗೆ ಭಗವಂತ ಕರುಣಿಸಲಿ ಎಂದು ಪ್ರಾರ್ಥಿಸುತ್ತೇನೆ ಎಂದು ಸಂತಾಪದಲ್ಲಿ ತಿಳಿಸಿದ್ದಾರೆ.

## ಅತಿಥಿ ಶಿಕ್ಷಕರ ಹುದ್ದೆಗೆ ಅರ್ಜಿ

**ಕೋಲಾರ:** ಅಲ್ಪಸಂಖ್ಯಾತರ ಕಲ್ಯಾಣ ಇಲಾಖಾ ವತಿಯಿಂದ ಕೋಲಾರ ಜಿಲ್ಲೆಯ ಡಾ||ಎ.ಪಿ.ಜೆ.ಅಬ್ದುಲ್ ಕಲಾಂ ವಸತಿ ಶಾಲೆ, ಗಾಜಲದಿನ್ನೆ, ಕೋಲಾರ ತಾಲ್ಲೂಕು ಇಲ್ಲಿಗೆ 6ನೇ ತರಗತಿಯಿಂದ 10ನೇ ತರಗತಿಯವರೆಗೆ ಭೋಧಿಸುವ ಇಂಗ್ಲೀಷ್ ಭಾಷೆ ಮತ್ತು ಸಾಮಾನ್ಯ ವಿಜ್ಞಾನ ವಿಷಯದ ಅತಿಥಿ ಶಿಕ್ಷಕರ ಹುದ್ದೆಗೆ ಅರ್ಜಿಗಳನ್ನು ಆಹ್ವಾನಿಸಲಾಗಿದೆ. ಆಸಕ್ತಿವುಳ್ಳವರು ಅರ್ಜಿ ಸಲ್ಲಿಸುವ ವಿದ್ಯಾರ್ಹತೆ BA/MA (Eng) & BSc/MSc, Bed ಅಭ್ಯರ್ಥಿಗಳು ಅರ್ಜಿಗಳನ್ನು ಸಲ್ಲಿಸಬಹುದು. ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಮಾಹಿತಿ ಕೇಂದ್ರ, ಕೋಲಾರ ಹಾಗೂ ಇಲಾಖೆಯ ಜಿಲ್ಲಾ ಅಧಿಕಾರಿಗಳ ದೂರವಾಣಿ ಸಂ: 08152-295257 ಹಾಗೂ ಗಾಜಲದಿನ್ನೆ ಗ್ರಾಮದ ಡಾ.ಎ.ಪಿ.ಜೆ. ಅಬ್ದುಲ್ ಕಲಾಂ ವಸತಿ ಶಾಲೆಯ ಸಂ. 9686799165 ಯನ್ನು ಸಂಪರ್ಕಿಸಬಹುದೆಂದು ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿಗಳು ತಿಳಿಸಿದ್ದಾರೆ.

## ವಿದ್ಯುತ್ ವ್ಯತ್ಯಯ

**ಕೋಲಾರ:** ಬಂಗಾರಪೇಟೆ ಬೆವಿಕಂ ಶಾಖೆ-1 ಮತ್ತು ಶಾಖೆ-2ರ ವ್ಯಾಪ್ತಿಯಲ್ಲಿ ಬರುವ ಎಫ್-5 ಪಟ್ಟಣ ಮತ್ತು ಎಫ್-4 ಅಮರಾವಾತಿ 11 ಕೆವಿ ಫೀಡರ್‌ಗಳಲ್ಲಿ ಕಾರ್ಯನಿರ್ವಹಣಾ ಕಾಮಗಾರಿಗಳನ್ನು ಹಮ್ಮಿಕೊಂಡಿರುವ ಹಿನ್ನಲೆಯಲ್ಲಿ ಬಂಗಾರಪೇಟೆ 66/11 ಕೆವಿ ವಿದ್ಯುತ್ ಉಪಕೇಂದ್ರದಿಂದ ವಿದ್ಯುತ್ ಪ್ರವಹಿಸುವ ಬಂಗಾರಪೇಟೆ ಬೆವಿಕಂ ವ್ಯಾಪ್ತಿಯ ಘಟಕ-1, ಘಟಕ-2 ದ ಸೇಟ್ ಕೌಂಪೌಂಡ್, ಸಿರಹೀಂನಗರ, ಖಾದರ್ ಬಡಾವಣೆ, ವಿಜಯನಗರ, ವಿವೇಕಾನಂದನಗರ, ಕೋಲಾರ ಮುಖ್ಯ ರಸ್ತೆ, ಹೊಸ ಬಡಾವಣೆ, ಗಾಂಧಿನಗರ, ಸಂಜಯಗಾಂಧಿನಗರ, ಬಜಾರ್ ರಸ್ತೆ, ಇಂದಿರಾ ಆಶ್ರಯ ಬಡಾವಣೆ, ಕಾರೋನೇಷನ್ ರಸ್ತೆ, ಕೆ.ಎಂ ಬಡಾವಣೆ, ದಂಡು ರಸ್ತೆ, ಅಬ್ದುಲ್ ಅಲೀ ಗಾರ್ಡನ್, ಅಮರಾವತಿ ಬಡಾವಣೆ, ಕಾರಹಳ್ಳಿ ರಸ್ತೆ, ಕೆರೆಕೋಡಿ, ಶ್ರೀನಗರ ಸುತ್ತಮುತ್ತಲಿನ ಪ್ರದೇಶಗಳಲ್ಲಿ ಡಿಸೆಂಬರ್ 28 ರಂದು ಬೆಳಿಗ್ಗೆ 10:00 ಗಂಟೆಯಿಂದ ಸಂಜೆ 05:00 ಗಂಟೆಯವರೆಗೆ ವಿದ್ಯುತ್ ಸರಬರಾಜು ಇರುವುದಿಲ್ಲ.

## ಅಯ್ಯಪ ಸ್ವಾಮಿ ವಿಗ್ರಹ ರಾತ್ರೋರಾತ್ರಿ ತೆರವು

**ತಿಪಟೂರು:** ಕಲ್ಲೇಶ್ವರ ಸ್ವಾಮಿ ಆವರಣದಲ್ಲಿದ್ದ ಅಯ್ಯಪ್ಪ ಸ್ವಾಮಿ ಶೆಡ್‌ಗೆ ತಾಲ್ಲೂಕು ಆಡಳಿತದಿಂದ ಬೀಗ ಮುದ್ರೆ ಮಾಡಿದ್ದು ರಾತ್ರೋ ರಾತ್ರಿ, ಬೀಗ ತೆಗೆದು ಅಯ್ಯಪ್ಪ ಸ್ವಾಮಿ ವಿಗ್ರಹವನ್ನು ಸ್ಥಳಾಂತರ ಮಾಡಿರುವ ಘಟನೆ ಗುರುವಾರ ರಾತ್ರಿ ಶುಕ್ರವಾರ ಬೆಳಗಿನ ಜಾವ ಮೂರು ಗಂಟೆಯ ಸಮಯದಲ್ಲಿ ನಡೆದಿದೆ. ಅಯ್ಯಪ್ಪ ಸ್ವಾಮಿ ದೇವಾಸ್ಥಾನ ನಿರ್ಮಾಣಕ್ಕೆ ಹಾಗೂ ಒಂದು ಗುಂಟೆಯ ಜಾಗಕ್ಕೆ ಸಂಬಂಧಿಸಿದಂತೆ ಗಲಾಟೆ ಗದ್ದಲಗಳು ಉಂಟಾದ ಹಿನ್ನಲೆಯಲ್ಲಿ ಮುಜರಾಯಿ ಇಲಾಖೆಯಿಂದ ತಾಲ್ಲೂಕು ಆಡಳಿತದ ಮೂಲಕ ತಾತ್ಕಾಲಿಕ ಶೆಡ್‌ನ ಟೆಂಟ್‌ಗೆ ಬೀಗ ಮುದ್ರೆಯನ್ನು ಕಳೆದ ತಿಂಗಳಲ್ಲಿ ಮಾಡಲಾಗಿತ್ತು ಆದರೆ ಕಳೆದ ಒಂದೆರಡು ದಿನಗಳಲ್ಲಿ ಅಯ್ಯಪ್ಪ ಸ್ವಾಮಿ ವಿಗ್ರಹ ಕಳವಾಗಿದೆ ಎಂದು ದೂರು ನೀಡಲು ಮುಂದಾಗಿದ್ದ ಕಸಬಾ ಕಂದಾಯ ನಿರೀಕ್ಷಕ ರಂಗಪ್ಪ ಪೋಲೀಸ್‌ಗೆ ದೂರು ನೀಡಲು ಸಹ ಮುಂದಾಗಿದ್ದರು ಆದರೆ ಶುಕ್ರವಾರ ಬೆಳಗಿನ ಸಮಯದಲ್ಲಿ 3 ರಿಂದ 4 ಗಂಟೆಯ ಸಮಯದಲ್ಲಿ ಕಸಬಾ ಹೋಬಳಿಯ ಗ್ರಾಮ ಆಡಳಿತಾಧಿಕಾರಿ ಹಾಗೂ ಕಂದಾಯ ನಿರೀಕ್ಷಕ ರಂಗಪ್ಪ ಮತ್ತು ಪೋಲೀಸ್ ಸಹಕಾರದಲ್ಲಿ ರಾತ್ರೋ ರಾತ್ರಿ ಅಯ್ಯಪ್ಪ ಸ್ವಾಮಿ ವಿಗ್ರಹವನ್ನು ಶೆಡ್‌ನಿಂದ ಸ್ಥಳಾಂತರ ಮಾಡಿರುತ್ತಾರೆ ಆದರೆ ರಾತ್ರೋ ರಾತ್ರಿ ದೇವರ ವಿಗ್ರಹವನ್ನು ತೆರವುಗೊಳಿಸಿದ್ದು ಸಾರ್ವಜನಿಕರಲ್ಲಿ ಬಾರೀ ಚರ್ಚೆಗೆ ಗ್ರಾಸವಾಗಿದ್ದು, ಅಯ್ಯಪ್ಪ ಸ್ವಾಮಿ ಭಕ್ತರಲ್ಲಿ ಆಕ್ರೋಶಕ್ಕೆ ಕಾರಣವಾಗಿದೆ.



## ಕ್ಯಾಂಟರ್ ಗೆ ಡಿಕ್ಕಿ: ಇಬ್ಬರು ಯುವಕರು ಸಾವು

**ವಿಜಯಪುರ:** ಪಟ್ಟಣದ ಬೈಪಾಸ್ ರಸ್ತೆಯಲ್ಲಿ ದ್ವಿಚಕ್ರ ವಾಹನದಲ್ಲಿ ವ್ಹೀಲೆಂಗ್ ಮಾಡಲು ಹೋಗಿ ಕ್ಯಾಂಟರ್ ಗೆ ಡಿಕ್ಕಿ ಹೊಡೆದಿರುವ ಪರಿಣಾಮ ಇಬ್ಬರು ಯುವಕರು ಸಾವನ್ನಪ್ಪಿರುವ ಘಟನೆ ಶುಕ್ರವಾರ ನಡೆದಿದೆ. ಪಟ್ಟಣದ ನಿವಾಸಿಗಳಾದ ಮನೋಜ್ (19) ಮತ್ತು ಹರ್ಭಾಜ್ (19) ಮೃತಪಟ್ಟಿರುವ ಯುವಕರು. ಬೈಪಾಸ್ ರಸ್ತೆಯಲ್ಲಿ ಶುಕ್ರವಾರ ಬೆಳಗ್ಗೆ ಮಳೆಯ ನಡುವೆ ವ್ಹೀಲೆ ಮಾಡಿಕೊಂಡು ಹೋಗುತ್ತಿದ್ದಾಗ. ಕ್ಯಾಂಟರ್ ಗೆ ಡಿಕ್ಕಿ ಹೊಡೆದಿದ್ದು, ಸ್ಥಳದಲ್ಲಿ ತೀವ್ರ ರಕ್ತಸ್ರಾವವಾಗಿ ಮೃತಪಟ್ಟಿದ್ದಾರೆ. ಅಪಘಾತ ತಪ್ಪಿಸಲು ಪ್ರಯತ್ನಿಸಿದ ಕ್ಯಾಂಟರ್ ಚಾಲಕ ತಕ್ಷಣ ರಸ್ತೆ ಬದಿಗೆ ಎಳೆದಿದ್ದು, ಅದೃಷ್ಟ. ವಶಾತ್ ವಿದ್ಯುತ್ ಕಂಬಕ್ಕೆ ಡಿಕ್ಕಿ ಹೊಡೆಯದೇ ತಪ್ಪಿಸಿಕೊಂಡಿದ್ದಾರೆ. ಸ್ಥಳಕ್ಕೆ ಪೊಲೀಸರು ಬಂದು ಪರಿಶೀಲನೆ ನಡೆಸಿದ್ದಾರೆ. ಮೃತ ದೇಹಗಳನ್ನು ದೇವನಹಳ್ಳಿಯ ಆಕಾಶ್ ಆಸ್ಪತ್ರೆಯಲ್ಲಿ ಮರಣೋತ್ತರ ಪರೀಕ್ಷೆಗಾಗಿ ಸಾಗಿಸಲಾಗಿದೆ.

**ಪೊಲೀಸರ ನಿರ್ಲಕ್ಷ್ಯಕ್ಕೆ ಸಾರ್ವಜನಿಕರ ಆಕ್ರೋಶ:** ಪುರಸಭೆಯವರು ಪ್ರಮುಖ ವೃತ್ತಗಳಲ್ಲಿ ಸಿ.ಸಿ.ಕ್ಯಾಮೆರಾಗಳನ್ನು ಅಳವಡಿಕೆ ಮಾಡಿದ್ದರೂ ಕ್ಯಾಮೆರಾಗಳಲ್ಲಿ ದಾಖಲಾಗಿರುವ ದೃಶ್ಯಾವಳಿಗಳನ್ನು ಆಧರಿಸಿ, ಕಾನೂನು ಕ್ರಮ ಕೈಗೊಂಡಿದ್ದರೆ, ಪ್ರಾಣಾಪಾಯ ಸಂಭವಿಸುವ ಹಂತಕ್ಕೆ ಹೋಗುತ್ತಿರಲಿಲ್ಲವೆಂದು ಸ್ಥಳೀಯ ನಾಗರಿಕರು ಆಕ್ರೋಶ ವ್ಯಕ್ತಪಡಿಸಿದ್ದಾರೆ.

## ನ್ಯೂ ಹಾರ್ಡ್ವಿಕ್ ಇಂಡಿಯನ್ ಶಾಲೆಯಿಂದ ಶ್ರದ್ಧಾಂಜಲಿ



**ಬೆಂಗಳೂರು:** 10 ವರ್ಷಗಳ ಕಾಲ ದೇಶದ ಚುಕ್ಕಾಣಿ ಹಿಡಿದಿದ್ದ ಮನಮೋಹನ್ಸಿಂಗ್ ಮೌನಕ್ಕೆ ಶರಣಾಗಿದ್ದು ಹೆಚ್ಚಾದರೂ, ಅವರ ಅವಧಿಯಲ್ಲಿ ಜಾರಿಗೆ ತಂದ ಹಲವು ಯೋಜನೆಗಳು ಇಂದಿಗೂ ಕ್ರಾಂತಿಕಾರಿ ಎನ್ನಿಸಿಕೊಂಡಿವೆ. ಶಿಕ್ಷಣ, ಅರ್ಥವ್ಯವಸ್ಥೆ, ಉದ್ಯೋಗ ಸೃಷ್ಟಿ, ಬಡವರ ಆರ್ಥಿಕಾಭಿವೃದ್ಧಿ, ಆಡಳಿತದಲ್ಲಿ ಪಾರದರ್ಶಕತೆಯ ನಿಟ್ಟಿನಲ್ಲಿ ಅವರ ನೇತೃತ್ವದ ಸರ್ಕಾರ ಜಾರಿಗೆ ತಂದ ಯೋಜನೆಗಳನ್ನು, ಮುಂದೆ ಅಧಿಕಾರಕ್ಕೆ ಬಂದ ಸರ್ಕಾರಗಳು ಚಾಚೂ ತಪ್ಪದೆ ಪಾಲಿಸುತ್ತಿವೆ ಎಂಬುಂದು ಅವರ ಸಾಧನೆಗೆ ಒಂದು ಕೈಗನ್ನಡಿ ಎಂದು ಕಾರ್ಯದರ್ಶಿಗಳಾದ ಪೂರ್ಣ ಕೆ.ಕೆ. ಹೇಳಿದರು. ಮಾಗಡಿ ಮುಖ್ಯ ರಸ್ತೆಯ ಕೊಡಿಗೇಹಳ್ಳಿಯಲ್ಲಿರುವ ಪ್ರತಿಷ್ಠಿತ ನ್ಯೂ ಹಾರ್ಡ್ವಿಕ್ ಇಂಡಿಯನ್ ಶಾಲೆ( ಸಿ ಬಿ ಎಸ್ ಸಿ )ಯಲ್ಲಿ ಪದ್ಮವಿಭೂಷಣ ಪುರಸ್ಕೃತರಾದ ಮಾಜಿ ಪ್ರಧಾನಮಂತ್ರಿ, ಅರ್ಥಶಾಸ್ತ್ರಜ್ಞ ಶ್ರೀ ಡಾ. ಮನಮೋಹನ್ ಸಿಂಗ್ ಅವರ ಅಗಲಿಕೆಯ ನಿಮಿತ್ತವಾಗಿ ಶಾಲಾ ಆಡಳಿತ ಮಂಡಳಿ ಮತ್ತು ಶಾಲಾ ಸಿಬ್ಬಂದಿ ವರ್ಗದವರು ಶ್ರೀಯುತರ ಭಾವಚಿತ್ರಕ್ಕೆ ಪುಷ್ಪಾರ್ಪಣೆ ಮಾಡಿ ಮೌನಾಚರಣೆ ಮಾಡುವುದರ ಮೂಲಕ ಭಾವಪೂರ್ಣ ಶ್ರದ್ಧಾಂಜಲಿಯನ್ನು ಸಲ್ಲಿಸಿದರು.

ಈ ಸಂದರ್ಭದಲ್ಲಿ ಶಾಲೆಯ ಸಂಸ್ಥಾಪಕರಾದ ಶ್ರೀಯುತ ವಿ.ಕೃಷ್ಣಮೂರ್ತಿಯವರು, ಕಾರ್ಯದರ್ಶಿಗಳಾದ ಪೂರ್ಣ ಕೆ.ಕೆ. ಯವರು ಭಾಗಿಯಾಗಿದ್ದರು.



## ಕ್ರಿಸ್ಮಸ್ ಹಬ್ಬ

**ಮಹಾಲಕ್ಷ್ಮೀ ಲೇಔಟ್ ವಿಧಾನಸಭಾ ಕ್ಷೇತ್ರದ ನಂದಿನಿ ಲೇಔಟ್ ವಾರ್ಡ್ ನಲ್ಲಿರುವ ರಾಮಕೃಷ್ಣ ನಗರದ ಸಾನ್ಸ್ ಪಬ್ಲಿಕ್ ಸ್ಕೂಲ್‌ನಲ್ಲಿ ಕ್ರಿಸ್ಮಸ್ ಹಬ್ಬವನ್ನು ವಿಜೃಂಭಣೆಯಿಂದ ಆಚರಣೆಯನ್ನು ಮಾಡಲಾಯಿತು. ಶಾಲೆಯ ಸಂಸ್ಥಾಪಕ ರಾದ ಶ್ರೀಕಂಠಪ್ಪ ಮತ್ತು ಆಡಳಿತ ಮಂಡಳಿ ಹಾಗೂ ಶಿಕ್ಷಕ ಸಿಬ್ಬಂದಿಗಳು ಮತ್ತು ಮಕ್ಕಳು ಭಾಗವಹಿಸಿ ಕ್ರಿಸ್ಮಸ್ ಹಬ್ಬ ಆಚರಿಸಿ ಸಾಂಟಾ ಕಡೆಯಿಂದ ಚಾಕಲೇಟ್ ಪಡೆದುಕೊಂಡು ಖುಷಿ ಪಟ್ಟರು.**

## ವಿದ್ಯಾರ್ಥಿಗಳು ಹೆಚ್ಚಿನ ಓದುವ ಸಮಯ ನೀಡಲಿ

**ಚಿತ್ರದುರ್ಗ:** ದಾವಣಗೆರೆ ವಿಶ್ವವಿದ್ಯಾಲಯದಲ್ಲಿ ಓದುತ್ತಿರುವ ಪದವಿ ವಿದ್ಯಾರ್ಥಿಗಳಿಗೆ ಹೆಚ್ಚಿನ ಸಮಯವನ್ನು ನೀಡಿ, ಪರೀಕ್ಷೆಗಳನ್ನ ನಡೆಸಬೇಕು, ಕಡಿಮೆ ಸಮಯ ನೀಡಿ, ಹೆಚ್ಚು ಒತ್ತಡದಿಂದ ವಿದ್ಯಾರ್ಥಿಗಳಿಗೆ ಓದುವಂತೆ ಮಾಡಿ, ಕಾಲೇಜಿನಲ್ಲಿ ಸಹ ಉಪನ್ಯಾಸಕರಿಗೆ ಒತ್ತಡ ಹಾಕಿ, ಪಠ್ಯಕ್ರಮವನ್ನು ಬೇಗ ಬೇಗ ಮುಗಿಸಿ, ವಿದ್ಯಾರ್ಥಿಗಳಿಗೆ ಪರೀಕ್ಷೆಯ ಭಯ ಹುಟ್ಟಿಸುತ್ತಿರುವುದು ನ್ಯಾಯವಾದದ್ದಲ್ಲ. ವಿದ್ಯಾರ್ಥಿಗಳಿಗೆ ಸರಿಯಾಗಿ ಆರು ತಿಂಗಳಾದರೂ ಪರೀಕ್ಷಾ ಸಮಯವನ್ನು ನಿಗದಿಪಡಿಸಿ, ವರ್ಷಕ್ಕೆ ಎರಡು ಪರೀಕ್ಷೆಗಳನ್ನ ಮಾಡಿ, ಅವರಿಗೆ ಜ್ಞಾನಾರ್ಜನೆ ಮಾಡಿಕೊಳ್ಳುವ ಅವಕಾಶ ನೀಡಬೇಕು ಎಂದು ಕರ್ನಾಟಕ ಜ್ಞಾನ-ವಿಜ್ಞಾನ ಸಮಿತಿಯ ಜಿಲ್ಲಾಧ್ಯಕ್ಷ ಮತ್ತು ಸರ್ವೋದಯ ಮಂಡಳಿಯ ಜಿಲ್ಲಾಧ್ಯಕ್ಷ ಡಾ ಎಚ್ ಕೆ ಎಸ್ ಸ್ವಾಮಿಯವರು ವಿಶ್ವವಿದ್ಯಾಲಯದ ಆಡಳಿತ ಮಂಡಳಿಯವರಿಗೆ ವಿದ್ಯಾರ್ಥಿಗಳ ಮತ್ತು ಪೋಷಕರ ಪರವಾಗಿ ವಿನಂತಿಸಿಕೊಂಡಿದ್ದಾರೆ.



ವಿದ್ಯಾರ್ಥಿಗಳಿಗೆ ಮೊನ್ನೆ ಮೊನ್ನೆ ತರಗತಿಗೆ ಫೀಸ್ ಕಟ್ಟಿ, ಒಳಗೆ ಬಂದು ಇನ್ನು 2 ರಿಂದ 3 ತಿಂಗಳ ಆಗುತ್ತಿದ್ದ ಹಾಗೆ ಅವರಿಗೆ ಪರೀಕ್ಷಾ ಭಯವನ್ನು ಹುಟ್ಟಿಸಿ, ಜನವರಿಯಲ್ಲಿ ಪ್ರಾಯೋಗಿಕ ಪರೀಕ್ಷೆಗಳನ್ನು ನಡೆಸುತ್ತೇವೆ ಎಂದು, ನಂತರ ವಿಷಯಗಳು ಸಂಬಂಧಿತ ಪರೀಕ್ಷೆ ಎಂದು ವಿಚಾರ ತಿಳಿಸಿದ ತಕ್ಷಣ, ವಿದ್ಯಾರ್ಥಿಗಳೆಲ್ಲಾ ಗಾಬರಿಯಾಗಿ, ಒಂದೇ ಸಮನೆ ಒತ್ತಡದಲ್ಲಿ ಓದಲು ಪ್ರಾರಂಭಿಸಿದ್ದಾರೆ. ಉಪನ್ಯಾಸಕರು ಸಹ ಈ ಪರೀಕ್ಷಾ ದಿನಾಂಕವನ್ನು ಕಂಡ ತಕ್ಷಣವೇ ಎರಡು ಕ್ಲಾಸಿನಲ್ಲಿ ಮಾಡುವ ತರಗತಿಯನ್ನು ಒಂದೇ ಕ್ಲಾಸಿನಲ್ಲಿ ಮುಗಿಸುವುದು, 10 ಗಂಟೆ ಪಾಠ ಮಾಡುವುದನ್ನು ಕೇವಲ ಎರಡು ಗಂಟೆಯಲ್ಲಿ ಮುಗಿಸುವುದು, ಅವಸರ ಅವಸರದಲ್ಲಿ ಪಠ್ಯಕ್ರಮ ಮುಗಿಸಿ ಕೊಡುತ್ತಿರುವುದರಿಂದ ವಿದ್ಯಾರ್ಥಿಗಳಿಗೆ ಯಾವುದು ಅರ್ಥವಾಗದೆ, ಎಷ್ಟರಮಟ್ಟಿಗೆ ನಾವು ಪರೀಕ್ಷೆಯಲ್ಲಿ ಪಾಸಾಗುತ್ತೇವೆ ಎಂದು ಕಳವಳ ವ್ಯಕ್ತಪಡಿಸುತ್ತಿದ್ದಾರೆ ಎಂದರು. ಪೋಷಕರಿಗೂ ಸಹ ಇದು ವಿಶ್ವವಿದ್ಯಾಲಯದ ಮೂರು ತಿಂಗಳಿಗೊಮ್ಮೆ ಪರೀಕ್ಷೆ, ಆದರೆ ಆರು ತಿಂಗಳಿಗೆ ಒಂದು ಸೆಮಿಸ್ಟರ್ ಎನ್ನುವ ಅರ್ಥವಾದರೂ ಎಲ್ಲಿದೆ ಎಂದು ಯೋಚಿಸುವಂತಾಗಿದೆ. ವಿದ್ಯಾರ್ಥಿಗಳನ್ನ ಸೇರ್ಪಡೆ ಮಾಡಿಕೊಂಡ ದಿನಾಂಕದಿಂದ ಆರು ತಿಂಗಳೊ ಅಥವಾ ವಿಶ್ವವಿದ್ಯಾಲಯದಲ್ಲಿ ಬೇರೆ ವೇಳಾಪಟ್ಟಿ ಇಟ್ಟುಕೊಂಡು, ಕೇವಲ ಮೂರು ತಿಂಗಳಲ್ಲಿ ಪಾಠ ಪ್ರವಚನ ಮುಗಿಸಿ, ಇನ್ನು ಮೂರು ತಿಂಗಳು ಪರೀಕ್ಷೆ ನಡೆಸಿ, ಮೌಲ್ಯಮಾಪನ ಮಾಡಿ, ಆರು ತಿಂಗಳಿಗೆ ಫಲಿತಾಂಶ ನೀಡಬೇಕಾದ್ದು ಎಂದು ತೀರ್ಮಾನಿಸಿದ್ದಾರೋ ಎಂದು ಚರ್ಚೆ ಮಾಡಿಕೊಳ್ಳುತ್ತಿದ್ದಾರೆ ಎಂದರು.



## ಓದುವ, ಬರೆಯುವ ವಿಧಾನ ಬದಲಾವಣೆಯೇ ಹೆಚ್ಚು ಅಂಕಗಳಿಗೆ ದಾರಿ

**ಹುಳಿಯಾರು:** ಓದುವ ಕೌಶಲ್ಯದಲ್ಲಿ ಬದಲಾವಣೆ ಮಾಡಿಕೊಳ್ಳುವ ಜೊತೆಗೆ ಪರೀಕ್ಷೆಯಲ್ಲಿ ಬರೆಯುವ ವಿಧಾನವನ್ನು ಉತ್ತಮ ಪಡಿಸಿಕೊಂಡರೆ ಹೆಚ್ಚು ಅಂಕಗಳನ್ನು ಪಡೆಯಬಹುದು ಎಂದು ಹುಳಿಯಾರು-ಕೆಂಕೆರೆ ಬಿಎಂಎಸ್ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಪ್ರಾಚಾರ್ಯ ಪ್ರೊ.ಎಸ್.ಸಿ.ವೀರಣ್ಣ ತಿಳಿಸಿದರು. ಹುಳಿಯಾರಿನ ಸರ್ಕಾರಿ ಪದವಿ ಪೂರ್ವ ಕಾಲೇಜಿನಲ್ಲಿ ದ್ವಿತೀಯ ಪಿಯುಸಿ ವಿದ್ಯಾರ್ಥಿಗಳಿಗೆ ಗುರುವಾರ ಆಯೋಜಿಸಿದ್ದ ವಿಶೇಷ ಉಪನ್ಯಾಸ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ವಾರ್ಷಿಕ ಪರೀಕ್ಷೆಗೆ ಇನ್ನೂ 2 ತಿಂಗಳುಗಳು ಉಳಿದಿದೆ. ಈಗಲೂ ಶ್ರದ್ಧೆಯಿಂದ ಉತ್ತಮ ತಯಾರಿ ಮಾಡಿಕೊಂಡರೆ ಉತ್ತಮ ಅಂಕಗಳೊಂದಿಗೆ ಉತ್ತೀರ್ಣರಾಗಬಹುದು ಎಂದರಲ್ಲದೆ ಮಕ್ಕಳ ಕಲಿಕೆಗೆ ನೆರವಾಗಬೇಕಿದ್ದ ಮೊಬೈಲ್ ಇಂದು ಕಲಿಕೆಗೆ ಮಾರಕವಾಗುತ್ತಿದೆ. ಹಾಗಾಗಿ ಮೊಬೈಲ್ ಗೀಳಿನಿಂದ ಮೊದಲು ಹೊರಬಂದು ಕಲಿಕೆಯಲ್ಲಿ ಆಸಕ್ತಿ ಬೆಳಸಿಕೊಳ್ಳಬೇಕು ಎಂದರು. ಕಾಲೇಜಿನ ಪ್ರಾಚಾರ್ಯ ಕೃಷ್ಣಮೂರ್ತಿ ಸೇರಿದಂತೆ ಉಪನ್ಯಾಸಕರು, ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

# ಅಂಗನವಾಡಿ ಕಾರ್ಯಕರ್ತೆ, ಸಹಾಯಕಿ ಹುದೆಗೆ ಅರ್ಜಿ ಸಲ್ಲಿಸಲು ಅವಧಿ ವಿಸ್ತರಣೆ

**ಮೈಸೂರು:** ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ವತಿಯಿಂದ ಮೈಸೂರು ಜಿಲ್ಲಾ ವ್ಯಾಪ್ತಿಯ ಶಿಶು ಅಭಿವೃದ್ಧಿ ಯೋಜನೆಗಳಲ್ಲಿ ಖಾಲಿಯಿದ್ದ ಅಂಗನವಾಡಿ ಕಾರ್ಯಕರ್ತೆ ಹಾಗೂ ಸಹಾಯಕಿ ಹುದ್ದೆಗಳನ್ನು ಭರ್ತಿ ಮಾಡಲು ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದ್ದು, ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಕೆ ಪ್ರಕ್ರಿಯೆ ಪೂರ್ಣಗೊಳ್ಳದೆ ಇರುವ ಕಾರಣ ಅಂತಹ ಅಭ್ಯರ್ಥಿಗಳಿಗೆ ಮಾತ್ರ ಆನ್‌ಲೈನ್ ಮೂಲಕ ಪೂರ್ಣಗೊಳಿಸಲು ಡಿಸೆಂಬರ್ 26 ರಿಂದ ಜನವರಿ 5 ರ ವರೆಗೆ ಕಾಲಾವಕಾಶ ಕಲ್ಪಿಸಲಾಗಿದೆ. ಅರ್ಜಿ ಪೂರ್ಣಗೊಳ್ಳದೆ ಇರುವಂತಹ ಅಭ್ಯರ್ಥಿಗಳು ಆನ್‌ಲೈನ್ ವೆಬ್‌ಸೈಟ್ https://karnemakaone.Kar.nic.in/abcd/ ಮೂಲಕ ಅರ್ಜಿ ಸಲ್ಲಿಸಬಹುದಾಗಿದ್ದು, ಹೊಸದಾಗಿ ಅಭ್ಯರ್ಥಿಗಳು ಅರ್ಜಿ ಸಲ್ಲಿಸಲು ಅವಕಾಶವಿರುವುದಿಲ್ಲ. ನಿಗದಿತ ಅರ್ಜಿ ನಮೂನೆಯಲ್ಲಿ ಮಾಹಿತಿ ಭರ್ತಿ ಮಾಡಿ, ಭಾವಚಿತ್ರ ಹಾಗೂ ಸಹಿ ಮತ್ತು ತಮ್ಮ ದಾಖಲೆಗಳನ್ನು ಅಪ್‌ಲೋಡ್ ಹಾಗೂ ಆಧಾರ್ ಸಂಖ್ಯೆ ನಮೂದಿಸಿ, ಇ-ಹಸ್ತಾಕ್ಷರದೊಂದಿಗೆ ಅರ್ಜಿಯನ್ನು ಪೂರ್ಣಗೊಳಿಸಬೇಕು. ಹೆಚ್ಚಿನ ಮಾಹಿತಿಗಾಗಿ ಸಂಬಂಧಪಟ್ಟ ತಾಲ್ಲೂಕು ಶಿಶು ಅಭಿವೃದ್ಧಿ ಯೋಜನಾ ಕಛೇರಿಗಳಾದ ತಿ.ನರಸೀಪುರ-08227-297267, ಹುಣಸೂರು-08222-252254, ಹೆಚ್.ಡಿ.ಕೋಟೆ-08228-255320, ಮೈಸೂರು ನಗರ-0821-2492962, ಮೈಸೂರು ಗ್ರಾಮಾಂತರ-0821-2569940, ಕೆ.ಆರ್.ನಗರ 08223-262714, ಪಿರಿಯಾಪಟ್ಟಣ- 08223-274742, ನಂಜನಗೂಡು-08221-297188 ಹಾಗೂ ಬಿಳಿಕೆರೆ- 08221-297171 ನ್ನು ಸಂಪರ್ಕಿಸಬಹುದು ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕರು ತಿಳಿಸಿದ್ದಾರೆ.

# ಗೈರು ಹಾಜರಿ: ಕಾರಣ ಕೇಳಿ ನೋಟಿಸ್ ಜಾರಿ

**ರಾಮನಗರ:** ಹುಮೇರಾ ಕೌಸರ್, ದ್ವಿತೀಯ ದರ್ಜೆ ಸಹಾಯಕರು, ಸರ್ಕಾರಿ ಉರ್ದು ಪ್ರೌಢ ಶಾಲೆ, ಕನಕಪುರ ಟೌನ್, ಆದ ನೀವು 2022ರ ಜೂನ್ 30 ರಿಂದ ಈ ದಿನಾಂಕದವರೆಗೂ ಶಾಲಾ ಕರ್ತವ್ಯಕ್ಕೆ ಅನಧಿಕೃತ ಗೈರು ಹಾಜರಾಗಿರುತ್ತೀರಿ. ಈ ಹಿನ್ನೆಲೆಯಲ್ಲಿ ನೀವು ಶಾಲಾ ಕರ್ತವ್ಯದಲ್ಲಿ 2022ರ ಜೂನ್ 30ರ ಅಪರಾಹ್ನದಿಂದ ಅನಧಿಕೃತ ಗೈರು ಹಾಜರಾಗಿರುವುದು ಕರ್ನಾಟಕ ನಾಗರೀಕ ಸೇವಾ (ನಡತೆ ನಿಯಮಗಳು) 1966 ಮತ್ತು 2021 ನಿಯಮ 3 (--) ರ ಉಲ್ಲಂಘನೆಯಡಿ ನಿಮ್ಮ ವಿರುದ್ಧ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ ನಿಯಂತ್ರಣ ಮತ್ತು ಅಫಿಲು) ನಿಯಮ 1957 ರಡಿ ಶಿಸ್ತು ಕ್ರಮಕ್ಕೆ ಅರ್ಹರಾಗಿರುತ್ತೀರಿ ಸಿಸಿಎ ನಿಯಮ 1957 ನಿಮಯದಂತೆ ನಿಮ್ಮ ವಿರುದ್ಧ ವಿಚಾರಣೆ ನಡೆಸಲು ವಿಚಾರಣಾಧಿಕಾರಿಗಳನ್ನು ನೇಮಿಸಿದ್ದು ನಿಮಗೆ ವಿಚಾರಣೆಗೆ ಹಾಜರಾಗುವಂತೆ ಅನೇಕ ಪತ್ರಗಳನ್ನು ಜಾರಿಗೊಳಿಸಿದ್ದರೂ ಸಹ ನೀವು ವಿಚಾರಣೆಗೆ ಹಾಜರಾಗದೆ ಗೈರುಹಾಜರಾಗಿರುತ್ತೀರಿ. ಆದ್ದರಿಂದ ಈ ಪತ್ರಿಕಾ ಪ್ರಕಟಣೆ ಮೂಲಕ ತಿಳಿಸಲಾಗುತ್ತಿದ್ದು ಈ ಪತ್ರಿಕಾ ಪ್ರಕಟಣೆಗೊಂಡ 10 ದಿನಗಳ ಒಳಗಾಗಿ ಉಪನಿರ್ದೇಶಕರು (ಆಡಳಿತ) ಹಾಗೂ ಶಿಸ್ತು ಪ್ರಾಧಿಕಾರಿಗಳು, ಶಾಲಾ ಶಿಕ್ಷಣ ಇಲಾಖೆ, 02ನೇ ಮಹಡಿ, ಜಿಲ್ಲಾ ಪಂಚಾಯತ್ ಭವನ, ರಾಮನಗರ ಟೌನ್ ಮತ್ತು ಜಿಲ್ಲೆ-562159. ಇಲ್ಲಿಗೆ ಖುದ್ದು ಹಾಜರಾಗಿ ನಿಮ್ಮ ಸ್ವ ಹೇಳಿಕೆ ದಾಖಲಿಸಲು ತಿಳಿಸಿದೆ. ಒಂದು ವೇಳೆ ಈ ಪತ್ರಿಕಾ ಪ್ರಕಟಣೆ ಪ್ರಕಟಗೊಂಡ ನಂತರವೂ ಸಕ್ಷಮ ಪ್ರಾಧಿಕಾರಿಗಳ ಸಮ್ಮುಖದಲ್ಲಿ ಹಾಜರಾಗದೇ ಇದ್ದಲ್ಲಿ ನಿಮ್ಮ ವಿರುದ್ಧ ನಿಯಮಾನುಸಾರ ಏಕಪಡ?ಷಯವಾಗಿ ಶಿಸ್ತು ಕ್ರಮ ಜಾರಿಗೊಳಿಸಲಾಗುವುದು ಎಂದು ರಾಮನಗರ ಜಿಲ್ಲಾ ಶಾಲಾ ಶಿಕ್ಷಣ ಇಲಾಖೆಯ ಉಪನಿರ್ದೇಶಕರು (ಆಡಳಿತ) ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಮೊಬೈಲ್ ರಿಪೇರಿ ತರಬೇತಿ

**ರಾಮನಗರ:** ಶ್ರೀ ಧರ್ಮಸ್ಥಳ ಮಂಜುನಾಥೇಶ್ವರ ಶಿಕ್ಷಣ ಟ್ರಸ್ಟ್ ಮತ್ತು ಕೆನರಾ ಬ್ಯಾಂಕ್‌ನ ಸಹಯೋಗದಲ್ಲಿ ನಡೆಯುತ್ತಿರುವ ರುಡ್‌ಸೆಟ್ ಸಂಸ್ಥೆಯ ವತಿಯಿಂದ ಹಮ್ಮಿಕೊಂಡಿರುವ ಮೊಬೈಲ್ ರಿಪೇರಿ ಕುರಿತ 30 ದಿನಗಳ ಉಚಿತ ತರಬೇತಿಯು ಜನವರಿ 03 ರಿಂದ ಪ್ರಾರಂಭವಾಗಲಿದ್ದು, ಗ್ರಾಮೀಣ ಆಸಕ್ತ ನಿರುದ್ಯೋಗಿ ಯುವಕ-ಯುವತಿಯರು ಅರ್ಜಿ ಸಲ್ಲಿಸಬಹುದಾಗಿದೆ.ಆಸಕ್ತರು 18 ರಿಂದ 45 ವರ್ಷ ವಯೋಮಾನದವರಾಗಿದ್ದು, ಕನ್ನಡ ಭಾಷೆ ಓದಲು ಮತ್ತು ಬರೆಯಲು ಬಲ್ಲವರಾಗಿರಬೇಕು. ಬಿಪಿಎಲ್ ಕಾರ್ಡ್ ಅಥವಾ ಜಾಬ್ ಕಾರ್ಡ್ ಹಾಗೂ ಆಧಾರ್ ಕಾರ್ಡ್ನ್ನು ಕಡ್ಡಾಯವಾಗಿ ಹೊಂದಿರುವ ಗ್ರಾಮೀಣ ಅಭ್ಯರ್ಥಿಗಳಿಗೆ ಆದ್ಯತೆ ನೀಡಲಾಗುವುದು. ಅರ್ಜಿ ಸಲ್ಲಿಸಲು ಡಿ. 31 ಕೊನೆಯ ದಿನವಾಗಿದೆ. ತರಬೇತಿಯು ಕಡ್ಡಾಯವಾಗಿ ವಸತಿಯುತವಾಗಿದ್ದು, ತರಬೇತಿಯ ಅವಧಿಯಲ್ಲಿ ಉಚಿತವಾಗಿ ಊಟ ಮತ್ತು ವಸತಿ ನೀಡಲಾಗುವುದು ಹಾಗೂ ತರಬೇತಿ ಪೂರ್ಣಗೊಂಡ ನಂತರ ಕೇಂದ್ರ ಸರ್ಕಾರದ ಗ್ರಾಮೀಣಾಭಿವೃದ್ಧಿ ಸಚಿವಾಲಯದಿಂದ ಪ್ರಮಾಣಪತ್ರವನ್ನು ವಿತರಿಸಲಾಗುವುದು. ಆಸಕ್ತರು ಅರ್ಜಿ ಸಲ್ಲಿಸಲು ಹಾಗೂ ಹೆಚ್ಚಿನ ಮಾಹಿತಿಗಾಗಿ ರುಡ್‌ಸೆಟ್ ಸಂಸ್ಥೆ, ಅರಿಶಿನಕುಂಟೆ, ನೆಲಮಂಗಲ ತಾಲ್ಲೂಕು, ಬೆಂಗಳೂರು ಗ್ರಾಮಾಂತರ ಜಿಲ್ಲೆ, ಮೊಬೈಲ್ ಸಂಖ್ಯೆ: 9740982585 ಅನ್ನು ಸಂಪರ್ಕಿಸಬಹುದಾಗಿದೆ ಎಂದು ರುಡ್‌ಸೆಟ್ ಸಂಸ್ಥೆಯ ಬೆಂಗಳೂರು ಶಾಖೆಯ ನಿರ್ದೇಶಕ ರವಿಕುಮಾರ ತಿಳಿಸಿದ್ದಾರೆ.

# ಸಂವಿಧಾನ, ಬಾಬಾ ಸಾಹೇಬ್ ಅಂಬೇಡ್ಕರ್‌ಗೆ ಅವಮಾನಿಸಿದ್ದು ಕಾಂಗ್ರೆಸ್




**ಕೋಲಾರ:** ಪತ್ರಿಕಾಘೋಷ್ಠಿಯನ್ನು ಉದ್ದೇಶಿಸಿ ಮಾಜಿ ಸಂಸದರಾದ ಮುನಿಸ್ವಾಮಿಯವರು ಮಾತನಾಡಿ ರಾಹುಲ್ ಗಾಂಧಿ ನಾನು ಅಂಬೇಡ್ಕರ್ ಎಂಬ ಬಿತ್ತಿಪತ್ರಗಳನ್ನು ಹಿಡಿದಿದ್ದೀರಿ ನಿಮಗೆ ಆ ಅರ್ಹತೆಯಿಲ್ಲ ಅವರ ಪರವಾಗಿ ನಿಮ್ಮ ಕಾಂಗ್ರೆಸ್ ಪಕ್ಷದ ಕೊಡುಗೆ ಶೂನ್ಯ. ಎಪ್ಪತ್ತೈದು ಸಲ ಸಂವಿಧಾನದ ತಿದ್ದುಪಡಿ ,ಎಮರ್ಜೆನ್ಸಿ ಹೇರಿ ರಾಷ್ಟ್ರಪತಿ ಆಡಳಿತ ತಂದು ಪ್ರಜೆಗಳಿಗೆ ಮಾಡಿದ ಮೋಸವೇ ನಿಮ್ಮ ಸಾಧನೆ.

ಅವರ ಶವಸಂಸ್ಕಾರವನ್ನು ಮುಂಬಯಿಯ ಅನಾಥ ಶವಗಳನ್ನು ಸಂಸ್ಕಾರ ಮಾಡುವ ಸ್ಥಳದಲ್ಲಿ ಅವರ ಸಂಸ್ಕಾರ ಮಾಡಲು ಅವ್ಯವಸ್ಥಿತವಾಗಿ ರವಾನಿಸಿದ್ದು ನಿಮ್ಮ ಸಾಧನೆ.

ದೇಶದಲ್ಲಿ ಇಂಡಿಯಾ ಮಿತ್ರಕೂಟವಾದ ಆಲಿಬಾಬಾ ಚಾಲೀಸ್ ಚೋರ್ ನವರು ಮಾಡುತ್ತಿರುವ ಪ್ರತಿಭಟನೆಗಳು ಕೇವಲ ವೋಟ್‌ಗಾಗಿ ಮತ್ತು ಹಿಂದುಳಿದವರನ್ನು ಓಲೈಸುವ ಸಲುವಾಗಿ ನಿಮ್ಮ ನಾಟಕಗಳು ಸಾಕು ಬಾಬಾರವರು ಬದುಕಿದ್ದಾಗ ಅವಮಾನ ಇಂದು ಸನ್ಮಾನ ಎಂಬಂತೆ ನಡೆಯುತ್ತಿರುವುದು ಹಾಸ್ಯಾಸ್ಪದ . ನಿಮ್ಮ ಹುಸಿಸುಳ್ಳುಗಳು ಇಂದು ನಂಬುವವರಿಲ್ಲ ನೆಹರೂರವರ ಅಂದಿನ ನಡುವಳಿಕೆಗಳು ನನ್ನ ಪ್ರತೀ ಚುನಾವಣೆಗಳಲ್ಲೂ ನನ್ನ ಗೆಲುವಿಗೆ ಅಡ್ಡಗಾಲು ಬಿಟ್ಟರೆ ಅಂದಿನ ಕಾಂಗ್ರೆಸ್ ಸಾದನೆ ಏನಿಲ್ಲಾ ಎಂಬುದು ಎಲ್ಲರಿಗೂ ತಿಳಿದಿದೆ ನನ್ನ ರಾಜೀನಾಮೆ ಪಡೆದಿದ್ದೆ ನಿಮ್ಮ ಸಾಧನೇ ಸತ್ಯ ಎಂದು ಬಾಬಾ ಸಾಹೇಬರು ಅಂದೇ ನುಡಿದಿದ್ದರು.

ದಲಿತ ಸಂಘಟನೆಗಳ ಹಿರಿಯರಿಗೆ ನನ್ನ ಮನವಿ ನಿಜವಾಗಿಯೂ ಯಾರು ಅಂಬೇಡ್ಕರ್‌ರವರಿಗೆ ಅವಮಾನ ಮಾಡಿದ್ದಾರೆ ಎಂಬುದನ್ನು ತಿಳಿದು ನಿಮ್ಮ ನಿಲವುಗಳನ್ನು ತೆಗೆದುಕೊಳ್ಳಿ ಎಂದರು.

ಕೇವಲ ನಿಮ್ಮಕುಟುಂಬದವರಿಗೆ ಮತ್ತು ನಿಮ್ಮವರ ಸ್ಮಾರಕಗಳಿಗೆ ನೂರದಿನ್ನೈದು ಎಕರೆ ಜಾಗ ಅಂಬೇಡ್ಕರ್ ರವರ ಸಮಾಧಿಗೆ ಮತ್ತು ಸ್ಮಾರಕಕ್ಕಾಗಿ ನಿಮ್ಮ ಕೊಡುಗೆಯೇನು ಪಂಚತೀರ್ಥಗಳು ಅಭಿವೃದ್ಧಿ ,ಸ್ಮಾರಕಗಳ ನಿರ್ಮಾಣ ,ಅಂಬೇಡ್ಕರ್ ಭವನಗಳ ನಿರ್ಮಾಣ ಮತ್ತು ಅವರ ಅಂದಿನ ವಸ್ತುಗಳಿಗೆ ಮರುಜೀವ ನೀಡಿದ್ದು ಇದೇ ಕೇಂದ್ರಸರ್ಕಾರ ಅಮಿತ್ ಷಾ ರವರ ವಿರುದ್ಧ ಇಲ್ಲ ಸಲ್ಲದ ಆರೋಪಗಳನ್ನು ಮಾಡುತ್ತಾ ಇಂದು ಬಂದ್ ಮಾಡುವ ಹಂತಕ್ಕೆ ತಲುಪಿದ್ದು ಕೆಲವು ಸಂಘಟನೆಗಳು ಕೈ ಜೋಡಿಸಿರುವುದು ಎಷ್ಟರ ಮಟ್ಟಿಗೆ ಸರಿ ನೀವು ಆತ್ಮಾವಲೋಕನ ಮಾಡಿಕೊಳ್ಳಿ ಎಂದರು. ಜಿಲ್ಲಾಧ್ಯಕ್ಷರಾದ ಡಾಕ್ಟರ್ ವೇಣುಗೋಪಾಲ್ ಮಾತನಾಡಿ ಕಾಂಗ್ರೆಸ್ ಪಕ್ಷದವರು ಮತ್ತು ಅವರ ಒಕ್ಕೂಟ ದೇಶಾದ್ಯಂತ ಅಮಿತ್ ಶಾ ರವರ ವಿರುದ್ಧವಾಗಿ ಪ್ರತಿಭಟನೆಗಳನ್ನು ನಡೆಸಿಕೊಂಡು ಬಂದಿರುತ್ತಾರೆ ಇನ್ನೂ ಅಂಬೇಡ್ಕರ್ ರವರ ವಿರುದ್ಧ ಇಲ್ಲ ಸಲ್ಲದ ಪಿತೂರಿ ನಡೆಸಿ ಅಂದಿನಿಂದಲೂ ಅವಮಾನಿಸಿಕೊಂಡು ಬಂದಿದೆ ಅವರೂ ಜೀವಂತವಿದ್ದಾಗಲೂ ಮತ್ತು ತೀರಿಕೊಂಡಮೇಲೆ ಮಾಡಿದ ಕೆಲಸಗಳು ಮತ್ತು ನೀವು ಅನುಸರಿಸಿದ ನೀತಿ ರೀತಿಗಳು ಎಲ್ಲರ ಮುಂದಿದೆ ಎಂದರು .

ಕೆಜಿಎಫ್ ಕ್ಷೇತ್ರದ ಮಾಜಿ ಶಾಸಕರಾದ ವೈ ಸಂಪಂಗಿರವರು ಮಾತನಾಡಿ ಬಹಳ ಮುಖ್ಯವಾದ ವಿಷಯವೆಂದರೆ ಕಾಂಗ್ರೆಸ್ ವ್ಯವಸ್ಥಿತ ಸುಳ್ಳನ್ನು ನಿಜಮಾಡಲು ಹೊರಟಿರುವುದು ಹಾಸ್ಯಾಸ್ಪದ ಅಮಿತ್ ಷಾ ರವರ ವಿರುದ್ಧ ಅಪಪ್ರಚಾರ ಕೈಗೊಂಡಿದ್ದು ಎಷ್ಟರ ಮಟ್ಟಿಗೆ ಸರಿ ಅಂಬೇಡ್ಕರ್ ರವರ ಬಗ್ಗೆ ಮಾತನಾಡುವ ನೈತಿಕತೆಯಿಲ್ಲ ನಿಮ್ಮ ನಿಜರೂಪ ಎಲ್ಲರಿಗೂ ತಿಳಿದಿದೆ ಶೋಷಿತಸಮುದಾಯಕ್ಕೆ ನಿಮ್ಮ ಕೊಡುಗೆಯೇನು ನಿಮ್ಮ ವ್ಯವಸ್ಥಿತ ಪಿತೂರಿಯಿಂದ ವೋಟ್ ಬ್ಯಾಂಕ್ ಆಗಿ ಬಳಸಿಕೊಳ್ಳುತ್ತಿದ್ದೀರಿ ಅಷ್ಟೇ ಎರಡು ಬಾವುಟ ,ಎರಡು ಸಂವಿಧಾನ ,ಎರಡು ಪ್ರಧಾನಮಂತ್ರಿ ಮಾಡಲು ನಾನುತಯಾರಿಲ್ಲ ಎಂದಾಗ ನಿಮ್ಮ ನಡಿಗೆ ಹೇಗಿತ್ತು ಒಮ್ಮೆ ನೆನಪಿಸಿಕೊಳ್ಳಿ ಎಂದರು.

# ರಸ್ತೆ ಮರು ಡಾಂಬರೀಕರಣ ಕಾಮಗಾರಿ



**ಹನೂರು:** ಶ್ರೀ ಕ್ಷೇತ್ರ ಮಲೆ ಮಹದೇಶ್ವರ ಬೆಟ್ಟಕ್ಕೆ ತೆರಳುವ ಭಕ್ತಾದಿಗಳ ಭದ್ರತೆ ದೃಷ್ಟಿಯಿಂದ ಪಟ್ಟಣದಿಂದ ಮಲೆ ಮಹದೇಶ್ವರ ಬೆಟ್ಟದ ವರೆಗೆ ನಾಲ್ಕು ಪಥದ ರಸ್ತೆಯನ್ನು ಮಾಡಲು ಡಿಪಿಆರ್ ಸಿದ್ದಪಡಿಸಲಾಗುತ್ತಿದೆ ಎಂದು ಶಾಸಕ ಎಂ ಆರ್ ಮಂಜುನಾಥ ತಿಳಿಸಿದರು.

ತಾಲೂಕಿನ ಎಲ್ಲೇಮಾಳ ಗ್ರಾಮದಲ್ಲಿ 15 ಕೋಟಿ ವೆಚ್ಚದಲ್ಲಿ ರಸ್ತೆ ಮರು ಡಾಂಬರೀಕರಣ ಕಾಮಗಾರಿಗೆ ಚಾಲನೆ ನೀಡಿ ಅವರು ಮಾತನಾಡಿದರು.

ಶ್ರೀ ಕ್ಷೇತ್ರ ಮಲೆ ಮಹದೇಶ್ವರ ಬೆಟ್ಟಕ್ಕೆ ಇತ್ತೀಚಿನ ದಿನಗಳಲ್ಲಿ ಭಕ್ತಾದಿಗಳು ಹೆಚ್ಚಿನ ಸಂಖ್ಯೆಯಲ್ಲಿ ತೆರಳುತ್ತಿದ್ದಾರೆ. ಜಾತ್ರಾ ಮಹೋತ್ಸವ ಹಾಗೂ ಹಬ್ಬ ದಿನಗಳಲ್ಲಿ ಅಪಘಾತಗಳು ಹೆಚ್ಚಾಗಿ ನಡೆಯುತ್ತಿರುವುದರಿಂದ ಇದನ್ನು ತಡೆಗಟ್ಟುವ ದೃಷ್ಟಿಯಿಂದ ನಾಲ್ಕು ಪಥದ ರಸ್ತೆ ನಿರ್ಮಾಣ ಮಾಡಲು ಯೋಜನೆ ರೂಪಿಸುತಿದ್ದೇವೆ. ಮಲೆ ಮಹದೇಶ್ವರ ಆಶೀರ್ವಾದದಿಂದ ಈ ಯೋಜನೆ ಅನುಷ್ಠಾನಕ್ಕೆ ಬಂದರೆ ಸಾರ್ವಜನಿಕರಿಗೆ ಹಾಗೂ ಭಕ್ತಾದಿಗಳಿಗೆ ಹೆಚ್ಚಿನ ಅನುಕೂಲವಾಗಲಿದೆ ಎಂದು ತಿಳಿಸಿದರು.

ಕೊಳ್ಳೇಗಾಲದಿಂದ ಹನೂರು ಪಟ್ಟಣದವರೆಗೆ 108 ಕೋಟಿ ವೆಚ್ಚದಲ್ಲಿ ಮೊದಲನೇ ಹಂತದಲ್ಲಿ ಕೆ ಶಿಪ್ ಯೋಜನೆಯಡಿ ರಸ್ತೆ ಅಭಿವೃದ್ಧಿಪಡಿಸಲಾಗಿದೆ. ಎರಡನೇ ಹಂತದಲ್ಲಿ ಹನೂರು ಪಟ್ಟಣದಿಂದ ಪಾಲಾರ್ ಗ್ರಾಮದವರೆಗೆ ಎರಡನೇ ಹಂತದಲ್ಲಿ ಅಭಿವೃದ್ಧಿಪಡಿಸಲು ಈಗಾಗಲೇ ಪ್ರಸ್ತಾವನೆ ಸಲ್ಲಿಸಲಾಗಿದೆ ಅನುಮೋದನೆ ದೊರೆತ ನಂತರ ಕಾಮಗಾರಿ ಪ್ರಾರಂಭವಾಗಲಿದೆ ಎಂದರು.

ನಂಜುಂಡಪ್ಪ ರವರ ವರದಿಯಲ್ಲಿ ರಾಜ್ಯದ 10 ಜಿಲ್ಲೆಗಳು ಹಿಂದುಳಿದ ಜಿಲ್ಲೆಗಳು ಎಂದು ವರದಿ ನೀಡಲಾಗಿದೆ. ಆದರೆ ಇದುವರೆಗೂ ನಮ್ಮ ಚಾಮರಾಜನಗರ ಜಿಲ್ಲೆಗೆ ಹೆಚ್ಚಿನ ಅನುದಾನ ಬಾರದೆ ಇರುವುದರಿಂದ ಅಭಿವೃದ್ಧಿ ಕುಂಠಿತವಾಗಿದೆ. ಜನವರಿ ತಿಂಗಳಿನಲ್ಲಿ ಮಲೆ ಮಹದೇಶ್ವರ ಬೆಟ್ಟದಲ್ಲಿ ಕ್ಯಾಬಿನೆಟ್ ಸಭೆ ನಡೆಯಲಿದ್ದು ಕ್ಷೇತ್ರಕ್ಕೆ ಹೆಚ್ಚಿನ ಅನುದಾನ ಸಿಗುವ ನಿರೀಕ್ಷೆ ಇದೆ.ಮುಖ್ಯಮಂತ್ರಿಗಳು, ಉಪಮುಖ್ಯಮಂತ್ರಿಗಳು, ಸೇರಿದಂತೆ ಎಲ್ಲಾ ಸಚಿವರು ಹಾಗೂ ಸರ್ಕಾರದ ಮುಖ್ಯ ಕಾರ್ಯದರ್ಶಿಗಳು ಆಗಮಿಸುತ್ತಿರುವುದರಿಂದ ಇಲ್ಲಿನ ಸಮಸ್ಯೆಗಳನ್ನು ಅವರ ಗಮನಕ್ಕೆ ತಂದು ಹಂತ ಹಂತವಾಗಿ ಸಮಸ್ಯೆಗಳನ್ನು ಬಗೆಹರಿಸುವ ನಿಟ್ಟಿನಲ್ಲಿ ಪ್ರಾಮಾಣಿಕ ಪ್ರಯತ್ನ ಮಾಡುತ್ತೇನೆ ಎಂದು ತಿಳಿಸಿದರು.

ಸ್ಥಳದಲ್ಲಿಯೇ ಇದ್ದ ಎಇಇ ಚಿನ್ನಣ್ಣ ರವರಿಗೆ ಮರು ಡಾಂಬರೀಕರಣದ ಕ್ರಿಯಾಯೋಜನೆಯಂತೆ ಗುಣಮಟ್ಟದಿಂದ ಕಾಮಗಾರಿ ಮಾಡುವಂತೆ ನೋಡಿಕೊಳ್ಳಬೇಕು, ಒಂದೊಮ್ಮೆ ಕಳಪೆ ಕಾಮಗಾರಿ ಎಂದು ಕಂಡುಬಂದರೆ ಕಟ್ಟುನಿಟ್ಟಿನ ಕ್ರಮ ಕೈಗೊಳ್ಳಲಾಗುವುದು ಎಂದು ಎಚ್ಚರಿಕೆ ನೀಡಿದರು.

ಕ್ಷಮೆ ಕೇಳಿದ್ದರೆ ಪ್ರತಿಭಟನೆಗಳೇ ನಡೆಯುತ್ತಿರಲಿಲ್ಲ: ರಾಜ್ಯಸಭೆಯಲ್ಲಿ ಗೃಹ ಸಚಿವ ಅಮಿತ್ ಶಾ ರವರು ಅಂಬೇಡ್ಕರ್ ಅವರ ಬಗ್ಗೆ ಅವಹೇಳನ ಮಾಡಿರುವ ಬಗ್ಗೆ ದೇಶಾದ್ಯಂತ ಪ್ರತಿಭಟನೆ ಮಾಡುತ್ತಿರುವ ಬಗ್ಗೆ ಪತ್ರಕರ್ತರು ಪ್ರಶ್ನೆ ಮಾಡಿದ ವೇಳೆ ಶಾಸಕ ಎಂಆರ್ ಮಂಜುನಾಥ್ ಮಾತನಾಡಿ ಮಹಾತ್ಮ ಗಾಂಧೀಜಿ ನಂತರ ಡಾ.ಬಾಬಾ ಸಾಹೇಬ್ ಅಂಬೇಡ್ಕರ್ ಅವರು ದೇಶದ ಅತ್ಯುನ್ನತ ಮಹಾನ್ ವ್ಯಕ್ತಿಯಾಗಿದ್ದಾರೆ . ಅವರ ಬಗ್ಗೆ ಯಾರೊಬ್ಬರೂ ಕೀಳಾಗಿ ಮಾತನಾಡಬಾರದು ಅವರನ್ನು ದೇವರ ಸಮನಾಗಿ ನೋಡುತ್ತಿದ್ದಾರೆ. ಆದರೆ ಅವರ ಬಗ್ಗೆ ಈ ರೀತಿ ಮಾತನಾಡಿರುವುದು ಸರಿಯಲ್ಲ, ಈ ಬಗ್ಗೆ ವಿಷಾದ ವ್ಯಕ್ತಪಡಿಸಿ ಕ್ಷಮೆ ಕೇಳಿದ್ದರೆ ಇಷ್ಟೆಲ್ಲ ನಡೆಯುತ್ತಲೇ ಇರಲಿಲ್ಲ ಎಂದು ವಿಷಾದ ವ್ಯಕ್ತಪಡಿಸಿದರು. ಈ ವೇಳೆ ಪಟ್ಟಣ ಪಂಚಾಯಿತಿ ಉಪಾಧ್ಯಕ್ಷ ಆನಂದ್, ಗ್ರಾಮ ಪಂಚಾಯಿತಿ ಸದಸ್ಯರಾದ ಚಿನ್ನವೆಂಕಟ, ಡಿ.ಕೆ ರಾಜು, ಮುಖಂಡರಾದ ಮಂಜೇಶ್, ರಾಜುಗೌಡ, ವಿಜಯಕುಮಾರ್‌ಇದ್ದರು.

# ದೇವರ ವಾಕ್ಯವಾದ ಯೇಸುಕ್ರಿಸ್ತನ ಗುಡಾರದಲ್ಲಿ ಕ್ರಿಸ್ಮಸ್ ಆಚರಣೆ

**ಕೆಜಿಎಫ್:** ತಾಲ್ಲೂಕಿನ ಬೇತಮಂಗಲ ಗ್ರಾಮದಲ್ಲಿ ಕ್ರೈಸ್ತರು ತಮ್ಮ ಮನೆಗಳ ಮೇಲೆ ನಕ್ಷತ್ರ ಆಕಾರದ ಲೈಟಿಂಗ್ ಅಲಂಕರ ಮಾಡಿ ಕ್ರೀಸ್ ಮಸ್ ಗಿಡನೆಟ್ಟಿ ಯೇಸುವಿಗೆ ಪ್ರಾರ್ಥನೆ ಸಲ್ಲಿಸಿ ಗ್ರಾಮದ ಪ್ರಮುಖ ರಸ್ತೆಗಳಲ್ಲಿ ದೇವರ ನಾಮಗಳನ್ನು ಹೇಳಿಕೊಂಡು ಮೆರವಣಿಗೆ ನಡೆಸಿದರು.

ಯೇಸುಕ್ರಿಸ್ತನು ಮಾನವನ ಪಾಪ ಮತ್ತು ಕಷ್ಟಗಳನ್ನು ತೊಲಗಿಸಲು ಭೂ ಲೋಕಕ್ಕೆ ಬಂಧಂತಹ ದಿನ ವನ್ನು ನಾವು ಕ್ರಿಸ್ಮಸ್ ಹಬ್ಬವನ್ನಾಗಿ ಆಚರಿಸುತ್ತೇವೆ ಎಂದು ಚರ್ಚಿನ ಫಾದರ್ ಗಿಡಿಯೋನ್ ಪೆರುಮಾಳ್ ಮತ್ತು ಜಾನ್ ಸತೀಶ್ ಹೇಳಿದರು.

ದೇವರ ವಾಕ್ಯವಾದ ಯೇಸುಕ್ರಿಸ್ತನ ಗುಡಾರವು ಈ ದೇವಾಲಯ ಗ್ರಾಮದ ಸರ್ಕಾರಿ ಆಸ್ಪತ್ರೆಯ ಹಿಂಭಾಗ ಇದೆ. ಪ್ರತಿ ವರ್ಷವೂ ಕ್ರಿಸ್ಮಸ್ ಹಬ್ಬವನ್ನು ಮೋದಲನೆಯದಾಗಿ ಕ್ರೈಸ್ತರು ಇರುವಂತಹ ಗ್ರಾಮಗಳಲ್ಲಿ ಮನೆ ಮನೆಗಳಿಗೂ ಹೋಗಿ ದೇವರ ಹುಟ್ಟುಹಬ್ಬದ ಶುಭಾಶಯಗಳು ತಿಳಿಸಿ ಪ್ರಾರ್ಥನೆ ಮಾಡಿ ನಂತರ ಚರ್ಚಿನಲ್ಲಿ ವಿವಿಧ ಬಗೆಯ ಹೂವು ಲೈಟಿಂಗ್ ಬಣ್ಣ ಬಣ್ಣದ ಕಗದಗಳಿಂದ ಸಿಂಗಾರಿಸಿ ಹಬ್ಬದ ಮುಂದಿನ ದಿನ ವಿವಿಧ ವೇಷ ಭೂಷಣ ಗಳೊಂದಿಗೆ ಗ್ರಾಮದಲ್ಲಿ ಸಂಚರಿಸಿ ನಂತರ ರಾತ್ರಿ ಪೂರ್ತಿ ದೇವರ ಪ್ರಾರ್ಥನೆಯನ್ನು ಮಾಡುತ್ತಾರೆ ನಂತರ ಹಬ್ಬಕ್ಕೆ ಬರುವ ಮಕ್ಕಳಿಗೆ,ಬಡ ಕುಟುಂಬಗಳಿಗೆ ಯೇಸುವಿನ ಹೆಸರಿನಲ್ಲಿ ಬಟ್ಟೆಗಳನ್ನು ವಿತರಿಸುತ್ತಾರೆ.

ಚರ್ಚಿನಲ್ಲಿ ಡ್ಯಾನ್ಸ್ ಮತ್ತು ದೇವರ ವಾಕ್ಯದ ಪ್ರಕಾರ ನಾಟಕ ನಡೆಯಿತು. ಹಬ್ಬಕ್ಕೆ ಮುಂಚೆ ದಿನ ಸಾಯಂಕಾಲ ಎಲ್ಲಾ ಕ್ರೈಸ್ತರು ಸೇರಿ ಮಕ್ಕಳಿಗೆ ವಿಶೇಷ ಉಡುಗೆ ತೊಡುಗೆಗಳನ್ನು ಉಡಿಸಿ ಬ್ಯಾಂಡ್ ಸೆಟ್ ನೊಂದಿಗೆ ಗ್ರಾಮವೆಲ್ಲ ಮೆರವಣಿಗೆ ನಡೆಸಿ ಯೇಸುವಿನ ಜನನ ದಿನ ಮತ್ತು ತಾಯಿ ಮೇರಿ ದೇವಿಯನ್ನು ನೆನೆದು ಸಿಹಿಯನ್ನು ಹಂಚಿ ಸಂಭ್ರಮಿಸಿ ಹಬ್ಬದ ಪ್ರಯುಕ್ತ ಚರ್ಚಿನಲ್ಲಿ ಮಕ್ಕಳಿಂದ ನೃತ್ಯ, ಹಾಡುಗಾರಿಕೆ,ನಾಟಕ ಪ್ರದರ್ಶನ ಮುಂತಾದ ಹಲವು ಕಾರ್ಯಕ್ರಮಗಳನ್ನು ಹಮ್ಮಿಕೊಂಡಿದ್ದರು.






**ಕೆನರಾ ಬ್ಯಾಂಕ್ ನಲ್ಲಿ ಸುಮಾರು 3 ದಶಕಕ್ಕೂ ಹೆಚ್ಚು ವರ್ಷಗಳ ಸುದೀರ್ಘ ಸೇವೆ ಸಲ್ಲಿಸಿ ಡಿಸೆಂಬರ್ 31, 2024 ರಂದು ಸೇವೆಯಿಂದ ನಿವೃತ್ತರಾಗುತ್ತಿರುವ ಬ್ಯಾಂಕ್ ನ ಮುಖ್ಯ ಮಹಾ ಪ್ರಬಂಧಕರಾದ ಕೆ ಜೆ ಶ್ರೀಕಾಂತ್ ಮತ್ತು ಉಪ ಮಹಾ ಪ್ರಬಂಧಕರಾದ ಬಿ ಪಾರ್ಶ್ವನಾಥ್ ರವರನ್ನು ಬ್ಯಾಂಕರ್ಸ್ ಕನ್ನಡಿಗರ ಬಳಗವು ಗೌರವಿಸಿ, ಸನ್ಮಾನಿಸಿತು. ಈ ಸಂದರ್ಭದಲ್ಲಿ ಬಳಗದ ಸದಸ್ಯರಾದ ಶ್ರೀ ಎಂ ವೆಂಕಟೇಶ ಶೇಷಾದ್ರಿ, ಮತ್ತು ಶ್ರೀ ಕೆ ಜಿ ಸಂಪತ್ ಕುಮಾರ್ ಉಪಸ್ಥಿತರಿದ್ದರು.**

# ಬಡವರಿಗೆ ಬಟ್ಟೆ ವಿತರಣೆ

**ಕೋಲಾರ:** ಕ್ರಿಸ್ಮಸ್ ಹಬ್ಬದ ಪ್ರಯುಕ್ತವಾಗಿ ಕಾಂಗ್ರೆಸ್ ಪದವೀಧರ ಘಟಕದ ಜಿಲ್ಲಾ ಅಧ್ಯಕ್ಷ ಹಾಗೂ ಕ್ರೈಸ್ತ ಯುವ ಮುಖಂಡ ಟಿ.ಎಸ್ ಸುಧೀರ್ ಅವರ ನೇತೃತ್ವದಲ್ಲಿ ನಗರದ ಹೊರವಲಯದ ಟಮಕದಲ್ಲಿ ಬುಧವಾರ ಬಡವರಿಗೆ ಬಟ್ಟೆ ವಿವರಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಟಿ.ಎಸ್ ಸುಧೀರ್ ಕ್ರಿಸ್ಮಸ್ ಹಬ್ಬದ ಸಂಭ್ರಮದ ಜೊತೆಗೆ ಬಡವರಿಗೆ ಒಂದಿಷ್ಟು ಸೇವಾ ಮನೋಭಾವ ಮಾಡುವುದು ಹಬ್ಬದ ವಿಶೇಷವಾಗಿದೆ. ಮುಂದಿನ ವರ್ಷ ಜಿಲ್ಲೆಯಾದ್ಯಂತ ಇರುವ 50 ಚರ್ಚ್ ಗಳನ್ನು ಸೇರಿಸಿಕೊಂಡು ಹತ್ತು ಸಾವಿರ ಜನಕ್ಕೆ ಬಟ್ಟೆ ವಿತರಿಸಲಾಗುತ್ತದೆ ಬಡವರಿಗೆ ಸೇವೆ ಮಾಡುವುದು ನಿಜವಾದ ದೇವರಿಗೆ ಮಾಡುವ ಸೇವೆಗೆ ಸಮವಾಗಿದೆ ಉಳ್ಳುವರು ಇಲ್ಲದವರ ಕೈ ಹಿಡಿಬೇಕು ಎಂಬುದು ಏಸು ಕ್ರಿಸ್ತನ ಸಂದೇಶವಾಗಿದೆ ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ನಿವೃತ್ತ ಎಎಸ್ಐ ಸದಾಶಿವಯ್ಯ, ಕ್ರೈಸ್ತ ಮುಖಂಡರಾದ ನಾಗರಾಜ್, ಗಿರೀಶ್ ಮುಂತಾದವರು ಇದ್ದರು.



# ಬ್ರಾಹ್ಮಣ ಸಂಘದ ಸರ್ವ ಸದಸ್ಯರ ಮಹಾಸಭೆ

**ಬೆಂಗಳೂರು:** ಅರುವೇಲು ನಿಯೋಗಿ ಬ್ರಾಹ್ಮಣ ಸಂಘದ 15ನೇ ವರ್ಷದ ಸರ್ವ ಸದಸ್ಯರ ಮಹಾಸಭೆಯನ್ನು ನಗರದ ಬುಲ್ ಟೆಂಪಲ್ ರಸ್ತೆಯಲ್ಲಿರುವ ಗಾಂಜಾಂ ಮಂಟಪದಲ್ಲಿ ಆಯೋಜಿಸಲಾಗಿತ್ತು.

ಈ ಸಭೆಯನ್ನು ಉದ್ದೇಶಿಸಿ ಸಂಘದ ಅಧ್ಯಕ್ಷರಾದ ವೈ ಆರ್ ಜನಾರ್ಧನ್ ರಾವ್ ರವರು ಮಾತನಾಡಿ ನಮ್ಮ ಸಂಘ 15 ವರ್ಷ ಪೂರೈಸಿದ್ದು ಹಲವು ಉತ್ತಮ ಯೋಜನೆಗಳನ್ನು ಕಾರ್ಯರೂಪಕ್ಕೆ ತಂದಿದೆ ಅದರಂತೆ ಈ ವರ್ಷದ ಯೋಜನೆಯಾಗಿ ವಿದ್ಯಾರ್ಥಿಗಳ ವಿದ್ಯಾಭ್ಯಾಸಕ್ಕೆ ಹೆಚ್ಚಿನ ಮಹತ್ವ ನೀಡಲಾಗುತ್ತಿದೆ. ಸರ್ವ ಸದಸ್ಯರು ಈ ಯೋಜನೆಗೆ ಸಹಕರಿಸಬೇಕಾಗಿ ವಿನಂತಿಸುತ್ತೇನೆ ಎಂದರು. ಸಂಘದ ಕಾರ್ಯದರ್ಶಿಗಳಾದ ನರಸಾರಾಂರಾವ್ ರವರು ಸಂಘದ ವಾರ್ಷಿಕ ಸಾರ್ವ ಸದಸ್ಯರ ಮಹಾಸಭೆಯ ತಿಳುವಳಿಕೆ ಪತ್ರ ಮಂಡಿಸಿದರು, ಇಂದಿನ ಸಭೆಯ ನಡವಳಿಕೆಗಳನ್ನು ಓದಿ ದಾಖಲಿಸಿ, ಸಂಘದ 2023-24ನೇ ಸಾಲಿನ ವಾರ್ಷಿಕ ವರದಿ, ಸಂಘದ ಹೊಸ ನಿರ್ಣಯ ಹಾಗೂ ಯೋಜನೆಗಳ ಕುರಿತು ಮತ್ತು 2024-25 ನೇ ಸಾಲಿನ ಅಂದಾಜು ಆಯವ್ಯಾಯವನ್ನು ಸಭೆಯಲ್ಲಿ ಸರ್ವ ಸದಸ್ಯರ ಮುಂದೆ ಮಂಡಿಸಿದರು. ಸಭೆಯ ನಿರ್ಣಯಗಳನ್ನು ಹಾಗೂ ಲೆಕ್ಕ ತಪಾಸಣಾ ವರದಿಯನ್ನು ಪರಿಶೀಲಿಸಿ ಸರ್ವ ಸದಸ್ಯರು ಅಂಗೀಕರಿಸಿದರು. ಈ ಸಭೆಯಲ್ಲಿ ಸ್ವರ್ಗಸ್ಥರಾದ ಸಂಘದ ಸದಸ್ಯರುಗಳಿಗೆ ಸಂತಾಪ ಸೂಚಿಸಲಾಯಿತು. ಈ ಸಂದರ್ಭದಲ್ಲಿ ಸಂಘದ ಉಪಾಧ್ಯಕ್ಷರಾದ ಕೆ ವಿ ವೆಂಕಟೇಶಯ್ಯ, ಖಜಾಂಚಿಗಳಾದ ವಾಸುದೇವ ರಾವ್, ಸಂಘದ ಪದಾಧಿಕಾರಿಗಳು ಸದಸ್ಯರು ಭಾಗವಹಿಸಿದ್ದರು.




# ಕೃಷಿಕ ಸಮಾಜದ ಅಧ್ಯಕ್ಷರಾಗಿ ಶಫೀಉಲ್ಲಾ, ಪ್ರಧಾನ ಕಾರ್ಯದರ್ಶಿಯಾಗಿ ರಮೇಶ್ ಅವಿರೋಧ ಆಯ್ಕೆ

**ಪಿರಿಯಾಪಟ್ಟಣ:** ಪಿರಿಯಾಪಟ್ಟಣ ತಾಲೂಕು ಕೃಷಿಕ ಸಮಾಜದ ಅಧ್ಯಕ್ಷರಾಗಿ ಶಫೀಉಲ್ಲಾ ಹಾಗೂ ಪ್ರಧಾನ ಕಾರ್ಯದರ್ಶಿಯಾಗಿ ಹೆಚ್.ಡಿ.ರಮೇಶ್ ಅವಿರೋಧವಾಗಿ ಆಯ್ಕೆಯಾದರು.

ಪಟ್ಟಣದ ಕೃಷಿ ಇಲಾಖೆ ಕಚೇರಿ ಆವರಣದಲ್ಲಿ ಗುರುವಾರ ಚುನಾವಣೆ ನಡೆದು ಅಧ್ಯಕ್ಷ ಸ್ಥಾನಕ್ಕೆ ಶಫಿ ಉಲ್ಲಾ, ಉಪಾಧ್ಯಕ್ಷ ಸ್ಥಾನಕ್ಕೆ ಕೆ.ಪ್ರಕಾಶ್, ಪ್ರಧಾನ ಕಾರ್ಯದರ್ಶಿ ಸ್ಥಾನಕ್ಕೆ ಎಚ್.ಡಿ.ರಮೇಶ್, ಖಜಾಂಚಿ ಸ್ಥಾನಕ್ಕೆ ಸುನೀಲ್, ಜಿಲ್ಲಾ ಪ್ರತಿನಿಧಿ ಸ್ಥಾನಕ್ಕೆ ಕೆ.ಎ.ದೀಪಕ್ ರವರುಗಳು ತಲಾ ಒಂದೊಂದು ನಾಮಪತ್ರ ಮಾತ್ರ ಸಲ್ಲಿಸಿ ಬೇರೆ ಯಾವುದೇ ನಾಮಪತ್ರಗಳು ಬಾರದಿರುವ ಕಾರಣಕ್ಕೆ ಚುನಾವಣಾಧಿಕಾರಿಯಾಗಿ ಕರ್ತವ್ಯ ನಿರ್ವಹಿಸಿದ್ದ ಕೃಷಿ ಇಲಾಖೆ ಸಹಾಯಕ ನಿರ್ದೇಶಕ ಪ್ರಸಾದ್ ರವರು ಇವರ ಅವಿರೋಧ ಆಯ್ಕೆಯನ್ನು ಘೋಷಣೆ ಮಾಡಿದರು. ಈ ಸಂದರ್ಭದಲ್ಲಿ ನೂತನ ಅಧ್ಯಕ್ಷ ಶಫಿ ಉಲ್ಲಾ ಮಾತನಾಡಿ ಸಮಿತಿಯು ರೈತರ ಹಿತ ಕಾಯುವಲ್ಲಿ ಪ್ರಾಮಾಣಿಕವಾಗಿ ಶ್ರಮಿಸುತ್ತದೆ. ರೈತರಿಗೆ ತಲುಪಬೇಕಾದ ಸವಲತ್ತುಗಳನ್ನು ತಲುಪಿಸುವ ಜೊತೆಗೆ ಅಭಿವೃದ್ಧಿ ಕಾರ್ಯಗಳನ್ನು ಸಾರ್ವಜನಿಕರಿಗೆ ನೀಡುತ್ತೇವೆ ಎಂದರು.

ಈ ಸಂದರ್ಭದಲ್ಲಿ ಸಂಘದ ಉಪಾಧ್ಯಕ್ಷ ಕೆ.ಪ್ರಕಾಶ್, ಪ್ರಧಾನ ಕಾರ್ಯದರ್ಶಿ ಹೆಚ್.ಡಿ.ರಮೇಶ್, ಖಜಾಂಚಿ ಸುನೀಲ್, ಜಿಲ್ಲಾ ಪ್ರತಿನಿಧಿ ಕೆ.ಎ.ದೀಪಕ್, ನಿರ್ದೇಶಕ ರಾದ ಆರ್.ಡಿ. ವೆಂಕಟೇಶ್ , ಪ್ರವೀಣ್ ಕುಮಾರ್, ಆರ್.ಟಿ.ವೆಂಕಟೇಶ್, ತಿಮ್ಮೇಗೌಡ, ಎಂ.ಸಿ.ಅಶೋಕ್, ಚಂದ್ರಪ್ಪ, ಸೈಯದ್ ಸುಹೇಲ್, ಕೆ.ಟಿ.ಪ್ರಕಾಶ್ ನಾಗೆಗೌಡ ಮುಖಂಡರಾದ ಶಂಕರೇಗೌಡ, ಜಗದೀಶ್, ವೆಂಕಟೇಶ್, ಸುಹೇಲ್, ಪ್ರಕಾಶ್, ವಿಷ್ಣು ಸೇರಿದಂತೆ ಇತರರು ಹಾಜರಿದ್ದರು.



### ಸಾರ್ವಜನಿಕ ಶಿಕ್ಷಣ ಇಲಾಖೆ ನಿವೃತ್ತ ಉಪನಿರ್ದೇಶಕ ಟಿ ಬಸವರಾಜ್ ಸಲಹೆ

# ನಿವೃತ್ತ ಶಿಕ್ಷಕರು ಆರೋಗ್ಯದ ಬಗ್ಗೆ ಕಾಳಜಿ ವಹಿಸಿ

**ಪಿರಿಯಾಪಟ್ಟಣ:** ನಿವೃತ್ತ ಶಿಕ್ಷಕರು ತಮ್ಮ ಸೇವಾವಧಿ ಪೂರ್ಣಗೊಂಡ ನಂತರ ಆರೋಗ್ಯದ ಬಗ್ಗೆ ಹೆಚ್ಚಿನ ಕಾಳಜಿ ವಹಿಸುವ ಮೂಲಕ ರೋಗರುಜಿನಗಳಿಂದ ದೂರ ಉಳಿಯಬೇಕು ಎಂದು ಸಾರ್ವಜನಿಕ ಶಿಕ್ಷಣ ಇಲಾಖೆಯ ನಿವೃತ್ತ ಉಪನಿರ್ದೇಶಕ ಟಿ ಬಸವರಾಜ್ ತಿಳಿಸಿದರು.

ಪಟ್ಟಣದ ಶಿಕ್ಷಕರ ಸಭಾಂಗಣದಲ್ಲಿ ತಾಲೂಕು ನಿವೃತ್ತ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ವತಿಯಿಂದ ಆಯೋಜಿಸಿದ್ದ ವಾರ್ಷಿಕ ಮಹಾಸಭೆ ಹಾಗೂ ಹಿರಿಯ ಶಿಕ್ಷಕರಿಗೆ ಸನ್ಮಾನ ಸಮಾರಂಭದಲ್ಲಿ ಮಾತನಾಡಿದರು.

ಮನುಷ್ಯ ಮಗುವಾಗುವುದು ಎರಡೇ ಬಾರಿ ಒಂದು ಬಾಲ್ಯಾವಸ್ಥೆಯಲ್ಲಿ ಮತ್ತೊಂದು ವೃದ್ಧಾವಸ್ಥೆಯಲ್ಲಿ ನಮ್ಮ ಬಾಲ್ಯದ ಆರಂಭದ ಹಂತಗಳು ಹೇಗಿರುತ್ತದೋ ಅದೇ ರೀತಿಯಲ್ಲಿಯೇ ವೃದ್ಧಾಪ್ಯ ಕೂಡ. ತನ್ನಲ್ಲಿರುವ ಎಲ್ಲ ದೈಹಿಕ ಶಕ್ತಿಗಳು ಹಂತ ಹಂತವಾಗಿ ಕಳೆದು ಶರೀರದ ಜತೆಗೆ ಎಲ್ಲವೂ ಕುಬ್ಜವಾಗತೊಡಗುತ್ತದೆ. ಅದೊಂದು ಸಹಜ ಪ್ರಕ್ರಿಯೆ. ಈ ವೇಳೆ ಹಿರಿಯಜೀವಗಳ ಆರೈಕ ಅತೀ ಅಗತ್ಯ, ಹಿರಿಯರಿಗೆ ಮನಸ್ಸಿಗೆ ನೋವು ಹಾಗೂ ಒಂದು ಸಣ್ಣ ಗಾಯವಾದರೂ ಸಾಕು ಹಿರಿ ಜೀವದ ಮನಸ್ಸು ಆತಂಕದಿಂದ ಕುಗ್ಗಿ ಹೋಗುತ್ತದೆ. ಹೀಗಾಗಿ ಅವರ ಆರೋಗ್ಯದ ಬಗ್ಗೆ ಹೆಚ್ಚಿನ ಕಾಳಜಿಯನ್ನು ಮನೆಮಂದಿಯೇ ವಹಿಸಿದರೆ ಅವರಲ್ಲಿರುವ ಆತಂಕವನ್ನು ದೂರ ಮಾಡಬಹುದು. ನಿವೃತ್ತಿ ಜೀವನದಲ್ಲಿ ಕೋಪ ಸಹಜ ಅದನ್ನು ಹತೋಟಿಯಲ್ಲಿ ಇಟ್ಟುಕೊಳ್ಳಬೇಕು, ಮನೆಯಲ್ಲಿ ನಡೆಯುವ ಸಣ್ಣಪುಟ್ಟ ಸಮಸ್ಯೆಗಳಿಗೆ ಎದೆಗುಂದಬಾರದು. ಪ್ರಸ್ತುತ ದಿನಗಳಲ್ಲಿ ಬಿಪಿ-ಶುಗರ್ ಒಂದು ಬಹುದೊಡ್ಡ ಕಾಯಿಲೆ ಎಂದು ಬಿಂಬಿಸಲೋಗುತ್ತಿದೆ ಆದರೆ ನಮ್ಮಲ್ಲಿ ಮನಸ್ಸಿನ ಆರೋಗ್ಯ ದೃಡವಾಗಿದ್ದರೆ ಈ ಬಿಪಿ ಶುಗರ್ ಲೆಕ್ಕಕ್ಕೆ ಬರುವುದಿಲ್ಲ, ಹಿರಿಯ ಜೀವಗಳು ತಾವು ಸೇವಿಸುವ ಆಹಾರ ಮತ್ತು ಔಷಧಗಳ ಬಗ್ಗೆ ಎಚ್ಚರವಹಿಸಬೇಕು ಕೆಲವೊಮ್ಮೆ ಹಿರಿಯರು ಗೊಂದಲದಿಂದಾಗಿ ತಪ್ಪಾದ ಔಷಧಗಳನ್ನು ತೆಗೆದುಕೊಳ್ಳುವ ಸಾಧ್ಯತೆ ಇರುತ್ತದೆ. ಅಲ್ಲದೇ ಸಮಯಕ್ಕೆ ಸರಿಯಾಗಿ ತೆಗೆದುಕೊಳ್ಳುವುದನ್ನು ಮರೆತುಬಿಡಬಹುದು. ಈ ಬಗ್ಗೆ ಮನೆಯವರು ಅವರ ಆರೈಕೆ ಬಗ್ಗೆ ಗಮನ ಹರಿಸಬೇಕು ಎಂದರು.

ಈ ಸಂದರ್ಭದಲ್ಲಿ ಸಂಘದ ಅಧ್ಯಕ್ಷ ಕೆ.ಪಿ.ಚಂದ್ರಪ್ಪ ಮಾತನಾಡಿ 2023 ರಲ್ಲಿ ಸ್ಥಾಪನೆಗೊಂಡು ಸರ್ವರ ಸಹಕಾರದಿಂದ ಉತ್ತಮವಾಗಿ ಕಾರ್ಯ ನಿರ್ವಹಿಸುತ್ತಾ ಬಂದಿದೆ ಪ್ರಸ್ತುತ ಸಂಘದಲ್ಲಿ 120 ಮಂದಿ ಸದಸ್ಯರಿದ್ದು, 76 ಜನ ಅಜೀವ ಸದಸ್ಯತ್ವ ಪಡೆದಿದ್ದಾರೆ ಆದ್ದರಿಂದ ಎಲ್ಲರೂ ಅಜೀವ ಸದಸ್ಯತ್ವ ಪಡೆಯುವ ಮೂಲಕ ಸಂಘದ ಅಭಿವೃದ್ಧಿಗೆ ಸಹಕರಿಸಬೇಕು ಸಂಘದ ಕಾರ್ಯಚಟುವಟಿಕೆಗಳನ್ನು ನಡೆಸಲು ಹಳೆಯ ಶಿಕ್ಷಕರ ಸಭಾಂಗಣದ ಪ್ರಾಂಗಣದಲ್ಲಿ ತಾತ್ಕಾಲಿಕ ಸ್ಥಳಾವಕಾಶ ಕಲ್ಪಿಸಬೇಕು ಎಂದರು.

ಈ ಸಂದರ್ಭದಲ್ಲಿ ಸಂಘದ ಎಂ.ಎನ್.ಮಲ್ಲಪ 2024-25 ನೇ ಸಾಲಿನಲ್ಲಿ ವಾರ್ಷಿಕ ವರದಿ ವಾಚಿಸಿದರು.

ಕಾರ್ಯಕ್ರಮದಲ್ಲಿ ಕ್ಷೇತ್ರ ಶಿಕ್ಷಣಾಧಿಕಾರಿ ರವಿ ಪ್ರಸನ್ನ, ಸಂಘದ ಉಪಾಧ್ಯಕ್ಷ ಎಂ.ರಾಮೇಗೌಡ, ಖಜಾಂಚಿ ಶಿವಸ್ವಾಮಿ, ಸಹ ಕಾರ್ಯದರ್ಶಿ ಎಸ್.ಕೆ.ಸೋಮಶೇಖರ್, ಜಂಟಿ ಕಾರ್ಯದರ್ಶಿ ಬ್ರಹ್ಮೇಗೌಡ, ನಿರ್ದೇಶಕರಾಗಿ ಬಿ.ಆರ್.ಬಸವಲಿಂಗೇಗೌಡ, ಹೆಚ್.ಆರ್.ಕುಮಾರಸ್ವಾಮಿ, ನಾರಾಯಣ ಶೆಟ್ಟಿ, ಸ್ವಾಮಿ ನಾಯ್ಕ, ಕೆ.ಎಂ.ನಾಗಪ್ಪ, ಹೆಚ್.ಎಸ್ ಗೌರಮ್ಮ, ಕುಶಾಲ್ ಸೇರಿದಂತೆ ಮತ್ತಿತರರು ಉಪಸ್ಥಿತರಿದ್ದರು.



## ರೂ. 850 ಕೋಟಿ ಐಪಿಓಗಾಗಿ ಡಿ ಆರ್ ಎಚ್ ಪಿ ಸಲ್ಲಿಸಿದ ಇಂಡಿಕ್ಯೂಬ್ ಸ್ಪೇಸಸ್ ಲಿಮಿಟೆಡ್

ಸಮಗ್ರ, ಸುಸ್ಥಿರ ಮತ್ತು ತಂತ್ರಜ್ಞಾನ ಆಧರಿತ ಉತ್ಪನ್ನಗಳ ಮೂಲಕ ಸಾಂಪ್ರದಾಯಿಕ ಕಚೇರಿ ವಾತಾವರಣವನ್ನು ಬದಲಾಯಿಸಲು ಮೀಸಲಾಗಿರುವ, ನಿರ್ವಹಣೆಗೊಳಪಟ್ಟ ಕಾರ್ಯಸ್ಥಳವನ್ನು ಒದಗಿಸುವ ಕಂಪನಿ ಆಗಿರುವ ಇಂಡಿಕ್ಯೂಬ್ ಸ್ಪೇಸಸ್ ಲಿಮಿಟೆಡ್ ಆರಂಭಿಕ ಸಾರ್ವಜನಿಕ ಕೊಡುಗೆಯ (ಐಪಿಒ) ಮೂಲಕ ಹಣವನ್ನು ಸಂಗ್ರಹಿಸುವ ಉದ್ದೇಶದಿಂದ ಬಂಡವಾಳ ಮಾರುಕಟ್ಟೆ ನಿಯಂತ್ರಕರಾದ ಸೆಬಿಯಲ್ಲಿ ಡ್ರಾಫ್ಟ್ ರೆಡ್ ಹೆರಿಂಗ್ ಪ್ರಾಸ್ಪೆಕ್ಟಸ್ (ಡಿ ಆರ್ ಎಚ್ ಪಿ) ಅನ್ನು ಸಲ್ಲಿಸಿದೆ. ಇಂಡಿಕ್ಯೂಬ್ ಪ್ರಮುಖ ವೆಂಚರ್ ಕ್ಯಾಪಿಟಲ್ ಸಂಸ್ಥೆ ಆಗಿರುವ ವೆಸ್ಟ್ ಬ್ರಿಡ್ಜ್ ಕ್ಯಾಪಿಟಲ್ ಮತ್ತು ಹೆಸರಾಂತ ವೈಯಕ್ತಿಕ ಹೂಡಿಕೆದಾರರಾದ ಆಶಿಶ್ ಗುಪ್ತ, ಜೊತೆಗೆ ಸಂಸ್ಥೆಯ ಅಧ್ಯಕ್ಷ, ಕಾರ್ಯನಿರ್ವಾಹಕ ನಿರ್ದೇಶಕ ಮತ್ತು ಸಿಇಒ ಆಗಿರುವ ರಿಷಿ ದಾಸ್ ಮತ್ತು ಕಾರ್ಯನಿರ್ವಾಹಕ ನಿರ್ದೇಶಕರು ಹಾಗೂ ಸಿಓಓ ಆಗಿರುವ ಮೇಘನಾ ಅಗರ್ವಾಲ್ ಅವರ ಬೆಂಬಲವನ್ನು ಹೊಂದಿದೆ. ಬೆಂಗಳೂರು ಮೂಲದ ಈ ಕಂಪನಿಯ ಐಪಿಒ ಒಟ್ಟು ರೂ. 750 ಕೋಟಿಗಳವರೆಗಿನ ಈಕ್ವಿಟಿ ಷೇರುಗಳ ತಾಜಾ ಸಂಚಿಕೆಯನ್ನು ಒಳಗೊಂಡಿದೆ ಮತ್ತು ಪ್ರಮೋಟರ್ ಷೇರ್ ಹೋಲ್ಡರ್ ಗಳಾದ ರಿಷಿ ದಾಸ್ ಮತ್ತು ಮೇಘನಾ ಅಗರ್ವಾಲ್ ಅವರ ಒಟ್ಟು ರೂ. 100 ಕೋಟಿಗಳವರೆಗಿನ ಈಕ್ವಿಟಿ ಷೇರುಗಳ ಮಾರಾಟದ ಕೊಡುಗೆ (ಓಎಫ್‌ಎಸ್- ಆಫರ್ ಫಾರ್ ಸೇಲ್) ಅನ್ನು ಹೊಂದಿದೆ. ಇಂಡಿಕ್ಯೂಬ್ ಸ್ಪೇಸಸ್ ಲಿಮಿಟೆಡ್ ಹೊಸ ಸಂಚಿಕೆಯಿಂದ ಬರುವ ನಿವ್ವಳ ಆದಾಯವನ್ನು ಹೊಸ ಕೇಂದ್ರಗಳ ಸ್ಥಾಪನೆಗೆ ಬೇಕಾದ ಬಂಡವಾಳದ ವೆಚ್ಚಕ್ಕಾಗಿ (ರೂ. 462.6 ಕೋಟಿಗಳು); ಕಂಪನಿಯು ಪಡೆದ ಕೆಲವು ಸಾಲಗಳ ಪೂರ್ಣ ಅಥವಾ ಭಾಗಶಃ ಮರುಪಾವತಿ ಅಥವಾ ಪೂರ್ವಪಾವತಿಗಾಗಿ ಮತ್ತು ಸಾಮಾನ್ಯ ಕಾರ್ಪೊರೇಟ್ ಉದ್ದೇಶಗಳಿಗಾಗಿ ಬಳಸಿಕೊಳ್ಳಲು ಪ್ರಸ್ತಾಪಿಸುತ್ತದೆ.

## ಎಗ್ ಬಿರಿಯಾನಿ

### ಪಾಕ ಶಾಲೆ



### ಬೇಕಿರುವ ಸಾಮಗ್ರಿ

ಸೋನಾ ಮಸೂರಿ ಅಕ್ಕಿ- ಅರ್ಧ ಕೆಜಿ, ಮೊಟ್ಟೆ- ಬೇಯಿಸಿದ್ದು 5, ಚಕ್ಕೆ, ಲವಂಗ- ಸ್ವಲ್ಪ, ಏಲಕ್ಕಿ-5-6, ಪಲಾವ್ ಎಲೆ, ಕಲ್ಲು ಹೂ- ಸ್ವಲ್ಪ, ಶುಂಠಿ, ಬೆಳ್ಳುಳ್ಳಿ ಪೇಸ್ಟ್- 1 ಚಮಚ, ಹಸಿಮೆಣಸಿನ ಕಾಯಿ- ಉದ್ದಕ್ಕೆ ಕತ್ತರಿಸಿದ್ದು 6, ಈರುಳ್ಳಿ- 2 (ಸಣ್ಣಗೆ ಕತ್ತರಿಸಿದ್ದು), ಟೊಮೆಟೋ- 2 (ಸಣ್ಣಗೆ ಕತ್ತರಿಸಿದ್ದು), ಕೊಬ್ಬಂಬರಿ ಸೊಪ್ಪು- ಸ್ವಲ್ಪ, ಮೊಸರು ಅಥವಾ ತೆಂಗಿನ ಹಾಲು - ಅರ್ಧಬಟ್ಟಲು, ದನಿಯಾ ಪುಡಿ- 1 ಚಮಚ, ಖಾರದ ಪುಡಿ- 1 ಚಮಚ, ಬಿರಿಯಾನಿ ಮಸಾಲೆ ಪುಡಿ- ಅರ್ಧ ಚಮಚ, ಅರಿಶಿಣದ ಪುಡಿ- ಅರ್ಧ ಚಮಚ, ಉಪ್ಪು- ರುಚಿಗೆ ತಕ್ಕಷ್ಟು, ಎಣ್ಣೆ- ಸ್ವಲ್ಪ, ತುಪ್ಪ- ಎರಡು ಚಮಚ,

### ಮಾಡುವ ವಿಧಾನ

ಮೊದಲಿಗೆ ಒಲೆಯ ಮೇಲೆ ಕುಕ್ಕರ್ ಇಟ್ಟು ಅದಕ್ಕೆ ತುಪ್ಪ ಹಾಗೂ ಎಣ್ಣೆಯನ್ನು ಹಾಕಿ ಕಾಯಿಸಿಕೊಳ್ಳಿ ನಂತರ ಇದಕ್ಕೆ ಚಕ್ಕೆ, ಲವಂಗ, ಪಲಾವ್ ಎಲೆ, ಏಲಕ್ಕಿ, ಕಲ್ಲು ಹೂ ಹಾಕಿ ಕೆಂಪಗೆ ಮಾಡಿಕೊಳ್ಳಿ. ನಂತರ ಈರುಳ್ಳಿ ಹಾಗೂ ಹಸಿಮೆಣಸಿನ ಕಾಯಿ ಹಾಕಿ ಕೆಂಪಗೆ ಹುರಿದುಕೊಳ್ಳಿ. ಬಳಿಕ ಶುಂಠಿ, ಬೆಳ್ಳುಳ್ಳಿ ಪೇಸ್ಟ್, ಉಪ್ಪು, ಕೊತ್ತಂಬರಿ ಸೊಪ್ಪು ಹಾಗೂ ಟೊಮೆಟೋವನ್ನು ಹಾಕಿ ಕೆಂಪಗೆ ಹುರಿದುಕೊಳ್ಳಿ.

ನಂತರ ಖಾರದ ಪುಡಿ, ಅರಿಶಿಣ, ದನಿಯಾ ಪುಡಿ ಹಾಗೂ ಬಿರಿಯಾನಿ ಮಸಾಲಾ ಪುಡಿ ಹಾಕಿ ಮಿಶ್ರಣ ಮಾಡಿಕೊಳ್ಳಿ. ಬಳಿಕ ಮೊಸಲು ಅಥವಾ ತೆಂಗಿನ ಹಾಲು ಹಾಕಿ 5-10 ನಿಮಿಷ ಕುದಿಸಿ. ಅಳತೆಗೆ ತಕ್ಕಷ್ಟು ನೀರು ಹಾಗೂ ನೆನೆಸಿಟ್ಟುಕೊಂಡ ಅಕ್ಕಿಯನ್ನು ಹಾಕಿ ಕುಕ್ಕರ್ ಮುಚ್ಚಳ ಮುಚ್ಚಿ 2-3 ಕೂಗು ಕೂಗಿಸಿಕೊಂಡು, ಬೇಯಿಸಿದ ಮೊಟ್ಟೆಗಳನ್ನು ಮಿಶ್ರಣ ಮಾಡಿದರೆ, ರುಚಿಕರವಾದ ಎಗ್ ಬಿರಿಯಾನಿ ಸವಿಯಲು ಸಿದ್ಧ.

## ತಲೆನೋವಿನಿಂದ ಮುಕ್ತಿ ಪಡೆಯುವುದು ಹೇಗೆ?

### ಹೆಲ್ತ್ ಟಿಪ್ಸ್



ತಲೆನೋವಿನ ಸಮಸ್ಯೆ ಸಾಮಾನ್ಯವಾಗಿ ಎಲ್ಲರನ್ನೂ ಕಾಡುತ್ತದೆ. ಅದರಲ್ಲೂ ಚಳಿಗಾಲದಲ್ಲಿ ಶೀತ, ನೆಗಡಿ, ಕೆಮ್ಮಿನ ಜೊತೆಗೆ ತಲೆನೋವಿನ ಸಮಸ್ಯೆ ಕೂಡಾ ಬಾಧಿಸುತ್ತದೆ. ಕೆಲವು ಮನೆಮದ್ದುಗಳನ್ನು ಬಳಸುವ ಮೂಲಕ ತಲೆನೋವಿನ ಸಮಸ್ಯೆಯನ್ನು ಕಡಿಮೆ ಮಾಡಬಹುದು.

ತಲೆನೋವಿನ ಸಮಸ್ಯೆಯನ್ನು ಕಡಿಮೆ ಮಾಡಲು ಸೇಬು ಮತ್ತು ಉಪ್ಪನ್ನು ಒಟ್ಟಿಗೆ ಸೇವಿಸಿ. ಸೇಬು ಮತ್ತು ಉಪ್ಪನ್ನು ಒಟ್ಟಿಗೆ ಸೇವಿಸುವುದರಿಂದ ತಲೆನೋವು ಕಡಿಮೆಯಾಗುತ್ತದೆ. ಇದಕ್ಕಾಗಿ, 1 ಸೇಬನ್ನು ಕತ್ತರಿಸಿಕೊಂಡು ಅದಕ್ಕೆ ಉಪ್ಪು ಉದುರಿಸಿ ತಿನ್ನಿ. ಇದರಿಂದ ತಲೆನೋವಿನಿಂದ ಮುಕ್ತಿ ಪಡೆಯಬಹುದು.

ಲವಂಗದ ಸಹಾಯದಿಂದ, ತಲೆನೋವಿನ ಸಮಸ್ಯೆಯನ್ನು ಕಡಿಮೆ ಮಾಡಬಹುದು. ಲವಂಗದಲ್ಲಿರುವ ಗುಣಗಳು ತಲೆನೋವನ್ನು ನಿವಾರಿಸುವಲ್ಲಿ ಪರಿಣಾಮಕಾರಿ. ಇದಕ್ಕಾಗಿ ಕೆಲವು ಲವಂಗ ಮೊಗ್ಗುಗಳನ್ನು ತೆಗೆದುಕೊಂದು ಅದನ್ನು ಪ್ಯಾನ್ ಮೇಲೆ ಬಿಸಿ ಮಾಡಿ. ಲವಂಗದ ಪರಿಮಳ ಬರಲು ಆರಂಭವಾದಾಗ ಅದನ್ನು ಕರವಸ್ತ್ರದಲ್ಲಿ ಕಟ್ಟಿಕೊಳ್ಳಿ. ನಂತರ ಪದೇ ಪದೇ ಇದರ ವಾಸನೆ ನೋಡುತ್ತಾ ಇರಿ. ಹೀಗೆ ಮಾಡಿದರೆ ತಲೆನೋವು ಕಡಿಮೆಯಾಗುವುದು.

ತಲೆನೋವು ಕಡಿಮೆ ಮಾಡಲು, ಬೆಚ್ಚಗಿನ ನೀರಿಗೆ ನಿಂಬೆ ರಸ ಬೆರೆಸಿ ಕುಡಿಯಿರಿ. ಇದರಿಂದ ಸಾಕಷ್ಟು ಲಾಭವಾಗುವುದು. ಇದಕ್ಕಾಗಿ 1 ಗ್ಲಾಸ್ ಬೆಚ್ಚಗಿನ ನೀರನ್ನು ತೆಗೆದುಕೊಳ್ಳಿ. ಅದರಲ್ಲಿ ಕೆಲವು ಹನಿ ನಿಂಬೆ ರಸವನ್ನು ಬೆರೆಸಿ ಸೇವಿಸಿ. ಹೀಗೆ ಮಾಡಿದರೆ ತಲೆನೋವಿನಿಂದ ಮುಕ್ತಿ ಸಿಗುವುದು.

ತುಳಸಿ ಮತ್ತು ಶುಂಠಿಯ ರಸದ ಮಿಶ್ರಣವು ತಲೆನೋವು ನಿವಾರಿಸಲು ಪ್ರಯೋಜನಕಾರಿಯಾಗಿದೆ. ಇದಕ್ಕಾಗಿ ತುಳಸಿ ಎಲೆಗಳನ್ನು ಚೆನ್ನಾಗಿ ರುಬ್ಬಿಕೊಂಡು ರಸ ತೆಗೆದುಕೊಳ್ಳಿ. ಈಗ ಈ ರಸವನ್ನು ಸ್ವಲ್ಪ ಬಿಸಿ ಮಾಡಿ ಸೇವಿಸಿ. ಇದರಿಂದ ತಲೆನೋವಿನಿಂದ ಪರಿಹಾರ ಸಿಗುತ್ತದೆ.

ತಲೆನೋವನ್ನು ಹೋಗಲಾಡಿಸಲು ಲವಂಗದ ಎಣ್ಣೆಯಿಂದ ತಲೆಗೆ ಮಸಾಜ್ ಮಾಡಿ. ಇದು ನೋವನ್ನು ಕಡಿಮೆ ಮಾಡಲು ಸಹಾಯ ಮಾಡುತ್ತದೆ. ಲವಂಗದ ಎಣ್ಣೆಯನ್ನು ಹಣೆಯ ಮೇಲೆ ಹಚ್ಚಿ ಕೆಲವು ನಿಮಿಷಗಳ ಕಾಲ ಮಸಾಜ್ ಮಾಡಿ. ಇದರಿಂದ ತಲೆನೋವಿನಿಂದ ಮುಕ್ತಿ ಪಡೆಯಬಹುದು.

## ಕಣ್ಣಿನ ರಕ್ಷಣೆ

### ಬ್ಯೂಟಿ ಟಿಪ್ಸ್



ಬಹಳಷ್ಟು ಓದುವುದು, ಗಂಟೆಗಟ್ಟಲೆ ಚಲನಚಿತ್ರಗಳನ್ನು ನೋಡುವುದು, ನಿಮ್ಮ ಫೋನ್ ಅನ್ನು ಸ್ಕ್ರೋಲ್ ಮಾಡುತ್ತಿರುವುದು ಅಥವಾ ಕಂಪ್ಯೂಟರ್‌ನಲ್ಲಿ ಹೆಚ್ಚು ಸಮಯ ಕೆಲಸ ಮಾಡುವಾಗ ಕಣ್ಣಿನ ಆಯಾಸ ಸಂಭವಿಸಬಹುದು. ಇದು ನಿಮ್ಮ ಕಣ್ಣುಗಳ ಸುತ್ತಲಿನ ನರಗಳು ಬಿಗಿಯಾಗುವಂತೆ ಮಾಡುತ್ತದೆ ಮತ್ತು ನಿಮಗೆ ತಲೆನೋವು ಕೂಡ ನೀಡಬಹುದು. ಸೌತೆಕಾಯಿಯ ಸ್ಲೈಸ್ ಗಳನ್ನು ಕಣ್ಣಿನ ಮೇಲೆ ಇಡುವುದರಿಂದ ಇದು ಕಣ್ಣಿಗೆ ತಂಪನ್ನು ನೀಡುತ್ತವೆ. ಡಿಜಿಟಲ್ ನಿಂದಾಗಿ ನಿಮ್ಮ ಕಣ್ಣಿಗೆ ಉಂಟಾಗುವ ಅತಿಯಾದ ಒತ್ತಡಕ್ಕೆ ಸಹಾಯ ಮಾಡಲು ಸೌತೆಕಾಯಿಕ ಸ್ಲೈಸ್ ಗಳ ಬದಲಾಗಿ ನೀವು ತುರಿದ ಸೌತೆಕಾಯಿಯನ್ನು ಬಳಸಲು ಪ್ರಯತ್ನಿಸಬಹುದು. ಇದಕ್ಕಾಗಿ ನೀವು ಮಾಡಬೇಕಾದುದಿಷ್ಟೆ. ಅರ್ಧ ಸೌತೆಕಾಯಿಯನ್ನು ತುರಿದು ಅದರ ಹೆಚ್ಚಿನ ರಸವನ್ನು ಹಿಂಡಿ ಪೂರ್ತಿಯಾಗಿ ರಸ ತೆಗೆಯಬೇಡಿ. ನಂತರ ತುರಿದ ಈ ಸೌತೆಕಾಯಿಯನ್ನು ನಿಮ್ಮ ಕಣ್ಣುಗಳ ಸುತ್ತಲೂ ಹರಡಿ ಮತ್ತು ವಿಶ್ರಾಂತಿ ಪಡೆಯಿರಿ. ಸೌತೆಕಾಯಿಯ ತಂಪು ಮತ್ತು ತೇವಾಂಶವು ನಿಮ್ಮ ದಣಿದ ಕಣ್ಣುಗಳನ್ನು ಶಮನಗೊಳಿಸಲು ಮತ್ತು ಕಣ್ಣನ್ನು ಆಯಾಸದಿಂದ ಕಾಪಾಡಲು ಸಹಾಯ ಮಾಡುತ್ತದೆ. ಅಲೋವೆರಾ ಜೆಲ್ ಅನ್ನು ಅದರ ಔಷಧೀಯ ಗುಣಗಳಿಗಾಗಿ ಆಯುರ್ವೇದದಲ್ಲಿ ಪೂಜಿಸಲಾಗುತ್ತದೆ. ಅಲೋವೆರಾ ಜೆಲ್ ತಂಪಾಗಿಸುವ ಪರಿಣಾಮ ವನ್ನು ಹೊಂದಿದೆ, ಇದು ಕಣ್ಣುಗಳ ಸುತ್ತಲಿನ ಉದ್ವಿಗ್ನ ನರವನ್ನು ತಂಪಾಗಿಸಲು ಸಹಾಯ ಮಾಡುತ್ತದೆ.

ಇದು ಕಣ್ಣಿನ ಆಯಾಸವನ್ನು ಶಮನಗೊಳಿಸುತ್ತದೆ ಮತ್ತು ತೆಳುವಾದ ಮತ್ತು ಸೂಕ್ಷ್ಮವಾದ ಕಣ್ಣಿನ ಪ್ರದೇಶಗಳನ್ನು ಮಾಯಿಶ್ಚರೈಸ್ ಗೊಳಿಸು ತ್ತದೆ. ತಾಜಾ ಅಲೋವೆರಾ ಕಾಂಡವನ್ನು ಕಿತ್ತು ಅದರ ಜೆಲ್ ಅನ್ನು ಹೊರತೆಗೆದು, ಈ ಜೆಲ್ ಅನ್ನು ನಿಮ್ಮ ಕಣ್ಣು ರೆಪ್ಪೆಗಳ ಮೇಲೆ ಹಾಕಿ ಕಣ್ಣಿನ ಒಳಗೆ ಈ ಜೆಲ್ ಅನ್ನು ಹಾಕಬೇಡಿ.

## ನಟಿ ಮೀನಾ ಎರಡನೇ ಮದುವೆ?



ಚಿತ್ರರಂಗಕ್ಕೆ ಅನೇಕ ನಾಯಕರು, ನಾಯಕಿಯರು ಬರುತ್ತಲೇ ಇರುತ್ತಾರೆ. ಸ್ಟಾರ್ ನಾಯಕಿಯಾಗಿ ಗುರುತಿಸಿಕೊಳ್ಳುವುದು ತುಂಬಾ ಕಷ್ಟ. ಬಾಲ ಕಲಾವಿದೆಯಾಗಿ ಎಂಟ್ರಿಕೊಟ್ಟು ಚಿತ್ರರಂಗದಲ್ಲಿ ಟಾಪ್ ಹೀರೋಯಿನ್ ಆಗಿ ಬೆಳೆದ ಈ ನಟಿ ಸಿನಿಮಾ ಮಾತ್ರವಲ್ಲ ವಯಕ್ತಿಕ ಜೀವನದಿಂದಲೂ ಸಾಕಷ್ಟು ಬಾರಿ ಸುದ್ದಿಯಾಗಿದ್ದಾರೆ. ಈ ಸ್ಟಾರ್ ನಟಿ ಇಂಡಸ್ಟ್ರಿಯ ಟಾಪ್ ಹೀರೋಗಳ ಎದುರು ಅನೇಕ ಸೂಪರ್ ಹಿಟ್ ಚಲನಚಿತ್ರಗಳಲ್ಲಿ ನಟಿಸಿದ್ದಾರೆ.

ಬಾಲ ಕಲಾವಿದೆಯಾಗಿ ಚಿತ್ರರಂಗಕ್ಕೆ ಕಾಲಿಟ್ಟು ಸ್ಟಾರ್ ಹೀರೋಯಿನ್ ಆಗಿ ಮೆರೆದ ಕೆಲವೇ ಕೆಲವು ಸಿನಿಮಾ ತಾರೆಗಳಲ್ಲಿ ಮೀನಾ ಕೂಡ ಒಬ್ಬರು. ಟಾಪ್ ಹೀರೋಯಿನ್ ಆದ ಮೀನಾ ಕಾಲಿವುಡ್, ಮಾಲಿವುಡ್, ಸ್ಯಾಂಡಲ್‌ವುಡ್ ಮತ್ತು ಟಾಲಿವುಡ್ ಟಾಪ್ ಹೀರೋಗಳ ಎದುರು ಅನೇಕ ಸೂಪರ್ ಹಿಟ್ ಚಲನಚಿತ್ರಗಳಲ್ಲಿ ನಟಿಸಿದ್ದಾರೆ.

ಸೌತ್ ಸಿನಿಮಾ ಇಂಡಸ್ಟ್ರಿಯ ಟಾಪ್ ಹೀರೋಯಿನ್ ಗಳಲ್ಲಿ ಮೀನಾ ಕೂಡ ಒಬ್ಬರು ಎಂದರೆ ಅತಿಶಯೋಕ್ತಿಯಲ್ಲ. ಟಾಪ್ ಹೀರೋಗಳ ಎದುರು ಅನೇಕ ಸೂಪರ್ ಹಿಟ್ ಸಿನಿಮಾಗಳಲ್ಲಿ ನಟಿಸಿದ್ದಾರೆ. ದೃಶ್ಯಂ ಚಿತ್ರದ ಮೂಲಕ ಚಿತ್ರರಂಗದಲ್ಲಿ ಸೆಕೆಂಡ್ ಇನ್ನಿಂಗ್ಸ್ ಆರಂಭಿಸಿದ ಅವರು ಮತ್ತೊಮ್ಮೆ ತಮ್ಮ ಅಭಿನಯದಿಂದ ಜನರ ಮನಗೆದ್ದಿದ್ದಾರೆ. ಸದ್ಯ ನಟಿ ಮೀನಾ ಬಗ್ಗೆ ಸಾಮಾಜಿಕ ಜಾಲತಾಣದಲ್ಲಿ ಸುದ್ದಿಯೊಂದು ಹರಿದಾಡುತ್ತಿದೆ.



ಮದುವೆಯ ನಂತರ ಸಿನಿಮಾದಿಂದ ದೂರ ಉಳಿದಿದ್ದರು. ಮೀನಾಗೆ ಒಬ್ಬ ಮಗಳಿದ್ದಾಳೆ. ಮೀನಾ ಅವರ ಪತಿ ವಿದ್ಯಾಸಾಗರ್ ಇತ್ತೀಚೆಗೆ ನಿಧನರಾದರು. ಅನಾರೋಗ್ಯದಿಂದ ಚೆನ್ನೈನ ಖಾಸಗಿ ಆಸ್ಪತ್ರೆಯಲ್ಲಿ ನಿಧನರಾದರು. ಅಂದಿನಿಂದ ಮೀನಾ ತನ್ನ ಮಗಳೊಂದಿಗೆ ಚೆನ್ನೈನಲ್ಲಿ ಒಂಟಿಯಾಗಿ ವಾಸಿಸುತ್ತಿದ್ದಾರೆ.

ಸದ್ಯ ಅವರು ಮೀನಾ ಎರಡನೇ ಮದುವೆಯಾಗಲಿದ್ದಾರೆ ಎಂಬ ಸುದ್ದಿಯೊಂದು ಸಾಮಾಜಿಕ ಜಾಲತಾಣಗಳಲ್ಲಿ ಹರಿದಾಡುತ್ತಿದೆ. ತನಗಿಂತ ಕಿರಿಯ ವ್ಯಕ್ತಿಯನ್ನು ಮದುವೆಯಾಗಲಿದ್ದಾರೆ ಎಂಬ ಸುದ್ದಿ ವೈರಲ್ ಆಗಿದೆ.

48 ವರ್ಷ ವಯಸ್ಸಿನ ನಟಿ ಮೀನಾ 41 ವರ್ಷದ ನಟನ ಜೊತೆ ಮದುವೆಯಾಗಲಿದ್ದಾರೆ ಎನ್ನಲಾಗುತ್ತಿದೆ. ಆದರೆ ಆ ನಟ ಯಾರೆಂದು ರಿವೀಲ್ ಆಗಿಲ್ಲ. ಮೀನಾ ಪೋಷಕರು ಒಂಟಿಯಾಗಿ ನರಳುವುದಕ್ಕಿಂತ ಬೇರೊಬ್ಬ ವ್ಯಕ್ತಿಯೊಂದಿಗೆ ಮದುವೆಯಾಗುವಂತೆ ಒತ್ತಾಯಿಸಿದ್ದಾರೆ ಎಂದು ತಿಳಿದುಬಂದಿದೆ. ಮೀನಾ ಅವರನ್ನು ಮಗಳಿಗಾಗಿ ಆದರೂ ಎರಡನೇ ಮದುವೆ ಆಗುವಂತೆ ಒತ್ತಾಯಿಸುತ್ತಿದ್ದಾರಂತೆ ಎನ್ನಲಾಗಿದೆ.

ಆದರೆ ಇವು ಕೇವಲ ವದಂತಿಗಳಷ್ಟೇ ಎನ್ನುತ್ತಾರೆ ಮೀನಾ ಸ್ನೇಹಿತರು. ಮೀನಾ ಕೂಡ ಈ ಸುದ್ದಿಯನ್ನು ಹಲವು ಬಾರಿ ನಿರಾಕರಿಸಿದ್ದರು. ಆದರೆ ಮತ್ತೆ ಮತ್ತೆ ಈ ಸುದ್ದಿಗಳು ಬರುತ್ತಲೇ ಇವೆ.

## ವಿಮಾನದಲ್ಲಿ ಕುಸಿದಬಿದ್ದವರ ರಕ್ಷಿಸಿ ಮಾನವೀಯತೆ ಮೆರೆದ ವೈದ್ಯರು

ವಿಮಾನದಲ್ಲಿ ಉಸಿರಾಟದ ತೊಂದರೆ ಯಿಂದ ಕುಸಿದು ಬಿದ್ದ ಮಹಿಳೆಯೊಬ್ಬರ ಜೀವವನ್ನು ಉಳಿಸುವ ಮೂಲಕ ಮಣಿಪಾಲ್ ಆಸ್ಪತ್ರೆಯ ವೈದ್ಯರು ಮಾನವೀಯತೆಯ ಮೆರೆದಿದ್ದಾರೆ.

ಇತ್ತೀಚೆಗೆ ಕೋಲ್ಕತ್ತಾದಿಂದ ದೆಹಲಿಗೆ ತೆರಳಿದ ವಿಮಾನದಲ್ಲಿ, 45 ವರ್ಷದ ಮಹಿಳೆಯೊಬ್ಬರು ಹಠಾತ್ತಾಗಿ, ಉಸಿರಾಟದ ತೊಂದರೆ ಮತ್ತು ಮಾರಣಾಂತಿಕ ಮಟ್ಟದಲ್ಲಿ ಏರಿದ ರಕ್ತದೊತ್ತಡದಿಂದಾಗಿ ಕುಸಿದುಬಿದ್ದರು. ಸಮಸ್ಯೆಯೆಯ ಗಂಭೀರತೆಯನ್ನು ಅರಿತ, ಬ್ರಾಡ್ವೇ ಮಣಿಪಾಲ್ ಆಸ್ಪತ್ರೆಯ ತುರ್ತು ವಿಭಾಗದಲ್ಲಿ ಸಲಹೆಗಾರ ಮತ್ತು ತುರ್ತು ವಿಭಾಗದ ಉಸ್ತುವಾರಿ ವೈದ್ಯರಾದ ಡಾ. ಸ್ಮಿತಾ ಮೊಯಿತ್ರಾ, ಜೀವ ಉಳಿಸುವ ಮೂಲಕ ಆಪತ್ಬಾಂಧವರಾದರು.

ಕ್ಲಿಷ್ಟಕರ ಪರಿಸ್ಥಿತಿಯ ಹೊರತಾಗಿಯೂ, ವಿಮಾನದಲ್ಲಿ ಲಭ್ಯವಿರುವ ಸೀಮಿತ ವೈದ್ಯಕೀಯ ಸರಬರಾಜುಗಳೊಂದಿಗೆ, ಡಾ. ಮೊಯಿತ್ರಾ ತ್ವರಿತವಾಗಿ ಕಾರ್ಯನಿರ್ವಹಿಸಿದರು, ದೇಹದಲ್ಲಿ ದ್ರವದ ಓವರ್ಲೋಡ್ ಅನ್ನು ಕಡಿಮೆ ಮಾಡಲು ಲಸಿಕ್ಸ್, ಎದೆನೋವಿಗೆ ನೈಟ್ರೋಗ್ಲಿಸರಿನ್ ಮತ್ತು ಅವಳ ಉಸಿರಾಟವನ್ನು ಸ್ಥಿರಗೊಳಿಸಲು ಆಮ್ಲಜನಕವನ್ನು ನೀಡಿದರು. ವೈದ್ಯರ ಸಮಯೋಚಿತ ಮಧ್ಯಸ್ಥಿಕೆಯು ಮಾರಣಾಂತಿಕ ಹೃದಯ ಸ್ತಂಭನವನ್ನು ತಡೆಯುವ ಮೂಲಕ ಪ್ರಾಣಹಾನಿಯ ಸಂಭವವನ್ನು ನಿವಾರಿಸಿತು. ನಂತರ ತುರ್ತು ಲ್ಯಾಂಡಿಂಗ್ಗಾಗಿ ವಿಮಾನವನ್ನು ರಾಂಚಿಗೆ ತಿರುಗಿಸಿ, ಬಾಧಿತರನ್ನು ಹೆಚ್ಚಿನ ಆರೈಕೆಗಾಗಿ ಆಸ್ಪತ್ರೆಗೆ ವರ್ಗಾಯಿಸಲಾಯಿತು.

ಅದೇ ರೀತಿ, ಬೆಂಗಳೂರಿನ ಕೆಂಪೇಗೌಡ ಅಂತರಾಷ್ಟ್ರೀಯ ವಿಮಾನ ನಿಲ್ದಾಣದಲ್ಲಿ, ಮಣಿಪಾಲ್ ಹಾಸ್ಪಿಟಲ್ಸ್ ವರ್ತೂರು ರಸ್ತೆಯಲ್ಲಿ ಕನ್ಸಲ್ಟೆಂಟ್ - ನೆಫ್ರಾಲಜಿಸ್ಟ್ ಮತ್ತು ಮೂತ್ರಪಿಂಡ ಕಸಿ ವೈದ್ಯ ಡಾ. ಗರಿಮಾ ಅಗರ್ವಾಲ್ ಅವರು ಕೂಡ ಇಂತಹದೇ ಮತ್ತೊಂದು ಸನ್ನಿವೇಶವನ್ನು ಸಮರ್ಥವಾಗಿ ನಿಭಾಯಿಸಿದರು. ದೆಹಲಿಗೆ ತಮ್ಮ ವಿಮಾನಕ್ಕಾಗಿ ಕಾಯುತ್ತಿರುವಾಗ, ಹೃದಯಾಘಾತದಿಂದ ವ್ಯಕ್ತಿಯೊಬ್ಬರು ಇದ್ದಕ್ಕಿದ್ದಂತೆ ಕುಸಿದು ಬೀಳುವುದನ್ನು ಅವರು ನೋಡಿದರು. ಯಾವುದೇ ವೈದ್ಯಕೀಯ ವೃತ್ತಿಪರರು ತಕ್ಷಣವೇ ಲಭ್ಯವಿಲ್ಲದ ಕಾರಣ, ಡಾ. ಅಗರ್ವಾಲ್ ಅವರು ಸ್ಥಳಕ್ಕೆ ಧಾವಿಸಿ, ತ್ವರಿತವಾಗಿ ಸಿಪಿಆರ್ ಅನ್ನು ನಿರ್ವಹಿಸಲು ಪ್ರಾರಂಭಿಸಿದರು ಮತ್ತು ಹೆಚ್ಚಿನ ಸಹಾಯಕ್ಕಾಗಿ ಎಚ್ಚರಿಕೆ ನೀಡಿದರು. ಶ್ವಾಸನಾಳದಲ್ಲಿ ತೊಡಕುಗಳನ್ನು ತೆರವುಗೊಳಿಸುವ ಸವಾಲುಗಳ ಹೊರತಾಗಿಯೂ, ವೈದ್ಯೆಯು ಸತತವಾಗಿ ಸಿಪಿಆರ್‌ನಲ್ಲಿ ತೊಡಗಿದ್ದರು. ಅಷ್ಟರಲ್ಲಿ ಸಿಪಿಆರ್ವಿಮಾನ ನಿಲ್ದಾಣದ ವೈದ್ಯಕೀಯ ತಂಡವು ಆಗಮಿಸಿತು ಮತ್ತು ಒಟ್ಟಿಗೆ ಅವರು ಎಇಡಿ ಬಳಕೆಯೊಂದಿಗೆ ಕಂಪನ (ಖುಠಭಿಇ) ಗಳನ್ನು ನೀಡಿ ಬಾಧಿತ ವ್ಯಕ್ತಿಯನ್ನು ಸ್ಥಿರಗೊಳಿಸಿದರು. ಡಾ. ಅಗರ್ವಾಲ್ ಅವರ ತ್ವರಿತ ಕ್ರಮಗಳಿಂದಾಗಿ, ವ್ಯಕ್ತಿಯ ನಾಡಿಮಿಡಿತವನ್ನು ಮರಳಿ ಪಡೆದು, ಅವರನ್ನು ಸ್ಥಿರಗೊಳಿಸಿ, ಸಮಯೋಚಿತವಾಗಿ ಆಸ್ಪತ್ರೆಗೆಸಾಗಿಸಲು ಸಾಧ್ಯವಾಯಿತು. ಹೃದಯದ ತುರ್ತುಸ್ಥಿತಿಗಳಲ್ಲಿ ಸಮಯೋಚಿತ ಹಸ್ತಕ್ಷೇಪವು ಜೀವಗಳನ್ನು ಉಳಿಸಬಹುದು ಎಂಬುದನ್ನು ಡಾ. ಮೊಯಿತ್ರಾ ಮತ್ತು ಡಾ. ಅಗರ್ವಾಲ್ ಅವರ ತ್ವರಿತ ಕ್ರಮಗಳು ಸಾರಿದವು. ಇದೆ ಅರಿವನ್ನು ಸಮುದಾಯದಲ್ಲಿ ವ್ಯಾಪಕವಾಗಿಸಲು ಮಣಿಪಾಲ್ ಹಾಸ್ಪಿಟಲ್ಸ್ ತಮ್ಮ ''ಗಾರ್ಡಿಯನ್ಸ್ ಆಫ್ ದಿ ಹಾರ್ಟ್'' ಉಪಕ್ರಮದ ಮೂಲಕ ಬೆಂಗಳೂರನ್ನು ಹಾರ್ಟ್-ಸ್ಮಾರ್ಟ್ ಸಿಟಿ ಮಾಡಲು ದಿಟ್ಟ ಹೆಜ್ಜೆ ಇಟ್ಟಿದೆ. ಅವರು ಭದ್ರತಾ ಸಿಬ್ಬಂದಿ, ಶಿಕ್ಷಣ ಸಂಸ್ಥೆಗಳಲ್ಲಿ ಸ್ವಯಂಸೇವಕರು, ಸಂಘಗಳು ಮತ್ತು ಸಮುದಾಯದ ಸದಸ್ಯರಿಗೆ ಅಕಖ ತರಬೇತಿ ನೀಡುತ್ತಿದ್ದಾರೆ ಮತ್ತು ಆ ಮೂಲಕ ಸಹಾಯ ಯಾವಾಗಲೂ ಹತ್ತಿರದಲ್ಲಿದೆ ಎಂದು ಖಚಿತಪಡಿಸಿಕೊಳ್ಳುತ್ತಿದ್ದಾರೆ. ಅವರ ಇತ್ತೀಚಿನ ಮಿಷನ್ 3ಏ - 3000 ಹಾರ್ಟ್ಸ್ ಒನ್ ಬೀಟ್ ಈವೆಂಟ್, 3,319 ಭಾಗವಹಿಸುವವರೊಂದಿಗೆ, ಅತ್ಯಂತ ದೊಡ್ಡ ಕೈ-ಮಾತ್ರ ಅಕಖ ರಿಲೇಗಾಗಿ ಗಿನ್ನೆಸ್ ವಿಶ್ವ ದಾಖಲೆಯನ್ನು ಸಾಧಿಸಿದೆ, ಇದು ತಯಾರಾಗುವುದರ ಮಹತ್ವವನ್ನು ಮತ್ತಷ್ಟು ಒತ್ತಿಹೇಳುತ್ತದೆ.







ಜಯಶ್ರೀ.ಬಿ.ಆರ್
ಖ್ಯಾತ ಜ್ಯೋತಿಷಿ
ದೂರವಾಣಿ-9964739507
www.jyotishyavaastu.com

## ರಾಶಿ ಭವಿಷ್ಯ

**ಮೇಷ:** ಸ್ಥಿರಾಸ್ತಿ ವಾಹನದಿಂದ ತೊಂದರೆ, ಲಾಭದಲ್ಲಿ ಹಿನ್ನಡೆ, ಉದ್ಯೋಗ ಸ್ಥಳದಲ್ಲಿ ಅಡೆತಡೆಗಳು, ಮಿತ್ರರು ದೂರ.

**ವೃಷಭ:** ಸಂಗಾತಿಯಿಂದ ನೋವು, ಮಾಡದ ತಪ್ಪುಗಳಿಗೆ ನಿಂದನೆ, ಪ್ರಯಾಣದಲ್ಲಿ ನಿರಾಸಕ್ತಿ, ತಂದೆಯ ಆರೋಗ್ಯ ವ್ಯತ್ಯಾಸ.

**ಮಿಥುನ:** ಅನಿರೀಕ್ಷಿತ ಆರ್ಥಿಕ ಸಂಕಷ್ಟ, ಸಾಲ ಮಾಡುವ ಪರಿಸ್ಥಿತಿ, ಕುಟುಂಬಸ್ಥರೇ ಶತ್ರುಗಳಾಗುವರು, ಮಿತ್ರರಿಂದ ಅನುಕೂಲ.

**ಕಟಕ:** ಸ್ವಯಂಕೃತ ಅಪರಾಧದಿಂದ ತೊಂದರೆ, ಸೋಮಾರಿತನ ಆಲಸ್ಯ ಉಡಾಫೆ, ಮಕ್ಕಳಿಂದ ದಾಂಪತ್ಯದಲ್ಲಿ ತೊಂದರೆ, ಸಂಗಾತಿ ಆರೋಗ್ಯದಲ್ಲಿ ವ್ಯತ್ಯಾಸ.

**ಸಿಂಹ:** ಸ್ಥಿರಾಸ್ತಿ ವಾಹನ ಅನುಕೂಲ, ದುಸ್ವಪ್ನಗಳ ಕಾಟ, ಸಾಲದ ಚಿಂತೆ, ಶತ್ರು ಕಾಟ.

**ಕನ್ಯಾ:** ದಾಯಾದಿಗಳಿಂದ ಸಮಸ್ಯೆ, ಅನಿರೀಕ್ಷಿತ ಅನುಕೂಲ, ಅನಾರೋಗ್ಯ, ಕೋರ್ಟ್ ಕೇಸ್‌ಗಳಲ್ಲಿ ಜಯ.

**ತುಲಾ:** ಸಂಗಾತಿಯೊಂದಿಗೆ ವಾಗ್ವಾದ, ಪಾಲುದಾರಿಕೆಯಲ್ಲಿ ಅನುಕೂಲ, ಹಳೆಯ ವಸ್ತು ವಾಹನದಿಂದ ಅನುಕೂಲ, ಮಕ್ಕಳ ಆರೋಗ್ಯ ವ್ಯತ್ಯಾಸ.

**ವೃಶ್ಚಿಕ:** ಪ್ರಯಾಣದಲ್ಲಿ ಅಡೆತಡೆ, ಆರೋಗ್ಯದಲ್ಲಿ ವ್ಯತ್ಯಾಸ, ಸೋಮಾರಿತನ ನಿರಾಸೆ, ಒತ್ತಡದ ಜೀವನ.

**ಧನಸ್ಸು:** ಧನ ನಷ್ಟ, ನಂಬಿಕಸ್ತ ವ್ಯಕ್ತಿಗಳಿಂದ ನಷ್ಟ, ಉಸಿರಾಟ ಸಮಸ್ಯೆ, ಆತಂಕ.

**ಮಕರ:** ಪಾಲುದಾರಿಕೆಯಲ್ಲಿ ಲಾಭ, ಸಂಗಾತಿಯಿಂದ ಅನುಕೂಲ, ಆರ್ಥಿಕ ಅನುಕೂಲ, ಉತ್ತಮ ಹೆಸರು ಕೀರ್ತಿ ಪ್ರತಿಷ್ಠೆ.

**ಕುಂಭ:** ಉದ್ಯೋಗ ಸ್ಥಳದಲ್ಲಿ ಶತ್ರು ಕಾಟ, ಲಾಭ ಮತ್ತು ನಷ್ಟ ಸಮಪ್ರಮಾಣ, ಆರೋಗ್ಯದಲ್ಲಿ ಏರುಪೇರು, ಕಾರ್ಮಿಕರಿಂದ ನಷ್ಟ.

**ಮೀನ:** ಮಕ್ಕಳ ಆರೋಗ್ಯದಲ್ಲಿ ವ್ಯತ್ಯಾಸ, ಅನಿರೀಕ್ಷಿತ ಕಾರಣಗಳಿಂದ ದೂರ ಪ್ರಯಾಣ, ತಂದೆಯಿಂದ ಅದೃಷ್ಟ, ಧರ್ಮ ಕಾರ್ಯ ಹೆಚ್ಚಿನ ಪ್ರಾಮುಖ್ಯತೆ.

## ದಿಗ್ಗಜ ರತನ್ ಟಾಟಾ ಜನ್ಮದಿನ

ಇಂದು ಭಾರತದ ಉದ್ಯಮ ಜಗತ್ತಿನ ದಿಗ್ಗಜ ರತನ್ ಟಾಟಾ ಅವರ ಜನ್ಮದಿನ. ರತನ್ ಟಾಟಾ, ಈ ಹೆಸರು ಕೇಳಿದ ತಕ್ಷಣ ಭಾರತೀಯರ ಮನಸ್ಸಿನಲ್ಲಿ ಗೌರವ, ಹೆಮ್ಮೆ ಎರಡೂ ಮೂಡುತ್ತದೆ. ಟಾಟಾ ಸಂಸ್ಥೆಯ ಮುಖ್ಯಸ್ಥರಿಗೆ ಅವರು ಭಾರತದ ಉದ್ಯಮ ಜಗತ್ತನ್ನಷ್ಟೇ ವಿಸ್ತರಿಸಿಲ್ಲ. ಬದಲಿಗೆ ಸಂಕಷ್ಟದ ಸಮಯದಲ್ಲಿ ದೇಶದ ಜನರಿಗೆ ಅನೇಕ ವಿಧದಲ್ಲಿ ನೆರವಾಗಿದ್ದಾರೆ. ಸಹೃದಯ ಹಾಗೂ ಮಾನವೀಯತೆಯ ಮೂಲಕ ಕೋಟ್ಯಂತರ ಭಾರತೀಯರ ಮನಗೆದ್ದಿದ್ದರು, ಇಂದು ಅವರು ನಮ್ಮೊಂದಿಗೆ ಇಲ್ಲ ಎಂಬುದು ದುಃಖಕರ ವಿಷಯವಾಗಿದೆ. ರತನ್ ಟಾಟಾ ಡಿಸೆಂಬರ್ 28, 1937 ರಂದು ಮುಂಬೈನಲ್ಲಿ ನೇವಲ್ ಟಾಟಾ ಮತ್ತು ಸೂನಿ ಟಾಟಾ ದಂಪತಿಗೆ ಜನಿಸಿದರು. ಅವರು ತಮ್ಮ ಶಾಲಾ ಶಿಕ್ಷಣವನ್ನು ಕ್ಯಾಥೆಡ್ರಲ್ನ ಕ್ಯಾಂಪಿಯನ್ ಶಾಲೆ ಮತ್ತು ಮುಂಬೈನ ಜಾನ್ ಕಾನನ್ ಶಾಲೆ ಮತ್ತು ಶಿಮ್ಲಾದ ಬಿಷಪ್ ಕಾಟನ್ ಶಾಲೆಯಲ್ಲಿ ಪೂರೈಸಿದರು. ರತನ್ ಟಾಟಾ ಅವರು ನ್ಯೂಯಾರ್ಕ್ನ ರಿವರ್ಡೇಲ್ ಕಂಟ್ರಿ ಸ್ಕೂಲ್ನಿಂದ ಪದವಿ ಪಡೆದರು. ಉದ್ಯೋಗಿಗಳಿಗೆ ರಾಯಲ್ ಎನ್ಫೀಲ್ಡ್ ಬೈಕ್ಗಳು, ಟಾಟಾ ಕಾರುಗಳನ್ನ ನೀಡಿದ ಚೆನ್ನೈ ಮೂಲದ ಲಾಜಿಸ್ಟಿಕ್ಸ್ ಕಂಪನಿ ನಂತರ, ಅವರು 1975 ರಲ್ಲಿ ಹಾರ್ವರ್ಡ್ ಬ್ಯುಸಿನೆಸ್ ಸ್ಕೂಲ್ನಲ್ಲಿ ಅಡ್ವಾನ್ಸ್ ಮ್ಯಾನೇಜ್ಮೆಂಟ್ ಪ್ರೋಗ್ರಾಂ ಅನ್ನು ಪೂರ್ಣಗೊಳಿಸಿದರು. ಅವರು 1991 ರಲ್ಲಿ ಟಾಟಾ ಗ್ರೂಪ್ನ ಅಧ್ಯಕ್ಷರಾಗಿ ಅಧಿಕಾರ ವಹಿಸಿಕೊಂಡರು. ಟಾಟಾ ಸಮೂಹದ ಸಂಸ್ಥಾಪಕರಾದ ಜಮ್ಸೆಟ್ಜಿ ಟಾಟಾ ಅವರು ರತನ್ ಟಾಟಾ ಅವರ ತ್ರಜ್ಜ. 1948 ರಲ್ಲಿ, ರತನ್ ಟಾಟಾ ಅವರು ಕೇವಲ 10 ವರ್ಷದವರಾಗಿದ್ದಾಗ, ಅವರ ಪೋಷಕರು ಬೇರೆ ಬೇರೆಯಾಗಿದ್ದಾರೆ. ನಂತರ ಅವರನ್ನು ಅವರ ಅಜ್ಜಿ ಮತ್ತು ರತನ್ಜಿ ಟಾಟಾ ಅವರ ವಿಧವೆ ನವಾಜ್ಬಾಯಿ ಟಾಟಾ ಅವರು ಬೆಳೆಸಿದರು ಮತ್ತು ದತ್ತು ಪಡೆದರು. 86 ವರ್ಷದ ಪರೋಪಕಾರಿ ಮತ್ತು ಟಾಟಾ ಗ್ರೂಪ್ನ ಮಾಜಿ ಅಧ್ಯಕ್ಷರು ವಿವಾಹವಾಗಿಲ್ಲ. 2011 ರಲ್ಲಿ ಸಂದರ್ಶನವೊಂದರಲ್ಲಿ, ರತನ್ ಟಾಟಾ ಅವರು ನಾಲ್ಕು ಬಾರಿ ವಿವಾಹವಾಗಲು ಸಜ್ಜಾಗಿದ್ದರು, ಆದರೆ ವಿವಿಧ ಕಾರಣಗಳಿಂದ ಮದುವೆಯಾಗಲು ಸಾಧ್ಯವಾಗಲಿಲ್ಲ ಎಂದು ಹೇಳಿದ್ದರು. ರತನ್ ಟಾಟಾ ಅವರು ಲಾಸ್ ಏಂಜಲೀಸ್ನಲ್ಲಿ ಕೆಲಸ ಮಾಡುತ್ತಿದ್ದಾಗ ಒಂದು ಸಮಯ ಪ್ರೀತಿಯಲ್ಲಿ ಬಿದ್ದಿದೆ ಎಂದು ಒಪ್ಪಿಕೊಂಡರು. ಆದರೆ, 1962ರ ಭಾರತ-ಚೀನಾ ಯುದ್ಧದ ಕಾರಣದಿಂದ ಯುವತಿಯ ಪೋಷಕರು ತಮ್ಮ ಮಗಳನ್ನು ಭಾರತಕ್ಕೆ ಕಳುಹಿಸಲಿಲ್ಲ. ಅದರ ನಂತರ ವಿವಾಹವಾಗಿಲ್ಲ. 2004 ರಲ್ಲಿ ರತನ್ ಟಾಟಾ ಅವರ ನೇತೃತ್ವದಲ್ಲಿ ಟಿಸಿಎಸ್ ಸಾರ್ವಜನಿಕವಾಯಿತು. 2009 ರಲ್ಲಿ ರತನ್ ಟಾಟಾ ಅವರು ಭಾರತದ ಮಧ್ಯಮ ವರ್ಗದ ಜನರು ಖರೀದಿಸಬಹುದಾದ ಅಗ್ಗದ ಕಾರನ್ನು ತಯಾರಿಸುವ ಭರವಸೆ ನೀಡಿದರು. ನಂತರ, ಸಮೂಹವು 1 ಲಕ್ಷ ರೂಪಾಯಿಗೆ ಟಾಟಾ ನ್ಯಾನೋವನ್ನು ಬಿಡುಗಡೆ ಮಾಡಿತು. ಭಾರತೀಯ ಬಿಲಿಯನೇರ್ ಬೀದಿನಾಯಿಗಳ ಬಗ್ಗೆ ಕಾಳಜಿ ವಹಿಸುವಂತೆ ಜನರನ್ನು ಒತ್ತಾಯಿಸಿದ್ದಾರೆ. ಜಮ್ಸೆಟ್ಜಿ ಟಾಟಾ ಅವರ ಕಾಲದ ಬಾಂಬೆ ಹೌಸ್ನಲ್ಲಿ ಬೀದಿ ನಾಯಿಗಳು ಯಾವಾಗಲೂ ಹೋಗಬಹುದಾಗಿದೆ. ರತನ್ ಟಾಟಾ ಅವರು ಸಂಪ್ರದಾಯವನ್ನು ಮುಂದುವರೆಸಿದರು. ಟಾಟಾ ಗ್ರೂಪ್ನ ಪ್ರಧಾನ ಕಛೇರಿಯಾಗಿರುವ ಬಾಂಬೆ ಹೌಸ್ 2018 ರಲ್ಲಿ ನವೀಕರಣಗೊಂಡಿದೆ. ಈಗ ಅವರು ಬೀದಿ ನಾಯಿಗಳಿಗಾಗಿ ಐಷಾರಾಮಿ ಕೋಣೆಯನ್ನು ನಿರ್ಮಿಸಿದರು.

# ಮನಮೋಹನ್ ಸಿಂಗ್ ನೆನೆದು ದಲೆ ಲಾಮಾ ಭಾವುಕ ಪತ್ರ



**ನವದೆಹಲಿ:** ಭಾರತದ ಮಾಜಿ ಪ್ರಧಾನಿ ಮನಮೋಹನ್ ಸಿಂಗ್ ದೆಹಲಿ ಏಮ್ಸ್‌ನಲ್ಲಿ ವಿಧಿವಶರಾಗಿದ್ದಾರೆ. ಅವರು ತಮ್ಮ ಇಳಿ ವಯಸ್ಸಿನಲ್ಲಿ ಉಸಿರಾಟದ ಸಮಸ್ಯೆಯಿಂದ ಬಳಲುತ್ತಿದ್ದರು. ಅವರಿಗೆ 92 ವರ್ಷ ವಯಸ್ಸಾಗಿತ್ತು. ಮನಮೋಹನ್ ಸಿಂಗ್ ತಮ್ಮ ದೂರದೃಷ್ಟಿಯಿಂದಾಗಿ ದೇಶದ ಆರ್ಥಿಕತೆಯ ದಿಕ್ಕನ್ನೇ ಬದಲಿಸಿದವರು. ಆರ್ಥಿಕತೆಯ ಹರಿಕಾರ ಅನ್ನಿಸಿಕೊಂಡವರು. ಸ್ವಭಾವತಃ ಮಿತಭಾಷಿಯಾಗಿದ್ದ ಸಿಂಗ್ ಮೌನ ಸಾಧಕ

ಮನಮೋಹನ್ ಸಿಂಗ್ ನಿಧನದ ಸುದ್ದಿ ಕೇಳಿ ಹಲವು ಗಣ್ಯರು ಕಂಬನಿ ಮಿಡಿದಿದ್ದಾರೆ. ಅಂತಾರಾಷ್ಟ್ರೀಯ ಪ್ರಭಾವಿ ವ್ಯಕ್ತಿಗಳು ಅಗಲಿದ ನಾಯಕನಿಗೆ ಪತ್ರದ ಮೂಲಕ ಸಂತಾಪ ಸೂಚಿಸಿದ್ದಾರೆ. ಸಿಂಗ್ ಕುಟುಂಬಕ್ಕೆ ಸಾಂತ್ವನ ಹೇಳಿದ್ದಾರೆ. ದೇಶದಲ್ಲಿ ಈಗ ಅಕ್ಷರಶಃ ಶೋಕದ ಅಲೆ ಎದ್ದಿದೆ. ಈ ಮಧ್ಯೆ ಮನಮೋಹನ್ ಸಿಂಗ್ ಅವರ ಸಾವಿನ ಸುದ್ದಿ ಕೇಳಿ ಧಾರ್ಮಿಕ ನಾಯಕ ದಲೈಲಾಮಾ ಅವರು ತಮ್ಮ ದುಃಖವನ್ನು ವ್ಯಕ್ತಪಡಿಸಿ ಪತ್ರ ಬರೆದಿದ್ದಾರೆ. ಮನಮೋಹನ್ ಸಿಂಗ್ ಅವರ ಪತ್ನಿ ಗುರುಶರಣ್ ಕೌರ್ ಅವರಿಗೆ ದಲೈಲಾಮಾ ಪತ್ರ ಬರೆದಿದ್ದು,ಭಾವುಕ ನುಡಿಗಳನ್ನಾಡಿದ್ದಾರೆ.

''ಸಿಂಗ್ ಅರ್ಥಪೂರ್ಣವಾಗಿ ಬದುಕಿ ಹೋಗಿದ್ದಾರೆ. ಅವರು ನಮಗೆಲ್ಲರಿಗೂ ಸ್ಫೂರ್ತಿ. ನಾನು ಅವರನ್ನು ನನ್ನ ಪ್ರಾರ್ಥನೆಯಲ್ಲಿ ನೆನಪಿಸಿಕೊಳ್ಳುತ್ತೇನೆ. ಈ ದುಃಖದ ಸಮಯದಲ್ಲಿ ನಿಮಗೆ ಮತ್ತು ನಿಮ್ಮ ಕುಟುಂಬಕ್ಕೆ ನನ್ನ ಸಂತಾಪವನ್ನು ಸೂಚಿಸುತ್ತಿದ್ದೇನೆ'' ಎಂದು ಅವರು ಬರೆದಿದ್ದಾರೆ. ??ಪ್ರತಿಬಾರಿ ಭೇಟಿಯಾದಾಗಲೂ ಅವರು ನನ್ನ ಬಗ್ಗೆ ಅತೀವ ಕಾಳಜಿ ತೋರುತ್ತಿದ್ದರು. ಉತ್ತಮ ಸಲಹೆಗಳನ್ನು ನೀಡುತ್ತಿದ್ದರು. ಅವರು ನನಗೆ ಹಿರಿಯಣ್ಣನಂತಿದ್ದರು. ನಿಮ್ಮ ಪತಿ ಇತರರಿಗೆ ಸಹಾಯ ಮಾಡುವ ಗುಣವನ್ನು ಹೊಂದಿದ್ದರು. ಅವರಿಂದ ನಾವು ಪ್ರೇರಣೆಗೊಂಡಿದ್ದೇವೆ. ಅವರು ಭಾರತದ ಅಭಿವೃದ್ಧಿಗೆ ಮತ್ತು ಆರ್ಥಿಕ ಬೆಳವಣಿಗೆಗೆ ಮಹತ್ವದ ಕೊಡುಗೆ ನೀಡಿದ್ದಾರೆ. ಕೋಟ್ಯಂತರ ಜನ ಸಾಮಾನ್ಯರ ಜೀವನವನ್ನು ಸುಧಾರಿಸಿದ್ದಾರೆ. ಅವರು ಟಿಬೆಟಿಯನ್ ಜನರಿಗೆ ಉತ್ತಮ ಸ್ನೇಹಿತರಾಗಿದ್ದರು''ಎಂದು ದಲೈಲಾಮಾ ತಮ್ಮ ಪತ್ರದ ಮೂಲಕ ಮನಮೋಹನ್ ಸಿಂಗ್ ಜತೆಗಿನ ಅವರ ಬಾಂಧವ್ಯವನ್ನು ನೆನಪು ಮಾಡಿಕೊಂಡಿದ್ದಾರೆ.

## ಪಾಕಿಸ್ತಾನ ಭದ್ರತಾ ಪಡೆ ಕಾರ್ಯಾಚರಣೆಯಲ್ಲಿ 13 ಭಯೋತ್ಪಾದಕರ ಹತ್ಯೆ, ಸೇನಾಧಿಕಾರಿ ಸಾವು



**ಪೇಶಾವರ(ಪಾಕಿಸ್ತಾನ):** ಇಲ್ಲಿನ ಖೈಬರ್ ಪಖ್ತುಂಖ್ವಾ ಪ್ರಾಂತ್ಯದಲ್ಲಿ ಭದ್ರತಾ ಪಡೆಗಳು ನಡೆಸಿದ ಮೂರು ಪ್ರತ್ಯೇಕ ಕಾರ್ಯಾಚರಣೆ ವೇಳೆ ಪಾಕಿಸ್ತಾನಿ ಸೇನಾಧಿಕಾರಿಯೊಬ್ಬರು ಸಾವನ್ನಪ್ಪಿದ್ದು, 13 ಭಯೋತ್ಪಾದಕರು ಹತರಾಗಿದ್ದಾರೆ ಎಂದು ಪಾಕಿಸ್ತಾನಿ ಮಿಲಿಟರಿಯ ಮಾಧ್ಯಮ ವಿಭಾಗ ತಿಳಿಸಿದೆ.

ಭದ್ರತಾ ಪಡೆಯಿಂದ ಎಲ್ಲ ಕಾರ್ಯಾಚರಣೆಗಳು ಗುರುವಾರ ಮುಂಜಾನೆ ನಡೆದಿವೆ ಎಂದು ಮಾಧ್ಯಮ ವರದಿ ಹಂಚಿಕೊಂಡಿದೆ. ಮೊದಲ ಕಾರ್ಯಾಚರಣೆಯಲ್ಲಿ, ಬನ್ನು ಜಿಲ್ಲೆಯ ಜಾನಿ ಖೇಲ್ ಪ್ರದೇಶದಲ್ಲಿ ಭದ್ರತಾ ಪಡೆಗಳು ಭಯೋತ್ಪಾದಕರನ್ನು ಗುರಿಯಾಗಿಸಿಕೊಂಡು ಇಬ್ಬರು ಭಯೋತ್ಪಾದಕರನ್ನು ಕೊಂದಿ ಹಾಕಿದ್ದಾರೆ. ಉತ್ತರ ವಜಿರಿಸ್ತಾನ್ನಲ್ಲಿ ನಡೆದ ಎರಡನೇ ಕಾರ್ಯಾಚರಣೆಯಲ್ಲಿ ಐವರು ಭಯೋತ್ಪಾದಕರನ್ನು ಹೊಡೆದುರುಳಿಸಲಾಗಿದೆ. ಇಲ್ಲಿ ಎಂಟು ಭಯೋತ್ಪಾದಕರು ಗಾಯಗೊಂಡಿದ್ದಾರೆ. ಆದರೆ ಈ ಗುಂಡಿನ ಕಾಳಗದಲ್ಲಿ ಪಾಕಿಸ್ತಾನಿ ಯೋಧ ಮೇಜರ್ ಮುಹಮ್ಮದ್ ಅವೈಸ್ (31) ಮೃತಪಟ್ಟಿದ್ದಾರೆ.

ಮೂರನೇ ಕಾರ್ಯಾಚರಣೆ ದಕ್ಷಿಣ ವಜಿರಿಸ್ತಾನ್ನಲ್ಲಿ ನಡೆದಿದೆ. ಸೈನಿಕರು ಆರು ಮಂದಿ ಉಗ್ರರನ್ನು ಕೊಂದರು ಮತ್ತು ಇಲ್ಲಿ ಮತ್ತೆ ಎಂಟು ಮಂದಿ ಭಯೋತ್ಪಾದಕರು ಗಾಯಗೊಂಡಿದ್ದಾರೆ.

ಪಾಕಿಸ್ತಾನದ ಭದ್ರತಾ ಸೇನೆ ಭಯೋತ್ಪಾದನೆಯನ್ನು ನಿರ್ಮೂಲನೆ ಮಾಡುವ ತನ್ನ ಬದ್ಧತೆಯನ್ನು ಮತ್ತೆ ಒತ್ತಿ ಹೇಳಿದೆ. ಕಾರ್ಯಾಚರಣೆ ನಡೆಸಿರುವ ಈ ಪ್ರದೇಶದಲ್ಲಿ ಕಂಡು ಬರುವ ಯಾವುದೇ ಉಗ್ರರನ್ನು ತೊಡೆದುಹಾಕಲು ನಮ್ಮ ಕಾರ್ಯಾಚರಣೆಗಳನ್ನು ಮುಂದುವರೆಸಲಾಗುತ್ತದೆ. ನಮ್ಮ ಕೆಚ್ಚೆದೆಯ ಸೈನಿಕರ ಇಂತಹ ತ್ಯಾಗಗಳು ನಮ್ಮ ಸಂಕಲ್ಪವನ್ನು ಮತ್ತಷ್ಟು ಬಲಪಡಿಸುತ್ತವೆ ಎಂದು ಗುಡುಗಿದೆ.

## ಬೋಗಿಯ ಕೆಳಗೆ ಅವಿತು 290 ಕಿಮೀ ಪಯಣಿಸಿದ ಭೂಪ

**ಭೋಪಾಲ್:** ಟಿಕೆಟ್ ಸಿಕ್ಕಿಲ್ಲ ಎಂದು ಬೋಗಿಯ ಕೆಳಗೆ ಅವಿತುಕೊಂಡು ಕುಳಿತು ಯುವಕನೊಬ್ಬ 290 ಕಿ.ಮೀ ಪ್ರಯಾಣಿಸಿದ ಘಟನೆ ಮಧ್ಯಪ್ರದೇಶದಲ್ಲಿ ನಡೆದಿದೆ. ಇಟಾರ್ಸಿಯಿಂದ ಪ್ರಯಾಣಿಸಲು ಟಿಕೆಟ್ ಸಿಗದಿರುವ ಕಾರಣ ತನ್ನ ಪ್ರಾಣವನ್ನೇ ಪಣಕ್ಕಿಟ್ಟು 290 ಕಿ.ಮೀ ಪ್ರಯಾಣಿಸಿದ್ದಾನೆ. ದಾನಪುರ್ ಎಕ್ಸ್‌ಪ್ರೆಸ್ ರೈಲಿನಲ್ಲಿ ಇಟಾರ್ಸಿಯಿಂದ ಪ್ರಯಾಣಿಸಲು ಟಿಕೆಟ್ ಸಿಗದ ಕಾರಣ ಬೋಗಿಯ ಕೆಳಗೆ ಅವಿತುಕೊಂಡು ಕುಳಿತಿದ್ದಾನೆ. ಜಬಲ್ಪುರ ರೈಲು ನಿಲ್ದಾಣದ ಬಳಿ ಕ್ಯಾರೇಜ್ ಮತ್ತು ವ್ಯಾಗನ್ ಇಲಾಖೆ ಸಿಬ್ಬಂದಿ ನಡೆಸಿದ ರೋಲಿಂಗ್ ಪರೀಕ್ಷೆ ವೇಳೆ ವ್ಯಕ್ತಿಯೊಬ್ಬ ಅಡಗಿಕೊಂಡಿರುವುದು ಪತ್ತೆಯಾಗಿದೆ. ಬಳಿಕ ಆತನನ್ನು ವಿಚಾರಣೆಗೊಳಪಡಿಸಿದಾಗ ಇಟಾರ್ಸಿಯಲ್ಲಿ ತಾನು ರೈಲು ಹತ್ತಿರುವುದಾಗಿ ತಪ್ಪೊಪ್ಪಿಕೊಂಡಿದ್ದಾನೆ. ಟಿಕೆಟ್ ಖರೀದಿಸಲು ಹಣವಿಲ್ಲದ ಕಾರಣ, ರೈಲಿನ ಚಕ್ರಗಳ ನಡುವೆ ಪ್ರಯಾಣಿಸುವುದು ಸೂಕ್ತವೆನಿಸಿತು ಎಂದು ತಿಳಿಸಿದ್ದಾನೆ. ತಕ್ಷಣವೇ ಸ್ಥಳಕ್ಕೆ ರೈಲ್ವೆ ರಕ್ಷಣಾ ಪಡೆ (ಖಕಈ) ಸಿಬ್ಬಂದಿಯನ್ನು ಕರೆಸಲಾಯಿತು. ಆದರೆ ಆ ವ್ಯಕ್ತಿ ರೈಲಿನ ಕೆಳಗೆ ಹೇಗೆ ಅಡಗಿ ಕುಳಿತನು ಎನ್ನುವ ಕುರಿತು ಸ್ಪಷ್ಟವಾಗಿಲ್ಲ ಎಂದು ಅಧಿಕಾರಿಗಳು ತಿಳಿಸಿದ್ದಾರೆ. ಸದ್ಯ ಆತನ ವಿರುದ್ಧ ಪ್ರಕರಣ ದಾಖಲಾಗಿದ್ದು, ಅಧಿಕಾರಿಗಳು ಹೆಚ್ಚಿನ ತನಿಖೆ ನಡೆಸುತ್ತಿದ್ದಾರೆ. ವ್ಯಕ್ತಿ ಬೋಗಿಯಿಂದ ಕೆಳಗಿನಿಂದ ಹೊರಬರುತ್ತಿರುವ ವಿಡಿಯೋ ಸಾಮಾಜಿಕ ಜಾಲತಾಣಗಳಲ್ಲಿ ವೈರಲ್ ಆಗಿದೆ.



## ಮನಮೋಹನ್‌ಸಿಂಗ್‌ರನ್ನು ಹಾಡಿ ಹೊಗಳಿದ್ದ ಒಬಾಮಾ!



**ಅಮೆರಿಕ:** ಬರಾಕ್ ಒಬಾಮಾ ತಾವು ಅಮೆರಿಕಾದ ಅಧ್ಯಕ್ಷರಾಗಿದ್ದ ಕಾಲದ ಘಟನೆಗಳನ್ನು ಆಧರಿಸಿ ಬರೆದಿರುವ ಆತ್ಮಚರಿತ್ರೆ 'ಎ ಪ್ರಾಮಿಸ್ಡ್ ಲ್ಯಾಂಡ್'ನಲ್ಲಿ ಡಾ. ಮನಮೋಹನ್ ಸಿಂಗ್ ಅವರ ಬಗ್ಗೆ ಮನಸಾರೆ ಮೆಚ್ಚುಗೆ ವ್ಯಕ್ತಪಡಿಸಿದ್ದಾರೆ. ಬಿಳಿ ಗಡ್ಡ ಮತ್ತು ಪೇಟ ಡಾ. ಮನಮೋಹನ್ ಸಿಂಗ್ ಅವರ ಸಿಖ್ ನಂಬಿಕೆಯ ಹೆಗ್ಗುರುತುಗಳಾಗಿದ್ದವಾದರೂ ಪಾಶ್ಚಿಮಾತ್ಯರ ಕಣ್ಣುಗಳ ಪಾಲಿಗೆ ಸ್ವತಃ ಅವರೇ ಪವಿತ್ರ ಎಂದು ಪರಿಭಾವಿಸಬಹುದಾದ ವ್ಯಕ್ತಿಯಾಗಿದ್ದರು ಎಂದು ಬರೆದಿದ್ದಾರೆ.

ಆತ್ಮಚರಿತ್ರೆಯಲ್ಲಿ ಭಾರತ ಪ್ರವಾಸದ ಬಗ್ಗೆ ದಾಖಲಿಸಿರುವ ಬರಾಕ್ ಒಬಾಮಾ ಅವರು ಡಾ. ಮನಮೋಹನ್ ಸಿಂಗ್ ಅವರನ್ನು ಅಸಾಮಾನ್ಯ ಬುದ್ಧಿವಂತಿಕೆ ಹೊಂದಿದ್ದ ನಾಯಕ ಎಂದು ಬಣ್ಣಿಸಿದ್ದಾರೆ. ಮೃಧು ಮಾತಿನ ಅರ್ಥಶಾಸ್ತ್ರಜ್ಞ ಎಂದು ಕರೆದಿದ್ದಾರೆ. ಪ್ರಪಂಚವನ್ನೇ ಪೆಡಂಭೂತವಾಗಿ ಕಾಡುತ್ತಿದ್ದ ಆರ್ಥಿಕ ಹಿಂಜರಿತ ಭಾರತವನ್ನು ಬಾಧಿಸದಂತೆ ನೋಡಿಕೊಂಡ ಶ್ರೇಷ್ಠ ನಾಯಕ ಎಂದು ಸ್ಮರಿಸಿಕೊಂಡಿದ್ದಾರೆ.

ವಿಶ್ವದ ಶ್ರೇಷ್ಠ ಅರ್ಥಶಾಸ್ತ್ರಜ್ಞರಾದ ಡಾ. ಮನಮೋಹನ್ ಸಿಂಗ್ ಅವರೊಂದಿಗೆ ಬೆರೆಯುವ ಅವಕಾಶ ಸಿಕ್ಕಿದ್ದು ನನ್ನ ಪಾಲಿನ ಅದೃಷ್ಟ. ಅವರು ಅತ್ಯಂತ ಬುದ್ಧಿವಂತರು, ಚಿಂತನಾಶೀಲರು, ಅಪರಿಮಿತವಾದ ಪ್ರಾಮಾಣಿಕರು. ಭಾರತದ ಆರ್ಥಿಕತೆಯ ಜೊತೆಗೆ ಜಗತ್ತಿನ ಆರ್ಥಿಕತೆಗೆ ಹೊಸ ದಿಕ್ಕು ತೋರಿಸಿಕೊಟ್ಟವರು ಎಂದು ಒಬಾಮಾ ಬರೆದಿದ್ದಾರೆ. ಡಾ. ಮನಮೋಹನ್ ಸಿಂಗ್ ಮತ್ತು ಅವರ ಪತ್ನಿ ಗುರುಶರಣ್ ಕೌರ್ ದೆಹಲಿಯ ನಿವಾಸದಲ್ಲಿ ನನಗೆ ಮತ್ತು ಪತ್ನಿ ಮಿಚೆಲ್‌ಗೆ ಕ್ಯಾಂಡಲ್ ಲೈಟ್ ಡಿನ್ನರ್ ಗೆ ಆಹ್ವಾನಿಸಿದ್ದರು. ಊಟಕ್ಕೆ ಹೋಗುವ ಮುನ್ನ ನನ್ನ ಭುಜದ ಮೇಲೆ ಕೈಯಿಟ್ಟು ಹಲವು ವಿಷಯಗಳನ್ನು ಮಾತನಾಡಿದರು. ಜಗತ್ತಿನ ಅರ್ಥವ್ಯವಸ್ಥೆ ಅವನತಿಯಾಗುತ್ತಿರುವ ಬಗ್ಗೆ ಆತಂಕ ವ್ಯಕ್ತಪಡಿಸಿದರು. ಆಕಾಶ ನೋಡಿ ಮೋಡಗಳ ಬಗ್ಗೆ ಮಾತನಾಡಿ ಹಗುರವಾದರು. ಅವು ನನ್ನ ಪಾಲಿಗೆ ಅಪೂರ್ವ ಗಳಿಗೆಗಳು ಎಂದು ಒಬಾಮಾ ಬರೆದುಕೊಂಡಿದ್ದಾರೆ.

# ಅಯೋಧ್ಯೆ ರಾಮ ಮಂದಿರದ ಅರ್ಚಕರಿಗೆ ವಿಶಿಷ್ಟ ಡ್ರೆಸ್ಕೋಡ್



**ಅಯೋಧ್ಯೆ(ಉತ್ತರ ಪ್ರದೇಶ):** ರಾಮ ಮಂದಿರದ ಸಂಕೀರ್ಣದೊಳಗೆ ಪೂಜಾ ಕಾರ್ಯಗಳನ್ನು ನೆರವೇರಿಸುವ ಪುರೋಹಿತರು ಇನ್ನು ಮುಂದೆ ಹೊಸ ಮಾದರಿಯ ವಿಶಿಷ್ಟ ಉಡುಗೆಗಳನ್ನು ಧರಿಸಲಿದ್ದಾರೆ. ಪುರೋಹಿತರಿಗೆ 'ಹಳದಿ ಚೌಬಂದಿ ಮತ್ತು ಬಿಳಿ ಧೋತಿ' ಎಂಬ ಹೊಸ ಡ್ರೆಸ್ ಕೋಡ್ ಘೋಷಿಸಲಾಗಿದೆ. ಅಂದರೆ ಅವರು ಇನ್ನು ಮುಂದೆ ಹಳದಿ ನಿಲುವಂಗಿ ಹಾಗೂ ಶ್ವೇತ ವರ್ಣದ ಧೋತರ ಉಡಲಿದ್ದಾರೆ.

ಸಾಮಾನ್ಯವಾಗಿ ದೇವಾಲಯದ ಅರ್ಚಕರು ಕೇಸರಿ ನಿಲುವಂಗಿ ಮತ್ತು ಬಿಳಿ ಧೋತಿಯನ್ನು ಧರಿಸುತ್ತಾರೆ. ಆದರೆ ರಾಮ ಜನ್ಮಭೂಮಿ ದೇವಾಲಯದ ಅರ್ಚಕರು ಇದಕ್ಕೆ ಭಿನ್ನವಾಗಿ ಹಳದಿ ಬಣ್ಣದ ನಿಲುವಂಗಿ ಧರಿಸಲಿದ್ದಾರೆ.

ರಾಮ ಜನ್ಮಭೂಮಿ ದೇವಾಲಯದ ಮುಖ್ಯ ಅರ್ಚಕ ಆಚಾರ್ಯ ಸತ್ಯೇಂದ್ರ ದಾಸ್ ಅವರು ಐಎಎನ್‌ಎಸ್ ಜೊತೆ ಮಾತನಾಡಿ, ಈ ಕ್ರಮದ ಹಿಂದಿನ ಉದ್ದೇಶದ ಬಗ್ಗೆ ವಿವರಿಸಿದರು.

ಪ್ರತೀ ದೇವಾಲಯಕ್ಕೂ ಅದರದೇ ಆದ ಒಂದು ಗುರುತು ಇದೆ. ರಾಮ ಜನ್ಮಭೂಮಿ ದೇವಾಲಯದ ವಿಶಿಷ್ಟತೆ ಮತ್ತು ಅನನ್ಯ ಗುರುತನ್ನು ಪ್ರದರ್ಶಿಸಲು ಹೊಸ ಡ್ರೆಸ್ ಕೋಡ್ ಅನ್ನು ಜಾರಿಗೆ ತರಲಾಗಿದೆ. ಪುರೋಹಿತರಿಗೆ ಒಂದು ಜೋಡಿ ಹಳದಿ ಚೌಬಂದಿ ಮತ್ತು ಬಿಳಿ ಧೋತಿಯನ್ನು ನೀಡಲಾಗಿದೆ. ಇದೊಂದು ವಿಶಿಷ್ಟತೆಯನ್ನು ಸೂಚಿಸುತ್ತದೆ. ರಾಮ ಜನ್ಮಭೂಮಿ ತೀರ್ಥ ಕ್ಷೇತ್ರ ಟ್ರಸ್ಟ್‌ನ ಲಾಂಛನವನ್ನು ಸಹ ಚೌಬಂದಿಯ ಮೇಲೆ ಅಚ್ಚು ಹಾಕಲಾಗಿದೆ. ಇದು ರಾಮ ಜನ್ಮಭೂಮಿ ದೇವಾಲಯದ ಅರ್ಚಕರನ್ನು ದೇಶದ ಇತರ ದೇವಾಲಯಗಳಿಗಿಂತ ವಿಭಿನ್ನವಾಗಿಸುತ್ತದೆ. ಎಂದು ರಾಮ ದೇವಾಲಯದ ಪ್ರಧಾನ ಅರ್ಚಕರು ಹೇಳಿದರು.

ದೇವಾಲಯದ ಗರ್ಭಗುಡಿಯೊಳಗೆ ಮೊಬೈಲ್ ಫೋನ್ಗಳ ಮೇಲೆ ವಿಧಿಸಲಾದ ನಿರ್ಬಂಧಗಳ ಬಗ್ಗೆಯೂ ಅವರು ಮಾಹಿತಿ ನೀಡಿದರು.

## 2 ಡಾಲರ್ ಟಿಪ್ ಕೊಟ್ರು ಅಂತ ಗರ್ಭಿಣಿಗೆ 14 ಬಾರಿ ಚಾಕುವಿನಿಂದ ಇರಿದ

**ನ್ಯೂಯಾರ್ಕ್:** ಕೇವಲ 170 ಟಿಪ್ಸ್ ಕೊಟ್ಟರು ಎಂದು ಗರ್ಭಿಣಿಗೆ ಪಿಜ್ಜಾ ಡೆಲಿವರಿ ಕೆಲಸಗಾರ್ತಿ ಚಾಕುವಿನಿಂದ 14 ಬಾರಿ ಇರಿದಿರುವ ಘಟನೆ ಅಮೆರಿಕದ ಫ್ಲೋರಿಡಾದಲ್ಲಿ ನಡೆದಿದೆ.ಬ್ರಿಯಾನ್ನಾ ಅಲ್ವೆಲೊ (22) ಚಾಕುವಿನಿಂದ ಇರಿದ ಆರೋಪಿ. ಸಂತ್ರಸ್ತ ಮಹಿಳೆ ಕುಟುಂಬದವರು ಹುಟ್ಟುಹಬ್ಬದ ಸಂಭ್ರಮದಲ್ಲಿದ್ದರು. ಅದಕ್ಕಾಗಿ ಪಿಜ್ಜಾ ಆರ್ಡರ್ ಮಾಡಿದ್ದರು. ಆರ್ಡರ್ ತಂದುಕೊಟ್ಟ ಆರೋಪಿಯು ಕೇವಲ 2 ಡಾಲರ್ ಕೊಟ್ಟಿದ್ದಕ್ಕೆ ಚಾಕುವಿನಿಂದ ಗರ್ಭಿಣಿ ಮೇಲೆ ಹಲ್ಲೆ ನಡೆಸಿದ್ದಾಳೆ. ದಾಳಿಯ ಸಮಯದಲ್ಲಿ ಸಂತ್ರಸ್ತ ಮಹಿಳೆ, ಆಕೆಯ ಗೆಳೆಯ ಮತ್ತು ಆಕೆಯ 5 ವರ್ಷದ ಮಗಳು ಮೋಟೆಲ್ ಕೋಣೆಯಲ್ಲಿದ್ದರು. ಆರೋಪಿ ಅಲ್ವೆಲೊ ಪಿಜ್ಜಾ ಡೆಲಿವರಿ ಮಾಡಿದ್ದಳು. ಒಟ್ಟು ಮೊತ್ತ 33 (ಸುಮಾರು ರೂ. 2,800) ಆಗಿತ್ತು. ಡೆಲಿವರಿ ವರ್ಕರ್‌ಗೆ ಕೇವಲ 2 ಅನ್ನು ನೀಡಿದ್ದರು. ಅದನ್ನು ಪಡೆದು ಹೋಗಿದ್ದ ಆರೋಪಿ ಮತ್ತೆ 90 ನಿಮಿಷಗಳ ನಂತರ ತನ್ನ ಕೆಂಪು ಟೊಯೋಟಾದಲ್ಲಿ ಮುಸುಕುಧಾರಿ ಸಹಚರನೊಂದಿಗೆ ಹಿಂದಿರುಗಿ ಮಹಿಳೆ ಮೇಲೆ ಹಲ್ಲೆ ನಡೆಸಿದ್ದಾಳೆ. ಗರ್ಭಿಣಿಗೆ 14 ಬಾರಿ ಇರಿದು ಹಲ್ಲೆ ನಡೆಸಿದ್ದಾಳೆ. ವಿಷಯ ತಿಳಿದು ಪೊಲೀಸರು ಆಗಮಿಸುತ್ತಿದ್ದಂತೆ ಆರೋಪಿಗಳು ಪರಾರಿಯಾಗಿದ್ದಾರೆ. ಗಾಯಾಳು ಗರ್ಭಿಣಿಯನ್ನು ಹತ್ತಿರದ ಆಸ್ಪತ್ರೆಗೆ ಚಿಕಿತ್ಸೆಗೆ ದಾಖಲಿಸಲಾಗಿದೆ. ಆರೋಗ್ಯ ಸ್ಥಿರವಾಗಿದೆ ಎಂದು ತಿಳಿದುಬಂದಿದೆ. ಮರುದಿನ ಅಧಿಕಾರಿಗಳು ಆರೋಪಿತಳನ್ನು ಬಂಧಿಸಿದ್ದಾರೆ. ಕೊಲೆಯ ಯತ್ನ, ಬಂದೂಕಿನಿಂದ ಮನೆ ಮೇಲೆ ಆಕ್ರಮಣ ಕೇಸ್ ದಾಖಲಿಸಲಾಗಿದೆ. ಆಕೆಯನ್ನು ಬಾಂಡ್ ಇಲ್ಲದೆ ಓಸ್ಸಿಯೋಲಾ ಕೌಂಟಿ ಜೈಲಿನಲ್ಲಿ ಇರಿಸಲಾಗಿದೆ.

## ಮುಂಬೈ ದಾಳಿಯ ಮಾಸ್ಟರ್ ಮೈಂಡ್ ಅಬ್ದುಲ್ ರಹಮಾನ್ ಮಕ್ಕಿ ಸಾವು

**ಇಸ್ಲಾಮಾಬಾದ್:** ಮುಂಬೈ ದಾಳಿಯ ಮಾಸ್ಟರ್ ಮೈಂಡ್ ಹಫೀಜ್ ಸಯೀದ್ ಸೋದರ ಮಾವ ಮತ್ತು ನಿಷೇಧಿತ ಜಮಾತ್-ಉದ್-ದವಾ ಉಪ ಮುಖ್ಯಸ್ಥ ಹಫೀಜ್ ಅಬ್ದುಲ್ ರಹಮಾನ್ ಮಕ್ಕಿ ಶುಕ್ರವಾರ ಲಾಹೋರ್‌ನಲ್ಲಿ ಹೃದಯಾಘಾತದಿಂದ ಸಾವನ್ನಪ್ಪಿದ್ದಾನೆ. ಕಳೆದ ಕೆಲವು ದಿನಗಳಿಂದ ಮಧುಮೇಹ, ಅನಾರೋಗ್ಯದಿಂದ ಬಳಲುತ್ತಿದ್ದ ಅಬ್ದುಲ್ ರಹಮಾನ್ ಮಕ್ಕಿ ಲಾಹೋರ್‌ನ ಖಾಸಗಿ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದ. ಇಂದು (ಡಿ.27) ಮುಂಜಾನೆ ಮಕ್ಕಿ ಹೃದಯಾಘಾತದಿಂದ ಆಸ್ಪತ್ರೆಯಲ್ಲಿ ಮೃತಪಟ್ಟಿದ್ದಾನೆ ಎಂದು ವರದಿಯಾಗಿದೆ. ಭಯೋತ್ಪಾದನಾ ಕೃತ್ಯಗಳಿಗೆ ಹಣಕಾಸಿನ ನೆರವು ಒದಗಿಸುತ್ತಿದ್ದ ಈತನಿಗೆ 2020 ರಲ್ಲಿ ಭಯೋತ್ಪಾದನೆ ನಿಗ್ರಹ ನ್ಯಾಯಾಲಯವು ಆರು ತಿಂಗಳ ಜೈಲು ಶಿಕ್ಷೆಯನ್ನು ವಿಧಿಸಿತ್ತು. 2023 ರಲ್ಲಿ ಮಕ್ಕಿಯನ್ನು ವಿಶ್ವಸಂಸ್ಥೆಯು ಜಾಗತಿಕ ಭಯೋತ್ಪಾದಕ ಘೋಷಿಸಿ ಆತನ ಸ್ವತ್ತುಗಳ ಜಪ್ತಿ ಮಾಡಿ ಪ್ರಯಾಣ ನಿಷೇಧ ಹೇರಿತ್ತು.



# ಬೆಂಗಳೂರಿನಲ್ಲಿ ತುಂತುರು ಮಳೆ



**ಬೆಂಗಳೂರು:** ಪಶ್ಚಿಮ ಬಂಗಾಳಕೊಲ್ಲಿಯಲ್ಲಿ ವಾಯುಭಾರ ಕುಸಿತದ ಹಿನ್ನೆಲೆಯಲ್ಲಿರಾಜ್ಯದ ಕೆಲವು ಜಿಲ್ಲೆಗಳಲ್ಲಿಮಳೆಯಾಗುತ್ತಿದ್ದು, ಶನಿವಾರ ಕೂಡ ಮಳೆ ಮುಂದುವರಿಯುವ ಸಾಧ್ಯತೆಯಿದೆ. ಭಾನುವಾರದ ನಂತರ ಮಳೆ ಪ್ರಮಾಣ ಕ್ಷೀಣಿಸಲಿದೆ ಎಂದು ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ.

ಶುಕ್ರವಾರ ಚಿತ್ರದುರ್ಗ, ಬೆಂಗಳೂರು, ವಿಜಯಪುರ, ಹಿರಿಯೂರು, ಚಿಕ್ಕಬಳ್ಳಾಯಿಪುರ ಮತ್ತು ಬೆಂಗಳೂರು ಗ್ರಾಮಾಂತರ ಜಿಲ್ಲೆಗಳಲ್ಲಿ ಸಾಧಾರಣ ಮಳೆಯಾಗಿದೆ. ಡಿ.28ರಂದು ಉತ್ತರ ಕನ್ನಡ, ಉಡುಪಿ, ದಕ್ಷಿಣ ಕನ್ನಡ, ಬಾಗಲಕೋಟೆ, ಧಾರವಾಡ, ಗದಗ, ಹಾವೇರಿ, ಬೆಂಗಳೂರು ನಗರ ಮತ್ತು ಗ್ರಾಮಾಂತರ, ಶಿವಮೊಗ್ಗ, ಚಿಕ್ಕಮಗಳೂರು, ಚಿಕ್ಕಬಳ್ಳಾಪುರ, ಹಾಸನ, ಕೊಡಗು, ಮಂಡ್ಯ, ಮೈಸೂರು, ಚಾಮರಾಜನಗರ, ತುಮಕೂರು, ವಿಜಯನಗರ, ಕೊಡಗು, ಚಿತ್ರದುರ್ಗ, ಕೋಲಾರ ಜಿಲ್ಲೆಗಳಲ್ಲಿಹಗುರದಿಂದ ಕೂಡಿದ ಸಾಧಾರಣ ಮಳೆಯಾಗಲಿದೆ ಎಂದು ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ.

ರಾಜ್ಯದಲ್ಲಿ ಈ ವರ್ಷ ಶೇ.19ರಷ್ಟು ಅಕ ಮಳೆಯಾಗಿದೆ. ವಾಡಿಕೆಯ ಪ್ರಕಾರ, ಡಿ.27ವರೆಗೆ 1155 ಮಿ.ಮೀ. ಮಳೆಯಾಗಯಿಬೇಕಿತ್ತು. ಸದ್ಯ 1385 ಮಿ.ಮೀ. ಮಳೆಯಾಗಿದೆ. ಹಿಂಗಾರಿನಲ್ಲಿವಾಡಿಕೆಯ ಪ್ರಕಾರ, 182 ಮಿ.ಮೀ. ಬದಲಿಗೆ 238 ಮಿ.ಮೀ. ಮಳೆಯಾಗಿದೆ.

## 41 ಔಷಧ ಮಾದರಿಗಳು ಪ್ರಮಾಣಿತ ಗುಣಮಟ್ಟದಲ್ಲ

**ನವದೆಹಲಿ:** ನವೆಂಬರ್‌ನಲ್ಲಿ ಕೇಂದ್ರ ಔಷಧ ಪ್ರಯೋಗಾಲಯಗಳಲ್ಲಿ ಪರೀಕ್ಷೆಗೊಳಪಡಿಸಿದ 41 ಔಷಧ ಮಾದರಿಗಳು 'ನಾಟ್ ಆಫ್ ಸ್ಟ್ಯಾಂಡರ್ಡ್ ಕ್ವಾಲಿಟಿ' ಎಂದು ಭಾರತದ ಔಷಧ ನಿಯಂತ್ರಕ ಪತ್ತೆ ಮಾಡಿದೆ ಎಂದು ಕೇಂದ್ರ ಆರೋಗ್ಯ ಸಚಿವಾಲಯ ತಿಳಿಸಿದೆ. ರಾಜ್ಯ ಔಷಧ ಪರೀಕ್ಷಾ ಪ್ರಯೋಗಾಲಯಗಳು 70 ಔಷಧ ಮಾದರಿಗಳನ್ನು 'ನಾಟ್ ಆಫ್ ಸ್ಟ್ಯಾಂಡರ್ಡ್ ಕ್ವಾಲಿಟಿ' (ಪ್ರಮಾಣಿತ ಗುಣಮಟ್ಟದಲ್ಲ) ಎಂದು ಗುರುತಿಸಿವೆ. ಇದಲ್ಲದೆ, ಎರಡು ಔಷಧ ಮಾದರಿಗಳನ್ನು ನಕಲಿ ಔಷಧಗಳೆಂದು ಗುರುತಿಸಲಾಗಿದೆ. ಎರಡು ಮಾದರಿಗಳಲ್ಲಿ ಒಂದು ಔಷಧದ ಮಾದರಿಯನ್ನು ಬಿಹಾರ ಡ್ರಗ್ಸ್ ಕಂಟ್ರೋಲ್ ಅಥಾರಿಟಿ ಮತ್ತು ಇನ್ನೊಂದು ಮಾದರಿಯನ್ನು ಅಆಖಅಔ (ಉತ್ತರ ವಲಯ), ಗಾಜಿಯಾಬಾದ್ನಿಂದ ಆಯ್ಕೆ ಮಾಡಲಾಗಿತ್ತು. ಇತರ ಕಂಪನಿಗಳ ಒಡೆತನದ ಬ್ರ್ಯಾಂಡ್ ಹೆಸರುಗಳನ್ನು ಬಳಸಿಕೊಂಡು ಅನಧಿಕೃತ ಮತ್ತು ಅಪರಿಚಿತ ತಯಾರಕರು ಔಷಧಗಳನ್ನು ತಯಾರಿಸಿದ್ದಾರೆ. ಈ ವಿಷಯದ ಬಗ್ಗೆ ತನಿಖೆ ಪ್ರಾರಂಭಿಸಲಾಗಿದೆ ಎಂದು ಕೇಂದ್ರ ಆರೋಗ್ಯ ಸಚಿವಾಲಯ ತಿಳಿಸಿದೆ. ಪ್ರಮಾಣಿತ ಗುಣಮಟ್ಟದಲ್ಲದ ಮತ್ತು ನಕಲಿ ಔಷಧಗಳ ಪಟ್ಟಿಯನ್ನು ಪ್ರತಿ ತಿಂಗಳು CDSCO ಪೋರ್ಟಲ್‌ನಲ್ಲಿ ಪ್ರದರ್ಶಿಸಲಾಗುತ್ತದೆ ಎಂದು ಸಚಿವಾಲಯ ತಿಳಿಸಿದೆ.

## ಯೆಮೆನ್ ಮೇಲೆ ಇಸ್ರೇಲ್ ಮತ್ತೆ ದಾಳಿ



**ಅಡೆನ್:** ಯೆಮೆನ್ ರಾಜಧಾನಿ ಸನಾ ಮತ್ತು ಕೆಂಪು ಸಮುದ್ರದ ಬಂದರು ನಗರ ಹೊದ್ಯೆದಾದಲ್ಲಿನ ಪ್ರಮುಖ ಮೂಲಸೌಕರ್ಯ ಮತ್ತು ಹೌತಿ ಉಗ್ರರ ನೆಲೆಗಳ ಮೇಲೆ ಇಸ್ರೇಲ್ ವೈಮಾನಿಕ ದಾಳಿ ನಡೆಸಿದೆ ಎಂದು ಮಾಧ್ಯಮ ವರದಿಗಳು ತಿಳಿಸಿವೆ. ಹೌತಿ ಗುಂಪಿನ ನಿಯಂತ್ರಣದಲ್ಲಿರುವ ಪ್ರದೇಶಗಳಾದ ಸನಾ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣ ಮತ್ತು ಹೆಜ್ಯಾಜ್ ವಿದ್ಯುತ್ ಸ್ಥಾವರದ ಮೇಲೆ ಈ ದಾಳಿಗಳು ನಡೆದಿವೆ ಎಂದು ವರದಿಯಾಗಿದೆ.

ಇದು ಮಾತ್ರವಲ್ಲದೇ ಹೊದ್ಯೆದಾದಲ್ಲಿನ ಹಲವಾರು ಸ್ಥಳಗಳ ಮೇಲೆ ದಾಳಿ ನಡೆದಿವೆ ಎಂದು ಕ್ಸಿನ್ಹುವಾ ಸುದ್ದಿ ಸಂಸ್ಥೆ ವರದಿ ಮಾಡಿದೆ. ಹೌತಿ ನಾಯಕ ಅಬ್ದುಲ್-ಮಲಿಕ್ ಅಲ್-ಹೌತಿ ಟಿವಿಯಲ್ಲಿ ಕಾಣಿಸಿಕೊಂಡು ಭಾಷಣ ಮಾಡುತ್ತಿರುವಾಗಲೇ ಇಸ್ರೇಲ್ ದಾಳಿ ನಡೆಸಿರುವುದು ಗಮನಾರ್ಹ. ಸನಾ ಮತ್ತು ಹೊದ್ಯೆದಾವನ್ನು ಗುರಿಯಾಗಿಸಿಕೊಂಡು ಇಸ್ರೇಲ್ ತೀವ್ರ ವಾಯು ದಾಳಿ ನಡೆಸಿದೆ ಎಂದು ಇಸ್ರೇಲ್‌ನ ಸರ್ಕಾರಿ ಸ್ವಾಮ್ಯದ ಕಾನ್ ಟಿವಿ ವರದಿ ಮಾಡಿದೆ.

ಯೆಮೆನ್ ನಲ್ಲಿ ದೊಡ್ಡ ಸ್ಫೋಟದ ಸದ್ದು ಕೇಳಿ ಬಂದಿದ್ದು, ಕಟ್ಟಡಗಳ ಮೇಲೆ ಕಪ್ಪು ಹೊಗೆ ಮತ್ತು ಬೆಂಕಿಯ ಜ್ವಾಲೆ ಆವರಿಸಿರುವುದು ಸಾಮಾಜಿಕ ಮಾಧ್ಯಮಗಳಲ್ಲಿ ಹರಿದಾಡುತ್ತಿರುವ ವೀಡಿಯೊ ಕ್ಲಿಪ್ಗಳಲ್ಲಿ ಕಾಣಿಸಿದೆ. ಹೌತಿ ಪಡೆಗಳು ಇಸ್ರೇಲ್ ಮತ್ತು ಹಡಗು ಮಾರ್ಗಗಳ ಮೇಲೆ ದಾಳಿಯನ್ನು ಮತ್ತಷ್ಟು ತೀವ್ರಗೊಳಿಸುವ ಉದ್ದೇಶ ಹೊಂದಿರುವುದು ತಿಳಿದ ನಂತರ ಈ ದಾಳಿಗಳನ್ನು ನಡೆಸಲಾಗಿದೆ ಎಂದು ಇಸ್ರೇಲ್ ಮಾಧ್ಯಮಗಳು ತಿಳಿಸಿವೆ.

# ವಾಹನ ಕ್ಷೇತ್ರದಲ್ಲಿ ಹೊಸ ಸಂಚಲನ ಮೂಡಿಸಿದ ಒಸಾಮು ಸುಜುಕಿ ವಿಧಿವಶ






**ಟೋಕಿಯೊ:** ಮಾರುತಿ ಸುಜುಕಿ ಮೂಲಕ ಭಾರತದ ವಾಹನ ಕ್ಷೇತ್ರದಲ್ಲಿ ಹೊಸ ಸಂಚಲನ ಮೂಡಿಸಿದ ಜಪಾನ್ನ ಒಸಾಮು ಸುಜುಕಿ ಅವರು ವಿಧಿವಶರಾಗಿದ್ದಾರೆ. ಅವರಿಗೆ 94 ವರ್ಷ ವಯಸ್ಸಾಗಿತ್ತು

ಒಸಾಮು ಅವರು ಸುಜುಕಿ ಮೋಟಾರು ಕಂಪನಿಯನ್ನು ಅತ್ಯಂತ ಯಶಸ್ವಿಯಾಗಿ ಮುನ್ನಡೆಸಿದ್ದಾರೆ. ನಾಲ್ಕು ದಶಕಗಳ ಕಾಲ ಕಂಪನಿಯನ್ನು ಜಾಗತಿಕ ಮಟ್ಟದಲ್ಲಿ ಬೆಳೆಸುವುದರ ಜತೆಗೆ, ಭಾರತದಲ್ಲೂ ಸುಜುಕಿ ಕಂಪನಿಯ ಬೆಳವಣಿಗೆಗೆ ಸಾಕಷ್ಟು ಶ್ರಮಿಸಿದವರು. 660 ಸಿಸಿ ಸಾಮರ್ಥ್ಯದ ಅಗ್ಗದ ಹಾಗೂ ಪುಟ್ಟ ಕಾರುಗಳನ್ನು ಉತ್ಪಾದಿಸುವ ಮೂಲಕ ಗ್ರಾಹಕರಿಗೆ ತೆರಿಗೆ ಹೊರೆಯನ್ನೂ ಒಸಾಮು ಕಡಿಮೆ ಮಾಡಿದ್ದರು.

ಒಸಾಮು ಅವರು ಮತ್ಸುಡಾ ಕುಟುಂಬಕ್ಕೆ ಸೇರಿದವರಾಗಿದ್ದರು. ಆದರೆ ಪತ್ನಿಯ ಕುಟುಂಬದ ಉಪನಾಮ ಸುಜುಕಿಯನ್ನು ಇಟ್ಟುಕೊಂಡಿದ್ದರು. ಗಂಡು ಸಂತಾನವಿಲ್ಲದ ಕುಟುಂಬದ ಹೆಣ್ಣುಮಗಳನ್ನು ವರಿಸಿದ್ದರಿಂದ ಜಪಾನ್ನ ಸಂಪ್ರದಾಯದಂತೆ ಅಲ್ಲಿಯ ಉಪನಾಮವನ್ನೇ ಒಸಾಮು ಇಟ್ಟುಕೊಂಡಿದ್ದರು. ಬ್ಯಾಂಕ್ ಉದ್ಯೋಗಿಯಾಗಿದ್ದ ಒಸಾಮು, ನಂತರ ಪತ್ನಿಯ ಅಜ್ಜ ಸ್ಥಾಪಿಸಿದ್ದ ಕಂಪನಿಯಲ್ಲಿ ಕೆಲಸ ಆರಂಭಿಸಿದರು. 1958ರಲ್ಲಿ ಕಂಪನಿ ಸೇರಿದರೂ, ಕೇವಲ ಎರಡೇ ದಶಕದಲ್ಲಿ ಉನ್ನತ ಹುದ್ದೆಗೇರಿದರು. ಹೊಸ ಪರಿಸರ ನೀತಿಗೆ ಪೂರಕವಾಗಿ ಎಂಜಿನ್ ಅನ್ನು ಟೊಯೊಟಾದಿಂದ ಪಡೆಯುವ ಮೂಲಕ 1970ರಲ್ಲಿ ಸುಜುಕಿ ಕಂಪನಿಯನ್ನು ಅವಿರತವಾಗಿ ಶ್ರಮಿಸಿ ಒಸಾಮು ಉಳಿಸಿದರು. ಅಲ್ಲಿಂದ ಆಲ್ಟೊ ಮಿನಿ ವಾಹನವು ಭಾರೀ ಬೇಡಿಕೆ ಪಡೆಯಿತು. 1981ರಲ್ಲಿ ಜನರಲ್ ಮೋಟಾರ್ಸ್ ಜತೆ ಸುಜುಕಿ ಕೈಜೋಡಿಸಿತು.

## ಪ್ರಾಂಪ್ಟ್ ಇನ್ಶುರೆರ್ ಶೀರ್ಷಿಕೆ ಮುಡಿಗೇರಿಸಿಕೊಂಡ ಲಿಬರ್ಟಿ ಜನರಲ್ ಇನ್ಶುರೆನ್ಸ್




**ದೆಹಲಿ:** ಇತ್ತೀಚೆಗೆ ನಡೆದ 2024 ರ ET ನೌ ವಿಮಾ ಶೃಂಗಸಭೆ ಮತ್ತು ಪ್ರಶಸ್ತಿಗಳು ಕಾರ್ಯಕ್ರಮದಲ್ಲಿ ಭಾರತದ ಪ್ರಮುಖ ಸಾಮಾನ್ಯ ವಿಮಾ ಕಂಪನಿಗಳಲ್ಲಿ ಒಂದಾದ ಲಿಬರ್ಟಿ ಜನರಲ್ ಇನ್ಶುರೆನ್ಸ್ ಸಂಸ್ಥೆಯು ತನ್ನ ಚುರುಕು ಸೇವೆಗಾಗಿ ಪ್ರಾಂಪ್ಟ್ ಇನ್ಶುರೆರ್ ಪ್ರಶಸ್ತಿಯ ಗೌರವವನ್ನು ಪಡೆಯಿತು. ಈ ಮನ್ನಣೆಯು ಲಿಬರ್ಟಿಯ ಬದ್ಧತೆಯ ಕಾರ್ಯನಿರ್ವಹಣೆ ಮತ್ತು ಸಮಯೋಚಿತ, ಗ್ರಾಹಕ-ಕೇಂದ್ರಿತ ಕ್ಲೈಮ್ಗಳ ಇತ್ಯರ್ಥ ಗೊಳಿಸುವಿಕೆಯಲ್ಲಿನ ದಕ್ಷತೆಯನ್ನು ಒತ್ತಿಹೇಳುತ್ತದೆ ಅಷ್ಟೇ ಅಲ್ಲದೆ ಜೀವವಿಮೆಯೇತರ ವಲಯದಲ್ಲಿ ವಿಶ್ವಾಸಾರ್ಹ ಸಂಸ್ಥೆಯಾಗಿ ತನ್ನ ಸ್ಥಾನವನ್ನು ಇನ್ನಷ್ಟು ಬಲಪಡಿಸುತ್ತದೆ.

ಮೋಟಾರ್ ಓನ್ ಡ್ಯಾಮೇಜ್ ಮತ್ತು ಅಪಘಾತ ಮತ್ತು ಆರೋಗ್ಯ ವಿಭಾಗಗಳಲ್ಲಿ ಗಮನಾರ್ಹ ಸಾಧನೆಗಳೊಂದಿಗೆ, ಲಿಬರ್ಟಿ ಜನರಲ್ ಇನ್ಶ್ಯೂರೆನ್ಸ್ ಈ ಪುರಸ್ಕಾರದ ಜೊತೆಗೆ ಅಜ 2024-25ನಲ್ಲಿ ಉತ್ತಮ ಕಾರ್ಯಕ್ಷಮತೆಯನ್ನು ಪ್ರದರ್ಶಿಸಿದೆ. ಮೋಟಾರ್ A&H ವಿಭಾಗದಲ್ಲಿ, ಲಿಬರ್ಟಿ 97.43% ನಷ್ಟ ಚುಕಾವಣೆ ಅನುಪಾತವನ್ನು ಮತ್ತು 94.18% ನಷ್ಟ ಪಾವತಿಯ ಅನುಪಾತವನ್ನು ದಾಖಲಿಸಿದೆ. ಇದಲ್ಲದೆ, 90% ಕ್ಲೈಮ್ಗಳನ್ನು 30 ದಿನಗಳಲ್ಲಿ ಇತ್ಯರ್ಥಗೊಳಿಸಲಾಗಿದೆ, ಇದು ಸಕಾಲಿಕ ಸೇವೆಗೆ ಸಂಸ್ಥೆಯ ಬದ್ಧತೆಯನ್ನು ಪ್ರದರ್ಶಿಸುತ್ತದೆ. ಕಂಪನಿಯು ವಿಲೇವಾರಿ ಅನುಪಾತ 100% ಮತ್ತು 90% ರ ಆಂತರಿಕ ಹಕ್ಕುಗಳ ನಿರ್ವಹಣೆ ಅನುಪಾತವನ್ನು ಸಹ ನಿರ್ವಹಿಸಿದೆ. ಗಮನಾರ್ಹವಾಗಿ, 5,000 ಗ್ಯಾರೇಜ್ಗಳ ವ್ಯವಹಾರದ ನಗದು ರಹಿತ ಜಾಲವು ಪರಿಣಾಮಕಾರಿ ಪಾಲಿಸಿದಾರರ ಸೇವೆಯನ್ನು ಖಚಿತಗೊಳಿಸುತ್ತದೆ A&Hವಿಭಾಗದಲ್ಲಿ, ಲಿಬರ್ಟಿಯ ಕಾರ್ಯಕ್ಷಮತೆಯು ಕಾರ್ಯಾಚರಣೆಯ ದಕ್ಷತೆ ಮತ್ತು ಗ್ರಾಹಕ-ಕೇಂದ್ರಿತ ಪ್ರಕ್ರಿಯೆಗಳ ಮೇಲೆ ಅದರ ಗಮನವನ್ನು ಪ್ರತಿಬಿಂಬಿಸುತ್ತದೆ. ಕಂಪನಿಯು 97.39% ರ ಚುಕಾವಣೆ ಅನುಪಾತವನ್ನು ಸಾಧಿಸಿದೆ ಮತ್ತು 87.23% ನಷ್ಟ ಕ್ಲೈಮ್ಗಳ ಪಾವತಿಸಿದ ಅನುಪಾತವನ್ನು ಸಾಧಿಸಿದೆ, 96.215% ಕ್ಲೈಮ್ಗಳನ್ನು 30 ದಿನಗಳಲ್ಲಿ ಇತ್ಯರ್ಥಪಡಿಸಲಾಗಿದೆ. 100.17 ಪ್ರತಿಶತ ವಿಲೇವಾರಿ ಅನುಪಾತವು ಕ್ಲೈಮ್ಗಳನ್ನು ಪರಿಣಾಮಕಾರಿಯಾಗಿ ನಿರ್ವಹಿಸುವ ಅದರ ಸಾಮರ್ಥ್ಯವನ್ನು ಎತ್ತಿ ತೋರಿಸುತ್ತದೆ. 6,300 ಕ್ಕೂ ಹೆಚ್ಚು ಆಸ್ಪತ್ರೆಗಳ ವ್ಯಾಪಕವಾದ ನಗದು ರಹಿತ ಜಾಲವು ತನ್ನ ಗ್ರಾಹಕರಿಗೆ ಸುವ್ಯವಸ್ಥಿತ ಆರೋಗ್ಯ ಪರಿಹಾರಗಳನ್ನು ಒದಗಿಸುವ ಲಿಬರ್ಟಿಯ ಸಾಮರ್ಥ್ಯವನ್ನು ಇನ್ನಷ್ಟು ಹೆಚ್ಚಿಸುತ್ತದೆ. ಮಾನ್ಯತೆಯ ಕುರಿತು, ಲಿಬರ್ಟಿ ಜನರಲ್ ಇನ್ಶ್ಯೂರೆನ್ಸ್ ಸಂಸ್ಥೆಯ ಅಇಔ ಮತ್ತು ಪೂರ್ಣಾವಧಿ ನಿರ್ದೇಶಕರಾಗಿರುವ ಶ್ರೀ. ಪರಾಗ್ ವೇದ್ ಅವರು ಮಾತನಾಡುತ್ತಾ, ''ಈ ಪ್ರಶಸ್ತಿಯು ನಮ್ಮ ಪಾಲಿಸಿದಾರರಿಗೆ ಸಮರ್ಥ ಮತ್ತು ಪಾರದರ್ಶಕ ಕ್ಲೈಮ್ ರೆಸಲ್ಯೂಶನ್ಗಳನ್ನು ಒದಗಿಸಲು ನಮ್ಮ ನಿರಂತರ ಪ್ರಯತ್ನಗಳನ್ನು ಪ್ರತಿಬಿಂಬಿಸುತ್ತದೆ. ಮೋಟಾರು ಮತ್ತು ಆರೋಗ್ಯ ವಿಮೆ ಎರಡರಲ್ಲೂ ನಾವು ಸಾಧಿಸಿದ ಫಲಿತಾಂಶಗಳು ಸೇವಾ ವಿತರಣೆಯನ್ನು ಸುಧಾರಿಸುವ ಮತ್ತು ಗ್ರಾಹಕರ ನಿರೀಕ್ಷೆಗಳನ್ನು ಪೂರೈಸುವ ನಮ್ಮ ಸಾಧನೆಗೆ ಸಾಕ್ಷಿಯಾಗಿದೆ. ತಂತ್ರಜ್ಞಾನವನ್ನು ಬಳಸಿಕೊಳ್ಳುವ ಮೂಲಕ ಮತ್ತು ಗ್ರಾಹಕ-ಕೇಂದ್ರಿತ ವಿಧಾನವನ್ನು ನಿರ್ವಹಿಸುವ ಮೂಲಕ, ನಮ್ಮ ಪಾಲಿಸಿದಾರರಿಗೆ ನಾವು ಒದಗಿಸುವ ಮೌಲ್ಯವನ್ನು ನಿರಂತರವಾಗಿ ಹೆಚ್ಚಿಸಲು ನಾವು ಬದ್ಧರಾಗಿದ್ದೇವೆ. ಎಂದು ಹೇಳಿದರು.

ಸಂಜೆ ಮುಗಿಲು

Postal Registration No.KA/BGW-1823/2019-2021, Posted at Patrika Channel, RMS Bhavan, Bengaluru PSO, Mysore Road, Bengaluru- 560020, RNI No.KARKAN/2002/08054

# 'ಮುದ್ದುಲಕ್ಷ್ಮಿ' ಸೀರಿಯಲ್ ನಟ ಚರಿತ್ ಬಾಳಪ್ಪ ಬಂಧನ

ಗೆಳತಿಯ ಮೇಲೆ ಲೈಂಗಿಕ ದೌರ್ಜನ್ಯ ಎಸಗಿರುವ ಆರೋಪದಡಿ ಕಿರುತೆರೆ ನಟ ಚರಿತ್ ಬಾಳಪ್ಪ ಅವರನ್ನು ಪೊಲೀಸರು ಬಂಧಿಸಿದ್ದಾರೆ.

ಕನ್ನಡದ ಮುದ್ದುಲಕ್ಷ್ಮಿ, ಲವಲವಿಕೆ, ಸರ್ಪಸಂಬಂಧ ಸೇರಿದಂತೆ ತೆಲುಗಿನ ಅನೇಕ ಧಾರಾವಾಹಿಗಳಲ್ಲಿ ನಟಿಸಿ ಚರಿತ್ ಬಾಳಪ್ಪ ಖ್ಯಾತಿ ಪಡೆದಿದ್ದರು. ನಟ ಚರಿತ್‌ನನ್ನು ಆರ್‌ಆರ್ ನಗರ ಪೊಲೀಸರು ಬಂಧಿಸಿದ್ದು, ಲೈಂಗಿಕ ದೌರ್ಜನ್ಯ, ಕೊಲೆ ಬೆದರಿಕೆ ಹಾಗೂ ಹಲ್ಲೆ ಮಾಡಿರುವುದಾಗಿ ನಟನ ವಿರುದ್ಧ ಯುವತಿ ಆರೋಪಿಸಿದ್ದಾರೆ.

ನಿನ್ನನ್ನ ಪ್ರೀತಿಸುತ್ತೇನೆ ಎಂದು ಹೇಳಿ ದೈಹಿಕ ಸಂಪರ್ಕಕ್ಕೆ ಒತ್ತಾಯಿಸಿದ್ದಾನೆ. ಜೊತೆಗೆ ಯುವತಿ ವಾಸ



ಮಾಡುತ್ತಿದ್ದ ಮನೆಗೆ ನುಗ್ಗಿ ಸಹಚರರ ಜೊತೆ ಕಿರುಕುಳ ನೀಡಿದ್ದಾನೆ. ಹಣಕ್ಕೂ ಬೇಡಿಕೆಯಿಟ್ಟಿದ್ದು, ಹಣ ಕೊಡದಿದ್ದರೆ ಆಕೆಯ ಖಾಸಗಿ ಫೋಟೋ, ವೀಡಿಯೋ ಹರಿಬಿಡುವ ಬೆದರಿಕೆ ಹಾಕಿದ್ದಾನೆ ಎಂದು ಯುವತಿ ಆರೋಪಿಸಿದ್ದಾರೆ.

ಇದಕ್ಕೂ ಮುನ್ನ ನಟ ಚರಿತ್ ಹಾಗೂ ಪತ್ನಿ ಮಂಜುಶ್ರೀ ಡಿವೋರ್ಸ್ ಪಡೆದಿದ್ದರು. ಕೋರ್ಟ್ ಆಜ್ಞೆಯಂತೆ ಡಿವೋರ್ಸ್ ಪರಿಹಾರ ಹಣಕ್ಕೆ ನೋಟಿಸ್ ಕಳಿಸಿದ್ದಕ್ಕೆ ಬೆದರಿಕೆ ಹಾಕಿದ್ದಾರೆಂದು ಚರಿತ್ ವಿರುದ್ಧ ಪತ್ನಿ ಮಂಜುಶ್ರೀ ದೂರು ನೀಡಿದ್ದರು. ಇದಕ್ಕೆ ಸಂಬಂಧಿಸಿದಂತೆ ಕಳೆದ ಜೂನ್ ತಿಂಗಳಲ್ಲಿ ಸರ್ಜಾಪುರ ಪೊಲೀಸ್ ಠಾಣೆಯಲ್ಲಿ ಎಫ್‌ಐಆರ್ ದಾಖಲಾಗಿತ್ತು.

### ವಿಶ್ವ ಚೆಸ್ ಚಾಂಪಿಯನ್ ಗುಕೇಶ್‌ಗೆ ಸರ್ಪ್ರೈಸ್

# ಗಿಫ್ಟ್ ನೀಡಿದ ತಲೈವಾ, ಶಿವಕಾರ್ತಿಕೇಯನ್



ವಿಶ್ವ ಚೆಸ್ ಚಾಂಪಿಯನ್ ಡಿ.ಗುಕೇಶ್ ರಜನಿಕಾಂತ್ ಮತ್ತು 'ಅಮರನ್' ನಟ ಶಿವಕಾರ್ತಿಕೇಯನ್ ಅವರನ್ನು ಭೇಟಿಯಾಗಿದ್ದಾರೆ. ಭಾರತಕ್ಕೆ ಹೆಮ್ಮೆ ತಂದಿರುವ ಗುಕೇಶ್ ಸಾಧನೆಯನ್ನು ಕೊಂಡಾಡಿ ತಲೈವಾ ಮತ್ತು ಶಿವಕಾರ್ತಿಕೇಯನ್ ಶುಭಹಾರೈಸಿದ್ದಾರೆ.

ಗುಕೇಶ್ ತಮ್ಮ ಪೋಷಕರೊಂದಿಗೆ ರಜನಿಕಾಂತ್ ನಿವಾಸಕ್ಕೆ ಭೇಟಿ ನೀಡಿದ್ದಾರೆ. ಈ ವೇಳೆ, ತಲೈವಾ ಗುಕೇಶ್‌ಗೆ ಶಾಲು ಹೊದಿಸಿ ಸನ್ಮಾನ ಮಾಡಿದ್ದಾರೆ. ಪುಸ್ತಕವೊಂದನ್ನು ಗಿಫ್ಟ್ ಆಗಿ ನೀಡಿದ್ದಾರೆ ತಲೈವಾ. ಈ ಕುರಿತು ಸೋಶಿಯಲ್ ಮೀಡಿಯಾದಲ್ಲಿ 'ಸೂಪರ್ ಸ್ಟಾರ್ ರಜನಿಕಾಂತ್ ಅವರ ಹಾರೈಕೆಗಳಿಗೆ ಧನ್ಯವಾದಗಳು. ನಮ್ಮನ್ನು ಮನೆಗೆ ಆಹ್ವಾನಿಸಿ, ನಮ್ಮೊಂದಿಗೆ ಅಮೂಲ್ಯವಾದ ಸಮಯ ಕಳೆದು, ಜ್ಞಾನ ಹಂಚಿಕೊಂಡಿದ್ದಕ್ಕೆ ಧನ್ಯವಾದ ಸರ್' ಎಂದು ಗುಕೇಶ್ ಬರೆದುಕೊಂಡಿದ್ದಾರೆ.

ಬಳಿಕ 'ಅಮರನ್' ನಟ ಶಿವಕಾರ್ತಿಕೇಯನ್ ಅವರ ನಿವಾಸಕ್ಕೆ ಗುಕೇಶ್ ಫ್ಯಾಮಿಲಿ ಭೇಟಿ ಮಾಡಿದ್ದಾರೆ. ವಿಶ್ವ ಚೆಸ್ ಚಾಂಪಿಯನ್ ಆಗಿ ಗೆದ್ದ ಖುಷಿಯನ್ನು ನಟನೊಂದಿಗೆ ಕೇಕ್ ಕತ್ತರಿಸಿ ಸಂಭ್ರಮಿಸಿದ್ದಾರೆ. ಬಳಿಕ ಗುಕೇಶ್‌ಗೆ ದುಬಾರಿ ವಾಚ್‌ವೊಂದನ್ನು ಶಿವಕಾರ್ತಿಕೇಯನ್ ಉಡುಗೊರೆಯಾಗಿ ನೀಡಿದ್ದಾರೆ.





# ಯೇ ಜವಾನಿ ಹೈ ದೀವಾನಿ ಜ.3ಕ್ಕೆ ರೀ-ರಿಲೀಸ್

ಈಚೆಗೆ ಕರಣ್ ಜೋಹರ್ ಅವರ ಧರ್ಮ ಪ್ರೊಡಕ್ಷನ್ಸ್ 'ಯೇ ಜವಾನಿ ಹೈ ದೀವಾನಿ' ಸಿನಿಮಾ ಬಗ್ಗೆ ಪೋಸ್ಟ್‌ವೊಂದನ್ನು ಹಂಚಿಕೊಂಡಿದೆ. ಬಾಲಿವುಡ್ ನಟ ರಣಬೀರ್ ಕಪೂರ್ ಮತ್ತು ದೀಪಿಕಾ ಪಡುಕೋಣೆ ಅಭಿನಯದ ಈ ಚಿತ್ರ ಜ.3 ಕ್ಕೆ ರೀ-ರಿಲೀಸ್ ಆಗಲಿದೆ.

ಬಾಲಿವುಡ್‌ನ ಅತ್ಯಂತ ಪ್ರೀತಿಪಾತ್ರ ಚಲನಚಿತ್ರಗಳಲ್ಲಿ ಒಂದಾದ ಯೇ ಜವಾನಿ ಹೈ ದೀವಾನಿ 2025 ರ ಜನವರಿ 3 ರಂದು 46 ನಗರಗಳಲ್ಲಿ 140 ಪಿವಿಆರ್, ಇನೋಕ್ಸ್ ಚಿತ್ರಮಂದಿರಗಳಲ್ಲಿ ಥಿಯೇಟರ್‌ಗಳಲ್ಲಿ ರೀ ರಿಲೀಸ್ ಆಗಲಿದೆ. 2024 ರಲ್ಲಿ, ತುಂಬದ್, ವೀರ್ ಜರಾ, ಮತ್ತು ರೆಹನಾ ಹೈ ತೇರ್ರೆ ದಿಲ್ ಮೇ ಮುಂತಾದ ಹಲವಾರು ಚಲನಚಿತ್ರಗಳು ಥಿಯೇಟರ್‌ಗಳಲ್ಲಿ ರೀ-ರಿಲೀಸ್ ಆಗಿದ್ದವು. ರಣಬೀರ್ ಮತ್ತು ದೀಪಿಕಾ ಜೋಡಿ ಸಿನಿಮಾವನ್ನು ದೊಡ್ಡ ಪರದೆಯಲ್ಲಿ ಕಣ್ತುಂಬಿಕೊಳ್ಳಲು ಫ್ಯಾನ್ಸ್ ಕಾಯ್ತಿದ್ದಾರೆ.

ಯೇ ಜವಾನಿ ಹೈ ದೀವಾನಿ ಮರು-ಬಿಡುಗಡೆಯ ಬಗ್ಗೆ ಖುಷಿ ವ್ಯಕ್ತಪಡಿಸಿದ ನಿರ್ಮಾಪಕ ಕರಣ್ ಜೋಹರ್, 'ಯೇ ಜವಾನಿ ಹೈ ದೀವಾನಿ' ಧರ್ಮ ಪ್ರೊಡಕ್ಷನ್ಸ್ ಹೃದಯದಲ್ಲಿ ವಿಶೇಷ ಸ್ಥಾನವನ್ನು ಹೊಂದಿದೆ. ಈ ಸಿನಿಮಾದಲ್ಲಿ ಉತ್ತಮ ಸಂಗೀತವಿದೆ. ನಮ್ಮ ಅತ್ಯಂತ ಪ್ರೀತಿಯ ಕೆಲವು ನಟರು ಮತ್ತು ಎಲ್ಲಾ ತಲೆಮಾರುಗಳನ್ನು



ಪ್ರತಿಧ್ವನಿಸುವ ಕಥೆಯನ್ನು ಹೊಂದಿದೆ. ಹೊಸ ವರ್ಷವನ್ನು ಖುಷಿಯಾಗಿ ಸ್ವಾಗತಿಸಲು ಸಿನಿಮಾ ಪೂರಕವಾಗಿದೆ ಎಂದು ತಿಳಿಸಿದ್ದಾರೆ.

ಯೇ ಜವಾನಿ ಹೈ ದೀವಾನಿಯು ರೊಮ್ಯಾಂಟಿಕ್ ಹಾಸ್ಯ-ಡ್ರಾಮಾ ಮೂವಿಯಾಗಿದೆ. ರಣಬೀರ್ ಕಪೂರ್, ದೀಪಿಕಾ ಪಡುಕೋಣೆ, ಕಲ್ಕಿ ಕೋಚ್ಲಿನ್ ಮತ್ತು ಆದಿತ್ಯ ರಾಯ್ ಕಪೂರ್ ಪ್ರಮುಖ ಪಾತ್ರಗಳಲ್ಲಿ ನಟಿಸಿದ್ದಾರೆ. ಅದರ ಕಥಾಹಂದರ ಮತ್ತು ಪಾತ್ರವರ್ಗದ ಪ್ರದರ್ಶನಗಳ ಹೊರತಾಗಿ, ಚಿತ್ರವು ಅದರ ಚಾರ್ಟ್‌ಬಸ್ಟರ್ ಹಾಡುಗಳಾದ ಬದ್ತಮೀಜ್ ದಿಲ್, ಬಲಮ್ ಪಿಚ್ಕರಿ ಮತ್ತು ದಿಲ್ಲಿವಾಲಿ ಗರ್ಲ್‌ಫ್ರೆಂಡ್‌ಗಳಿಗೆ ಜನಪ್ರಿಯವಾಗಿದೆ.

# ತಗ್ಗೋದೆ ಇಲ್ಲ ಆಸ್ಟ್ರೇಲಿಯನ್ನರ ಮುಂದೆ ಪುಷ್ಪ ಸ್ಟೈಲ್‌ನಲ್ಲಿ ನಿತೀಶ್‌ಕುಮಾರ್ ರೆಡ್ಡಿ

ಬಾರ್ಡರ್-ಗವಾಸ್ಕರ್ ಟೆಸ್ಟ್ ಸರಣಿಯ ನಾಲ್ಕನೇ ಪಂದ್ಯದಲ್ಲಿ ಮೊದಲು ಬ್ಯಾಟ್ ಮಾಡಿದ ಆಸ್ಟ್ರೇಲಿಯಾ ತಂಡವು 474 ರನ್ ಗಳಿಸಿ ಆಲೌಟ್ ಆಗಿದೆ. ಇದಕ್ಕುತ್ತರವಾಗಿ ಮೆಲ್ಬೋರ್ನ್ ನ ಎಂಸಿಜಿ ಸ್ಟೇಡಿಯಂನಲ್ಲಿ ನಡೆಯುತ್ತಿರುವ ಆಸ್ಟ್ರೇಲಿಯಾ ವಿರುದ್ಧದ 4ನೇ ಟೆಸ್ಟ್ ಪಂದ್ಯದಲ್ಲಿ ಟೀಮ್ ಇಂಡಿಯಾ ದಾಂಡಿಗ ನಿತೀಶ್ ಕುಮಾರ್ ರೆಡ್ಡಿ ಭರ್ಜರಿ ಶತಕ ಸಿಡಿಸಿ ಮಿಂಚಿದ್ದಾರೆ. ಈ ಪಂದ್ಯದಲ್ಲಿ 8ನೇ ಕ್ರಮಾಂಕದಲ್ಲಿ ಕಣಕ್ಕಿಳಿದ ನಿತೀಶ್ 171 ಎಸೆತಗಳಲ್ಲಿ ಚೊಚ್ಚಲ ಶತಕ ಪೂರೈಸಿದರು.

ಈ ಪಂದ್ಯದಲ್ಲಿ ಟಾಸ್ ಗೆದ್ದ ಆಸ್ಟ್ರೇಲಿಯಾ ತಂಡವು ಮೊದಲ ಇನಿಂಗ್ಸ್‌ನಲ್ಲಿ 474 ರನ್ ಕಲೆಹಾಕಿದೆ. ಇದಕ್ಕುತ್ತರವಾಗಿ ಇನಿಂಗ್ಸ್ ಆರಂಭಿಸಿದ ಟೀಮ್ ಇಂಡಿಯಾ ಉತ್ತಮ ಆರಂಭ ಪಡೆದಿರಲಿಲ್ಲ. ಆರಂಭಿಕನಾಗಿ ಕಣಕ್ಕಿಳಿದ ರೋಹಿತ್ ಶರ್ಮಾ ಕೇವಲ 3 ರನ್ ಗಳಿಸಿ ಔಟಾದರೆ, ಮೂರನೇ ಕ್ರಮಾಂಕದಲ್ಲಿ ಬ್ಯಾಟ್ ಬೀಸಿದ ಕೆಎಲ್ ರಾಹುಲ್ 24 ರನ್ ಗಳಿಸಿ ವಿಕೆಟ್ ಒಪ್ಪಿಸಿದರು.



ಈ ಹಂತದಲ್ಲಿ ಜೊತೆಗೂಡಿದ ವಿರಾಟ್ ಕೊಹ್ಲಿ ಹಾಗೂ ಯಶಸ್ವಿ ಜೈಸ್ವಾಲ್ ಶತಕದ ಜೊತೆಯಾಟ ಪ್ರದರ್ಶಿಸಿದರು. ಆದರೆ ತಂಡದ ಮೊತ್ತ 153 ರನ್ ಆಗಿದ್ದ ವೇಳೆ ರನ್ ಕದಿಯುವ ಯತ್ನದಲ್ಲಿ ಯಶಸ್ವಿ ಜೈಸ್ವಾಲ್ (82) ರನೌಟ್ ಆಗಿ ಹೊರ ನಡೆದರು.

ಇದರ ಬೆನ್ನಲ್ಲೇ ವಿರಾಟ್ ಕೊಹ್ಲಿ (36) ಸಹ ವಿಕೆಟ್ ಒಪ್ಪಿಸಿದರು. ಆ ಬಳಿಕ ಬಂದ ಆಕಾಶ್ ದೀಪ್ (0) ಶೂನ್ಯಕ್ಕೆ ಔಟಾದರೆ, ರಿಷಭ್ ಪಂತ್ 28 ರನ್ ಗಳಿಸಲಷ್ಟೇ ಶಕ್ತರಾದರು.

ಈ ಹಂತದಲ್ಲಿ ಕಣಕ್ಕಿಳಿದ ನಿತೀಶ್ ಕುಮಾರ್ ರೆಡ್ಡಿ ಜವಾಬ್ದಾರಿಯುತ ಬ್ಯಾಟಿಂಗ್ ಪ್ರದರ್ಶಿಸಿದರು. ಎಚ್ಚರಿಕೆಯೊಂದಿಗೆ ರನ್ ಗಳಿಸುತ್ತಾ ಸಾಗಿದ ನಿತೀಶ್ 81 ಎಸೆತಗಳಲ್ಲಿ ಅರ್ಧಶತಕ ಪೂರೈಸಿದರು. ಹಾಫ್ ಸೆಂಚುರಿಯ ಬಳಿಕ ಆಸೀಸ್ ಬೌಲರ್ ಗಳನ್ನು ಕಾಡಿದ ಯುವ ದಾಂಡಿಗ ಟೀಮ್ ಇಂಡಿಯಾ ಮೊತ್ತವನ್ನು 300ರ ಗಡಿದಾಟಿಸುವಲ್ಲಿ ಪ್ರಮುಖ ಪಾತ್ರವಹಿಸಿದರು. ಅಲ್ಲದೆ 150 ಎಸೆತಗಳಲ್ಲಿ 1 ಸಿಕ್ಸ್ ಹಾಗೂ 8 ಫೋರ್ ಗಳೊಂದಿಗೆ ಭರ್ಜರಿ ಶತಕ ಸಿಡಿಸಿದರು. ನಿತೀಶ್ ಕುಮಾರ್ ರೆಡ್ಡಿ ಅವರ ಆಕರ್ಷಕ ಶತಕದ ನೆರವಿನಿಂದ ಟೀಮ್ ಇಂಡಿಯಾ 110 ಓವರ್ ಗಳ ಮುಕ್ತಾಯದ ವೇಳೆಗೆ 7 ವಿಕೆಟ್ ಕಳೆದುಕೊಂಡು 350 ರನ್ ಕಲೆಹಾಕಿದೆ.

# ಟೀಮ್ ಇಂಡಿಯಾ ವಿರುದ್ಧ ಇತಿಹಾಸ ರಚಿಸಿದ ಸ್ಟೀವ್ ಸ್ಮಿತ್

ಮೆಲ್ಬೋರ್ನ್‌ನಲ್ಲಿ ನಡೆಯುತ್ತಿರುವ ಭಾರತದ ವಿರುದ್ಧದ 4ನೇ ಟೆಸ್ಟ್ ಪಂದ್ಯದಲ್ಲಿ ಆಕರ್ಷಕ ಶತಕ ಸಿಡಿಸುವ ಮೂಲಕ ಸ್ಟೀವ್ ಸ್ಮಿತ್ ಹೊಸ ಇತಿಹಾಸ ನಿರ್ಮಿಸಿದ್ದಾರೆ. ಅದು ಕೂಡ ಬಲಿಷ್ಠ ಭಾರತ ತಂಡದ ವಿರುದ್ಧ ಅತ್ಯಧಿಕ ಸೆಂಚುರಿ ಸಿಡಿಸಿದ ದಾಖಲೆಯೊಂದಿಗೆ ಎಂಬುದು ವಿಶೇಷ.

ಈ ಪಂದ್ಯದ ಮೊದಲ ಇನಿಂಗ್ಸ್‌ನಲ್ಲಿ ಆಸ್ಟ್ರೇಲಿಯಾ ಪರ 4ನೇ ಕ್ರಮಾಂಕದಲ್ಲಿ ಕಣಕ್ಕಿಳಿದ ಸ್ಮಿತ್ ಅದ್ಭುತ ಬ್ಯಾಟಿಂಗ್ ಪ್ರದರ್ಶಿಸಿದ್ದರು. ಟೀಮ್ ಇಂಡಿಯಾ ವೇಗಿಗಳನ್ನು ಅತ್ಯುತ್ತಮವಾಗಿ ಎದುರಿಸಿದ ಸ್ಮಿತ್ 197 ಎಸೆತಗಳಲ್ಲಿ 3 ಸಿಕ್ಸ್ ಹಾಗೂ 13 ಫೋರ್‌ಗಳೊಂದಿಗೆ 140 ರನ್ ಬಾರಿಸಿದರು. ಈ ಶತಕದೊಂದಿಗೆ ಭಾರತದ ವಿರುದ್ಧ ಅಂತಾರಾಷ್ಟ್ರೀಯ ಕ್ರಿಕೆಟ್‌ನಲ್ಲಿ ಅತೀ ಹೆಚ್ಚು ಶತಕ ಸಿಡಿಸಿದ ಬ್ಯಾಟರ್ ಎನಿಸಿಕೊಂಡರು.

ಇದಕ್ಕೂ ಮುನ್ನ ಈ ಭರ್ಜರಿ ದಾಖಲೆ ಆಸ್ಟ್ರೇಲಿಯಾದ ಮಾಜಿ ನಾಯಕ ರಿಕಿ ಪಾಂಟಿಂಗ್ ಹೆಸರಿನಲ್ಲಿತ್ತು. ಭಾರತದ ವಿರುದ್ಧ ಮೂರು ಸ್ವರೂಪಗಳಲ್ಲಿ 111 ಇನಿಂಗ್ಸ್ ಆಡಿರುವ ಪಾಂಟಿಂಗ್ ಒಟ್ಟು 14 ಸೆಂಚುರಿ ಸಿಡಿಸಿ ಈ ವಿಶೇಷ ದಾಖಲೆ ಬರೆದಿದ್ದರು. ಇದೀಗ ಈ ದಾಖಲೆಯನ್ನು ಸ್ಮಿತ್ ಅಳಿಸಿ ಹಾಕಿದ್ದಾರೆ.

ಸ್ಟೀವ್ ಸ್ಮಿತ್ ಟೀಮ್ ಇಂಡಿಯಾ ವಿರುದ್ಧ ಈವರೆಗೆ ಒಟ್ಟು 62 ಪಂದ್ಯಗಳನ್ನಾಡಿದ್ದು, ಈ ವೇಳೆ 78 ಇನಿಂಗ್ಸ್ ಆಡಿದ್ದಾರೆ. ಇದರ ನಡುವೆ 15 ಶತಕಗಳನ್ನು ಬಾರಿಸಿದ್ದಾರೆ. ಈ ಮೂಲಕ ಭಾರತದ ವಿರುದ್ಧ ಅಂತಾರಾಷ್ಟ್ರೀಯ ಕ್ರಿಕೆಟ್‌ನಲ್ಲಿ ಅತೀ ಹೆಚ್ಚು ಸೆಂಚುರಿ ಸಿಡಿಸಿದ ಬ್ಯಾಟರ್ ಎಂಬ ದಾಖಲೆಯನ್ನು ತಮ್ಮದಾಗಿಸಿಕೊಂಡಿದ್ದಾರೆ.



ಇನ್ನು ಅಂತಾರಾಷ್ಟ್ರೀಯ ಕ್ರಿಕೆಟ್‌ನಲ್ಲಿ ಒಂದೇ ತಂಡದ ವಿರುದ್ಧ ಅತ್ಯಧಿಕ ಶತಕ ಬಾರಿಸಿದ ವಿಶ್ವ ದಾಖಲೆ ಮಾಸ್ಟರ್ ಬ್ಲಾಸ್ಟರ್ ಸಚಿನ್ ತೆಂಡೂಲ್ಕರ್ ಹೆಸರಿನಲ್ಲಿದೆ. ಆಸ್ಟ್ರೇಲಿಯಾ ವಿರುದ್ಧ 110 ಪಂದ್ಯಗಳಲ್ಲಿ 144 ಇನಿಂಗ್ಸ್ ಆಡಿರುವ ಸಚಿನ್ 20 ಸೆಂಚುರಿ ಸಿಡಿಸಿ ಈ ದಾಖಲೆ ನಿರ್ಮಿಸಿದ್ದಾರೆ.

ಇದೀಗ ಟೀಮ್ ಇಂಡಿಯಾ ವಿರುದ್ಧ ಟೆಸ್ಟ್‌ನಲ್ಲಿ 11 ಶತಕ ಹಾಗೂ ಏಕದಿನ ಕ್ರಿಕೆಟ್‌ನಲ್ಲಿ 4 ಶತಕ ಸಿಡಿಸಿರುವ ಸ್ಟೀವ್ ಸ್ಮಿತ್ ಮಾಸ್ಟರ್ ಬ್ಲಾಸ್ಟರ್ ಸಚಿನ್ ತೆಂಡೂಲ್ಕರ್ ಅವರ ವಿಶ್ವದಾಖಲೆಯನ್ನು ಮುರಿಯಲು ಇನ್ನೂ 6 ಸೆಂಚುರಿಗಳನ್ನು ಬಾರಿಸಬೇಕಿದೆ. ಪ್ರಸ್ತುತ ಟೆಸ್ಟ್ ಸರಣಿ ಹಾಗೂ ಮುಂಬರುವ ಚಾಂಪಿಯನ್ಸ್ ಟ್ರೋಫಿಯಲ್ಲಿ ಟೀಮ್ ಇಂಡಿಯಾ ವಿರುದ್ಧ ಸ್ಮಿತ್ ಅಬ್ಬರಿಸಿದರೆ ಈ ದಾಖಲೆಯನ್ನು ಮುರಿಯಬಹುದು.

# ವಕ್ಫ್ ಇಲಾಖೆ ವಾಹನಗಳಿಗೆ ಪೆಟ್ರೋಲ್ ತುಂಬಿಸುವುದರಲ್ಲಿ ಭ್ರಷ್ಟಾಚಾರ

**ವಿಜಯಪುರ:** ಅಲ್ಪಸಂಖ್ಯಾತ ಕಲ್ಯಾಣ ಹಾಗೂ ವಕ್ಫ್ ಇಲಾಖೆಯಲ್ಲಿ ಮನಬಂದಂತೆ ಪೆಟ್ರೋಲ್ ಇಂಡೆಂಟ್‌ಗಳನ್ನು ಬಳಸಿಕೊಂಡು ಸರ್ಕಾರಿ ವಾಹನ ಚಾಲಕರು ಹಾಗೂ ಪೆಟ್ರೋಲ್ ಸರ್ವಿಸ್ ಸ್ಟೇಷನ್ ಗಳು ದೊಡ್ಡ ಭ್ರಷ್ಟಾಚಾರವನ್ನು ಎಸಗಿದ್ದಾರೆ ಎಂದು ಬಿಜೆಪಿ ಶಾಸಕ ಬಸನಗೌಡ ಪಾಟೀಲ್ ಯತ್ನಾಳ್ ಆರೋಪ ಮಾಡಿದ್ದಾರೆ. ಈ ಕುರಿತಾಗಿ ಸರ್ಕಾರದ ಮುಖ್ಯ ಕಾರ್ಯದರ್ಶಿಗಳಿಗೆ ಪತ್ರ ಬರೆದಿದ್ದು ಸರ್ಕಾರದ ಎಲ್ಲ ಇಲಾಖೆಗಳಿಗೂ ಇಂಧನ ಮಿತಿ ಮಾರ್ಗಸೂಚಿ ಹೊರಡಿಸುವಂತೆ ಮನವಿ ಮಾಡಿದ್ದಾರೆ.

**ಯತ್ನಾಳ್ ಬರೆದ ಪತ್ರದಲ್ಲಿ ಏನಿದೆ?:** ರಾಜ್ಯದ ತೆರಿಗೆ ಹಣವನ್ನು ಅತ್ಯಂತ ಜವಾಬ್ದಾರಿಯುತವಾಗಿ, ರಾಜ್ಯದ ಕಲ್ಯಾಣಕ್ಕೆ, ಅಭಿವೃದ್ಧಿ ಕಾರ್ಯಗಳಿಗೆ, ಉದ್ಯೋಗ ಸೃಜನೆ, ಮೂಲಸೌಕರ್ಯ ಅಭಿವೃದ್ಧಿ, ಬಡವರ, ರೈತರ ಶ್ರೇಯೋಭಿವೃದ್ಧಿಗೆ, ಮಹಿಳಾ ಸಬಲೀಕರಣ ಉಪಯೋಗಿಸಬೇಕು. ಆದರೆ, ಅಲ್ಪಸಂಖ್ಯಾತ ಕಲ್ಯಾಣ ಹಾಗೂ ವಕ್ಫ್ ಇಲಾಖೆಯಲ್ಲಿ ಮನಬಂದಂತೆ ಪೆಟ್ರೋಲ್ ಇಂಡೆಂಟ್‌ಗಳನ್ನು ಬಳಸಿಕೊಂಡು ಸರ್ಕಾರಿ ವಾಹನ ಚಾಲಕರು ಹಾಗೂ ಪೆಟ್ರೋಲ್ ಸರ್ವಿಸ್ ಸ್ಟೇಷನ್ ಗಳು ದೊಡ್ಡ ಭ್ರಷ್ಟಾಚಾರವನ್ನು ಎಸಗಿದ್ದಾರೆ.

ಕಾರಿಗೆ ಪೆಟ್ರೋಲ್ ಹಾಕಿಸುವಾಗ ಸಂಬಂಧಪಟ್ಟ ಇಲಾಖೆಯ ಮೊಹರು ಇರಬೇಕು ಹಾಗೂ ಇಲಾಖೆಯ ಮುಖ್ಯಸ್ಥರ ಸಹಿ ಇರಬೇಕು. ಆದರೆ, ಅಲ್ಪಸಂಖ್ಯಾತ, ಹಜ್ ಮತ್ತು ವಕ್ಫ್ ಇಲಾಖೆಯ ಕಾರ್ಯದರ್ಶಿಗಳಾದ ಮನೋಜ್ ಕುಮಾರ್ ಅವರ ವಾಹನ ಸಂ.ಕೆಎ 01 ಜಿಬಿ 9990 ಗೆ ಇಂಡೆಂಟ್ ಗಳು ಇಲ್ಲದಿದ್ದರೂ ಪೆಟ್ರೋಲ್ ತುಂಬಿಸಲಾಗಿರುವುದನ್ನು ಮಾಧ್ಯಮಗಳು



ದಾಖಲೆ ಸಮೇತ ಬಯಲು ಮಾಡಿವೆ. ಕೇವಲ ಐದು ತಿಂಗಳಲ್ಲಿ ಈ ವಾಹನಕ್ಕೆ 390 ಲೀಟರ್ ಪೆಟ್ರೋಲ್ ತುಂಬಿಸಲಾಗಿದೆ. ಚಾಲಕ ಮಹೇಶ್ ಎನ್ ಎಂಬುವವರು 2023 ಡಿಸೆಂಬರ್, 2024 ಜನವರಿ, ಫೆಬ್ರವರಿ, ಮಾರ್ಚ್ ಮತ್ತು ಮೇ ತಿಂಗಳ ಇಂಧನನಿಂದ ಬಿಲ್‌ಗಳಲ್ಲಿ ವ್ಯತ್ಯಯ ಆಗಿರುವುದು ಗೊತ್ತಾಗಿದೆ. ಈ ಸಂಬಂಧ ಮಾಧ್ಯಮವೊಂದು ಬಿಡುಗಡೆ ಮಾಡಿರುವ ದಾಖಲೆಯನ್ನು ಈ ಪತ್ರದ ಮೂಲಕ ಲಗತ್ತಿರಿಸುತ್ತೇನೆ.

ಇಲಾಖೆಗಳ ಪ್ರಧಾನ ಕಾರ್ಯದರ್ಶಿಗಳು, ಆಯುಕ್ತರು, ನಿರ್ದೇಶಕರಿಗೆ ಒದಗಿಸಿರುವ ವಾಹನಗಳಿಗೆ ದಿನಂಪ್ರತಿ ಇಷ್ಟೇ ಪ್ರಮಾಣದಲ್ಲಿ ಪೆಟ್ರೋಲ್ ಹಾಕಿಸಬೇಕೆಂದು ಯಾವುದೇ ನಿಯಮ ಅಥವಾ ಮಿತಿ ಇರುವುದಿಲ್ಲ. ತಾವು ಕೂಡಲೇ ಪ್ರಧಾನ ಕಾರ್ಯದರ್ಶಿಗಳೂ ಸೇರಿ ಸರ್ಕಾರದ ವಾಹನ ಬಳಸುವ ಎಲ್ಲರಿಗೂ ಇಂಧನವನ್ನು ಬಳಸಲು ಒಂದು ಮಾರ್ಗಸೂಚಿಯನ್ನು ಸರ್ಕಾರದ ವತಿಯಿಂದ ಹೊರಡಿಸಬೇಕು ಹಾಗೂ ಮೂರು ತಿಂಗಳಿಗೊಮ್ಮೆ ವಾಹನ ಕ್ರಮಿಸಿರುವ ಕಿಲೋಮೀಟರ್ ಮತ್ತು ಉಪಯೋಗಿಸಿರುವ ಇಂಧನವನ್ನು ಆಡಿಟ್ ಮಾಡಬೇಕೆಂದು ಮನವಿ, ತನ್ಮೂಲಕ ದುರುಪಯೋಗ ಮಾಡಿಕೊಳ್ಳುವುದನ್ನು ತಪ್ಪಿಸಬಹುದು.

ದಯವಿಟ್ಟು ತಾವು ಸರ್ಕಾರದ ಎಲ್ಲ ಇಲಾಖೆಗಳಿಗೂ ನೀಡಿರುವ ವಾಹನಗಳಿಗೆ 'ಇಂಧನ ನೀತಿ ಮಾರ್ಗಸೂಚಿಯನ್ನು' ಪರಿಚಯಿಸಿ ಸರ್ಕಾರದ ಹಣವನ್ನು ಕೆಲ ಪಟ್ಟಭದ್ರರು. ಭ್ರಷ್ಟ ನೌಕರರು. ಚಾಲಕರು ದುರುಪಯೋಗ ಮಾಡಿಕೊಳ್ಳದಂತೆ ಕ್ರಮ ಕೈಗೊಳ್ಳಬೇಕಾಗಿ ತಮ್ಮಲ್ಲಿ ಕೋರುತ್ತೇನೆ'' ಎಂದು ಪತ್ರದಲ್ಲಿ ಬರೆದಿದ್ದಾರೆ.

# ಗ್ರಾ.ಪಂ ಸದಸ್ಯನಾದ್ರೂ, ಸಾಕು ಅಹಂ ಬರುತ್ತೆ

## 10 ವರ್ಷ ಪ್ರಧಾನಿ ಆದ್ರೂ, ಸಿಂಗ್ ಬಳಿ ಅಹಂ ಸುಳಿಯಲಿಲ್ಲ

**ಬೆಂಗಳೂರು:** ಗ್ರಾಮ ಪಂಚಾಯಿತಿ ಸದಸ್ಯ, ಅಧ್ಯಕ್ಷ ಆದ್ರೆ ಸಾಕು ಜನರಿಗೆ ಅಹಂ ಬಂದು ಬಿಡುತ್ತದೆ. ಅದೆಲ್ಲವನ್ನೂ ಮೀರಿ ನಿಂತವರು ಮಾಜಿ ಪ್ರಧಾನಿ ಮನಮೋಹನ್ ಸಿಂಗ್ ಎಂದು ಮಾಜಿ ಸಿಎಂ ಡಿ.ವಿ ಸದಾನಂದಗೌಡ ಹೇಳಿದ್ದಾರೆ.

ಬೆಂಗಳೂರಿನಲ್ಲಿ ಸುದ್ದಿಗಾರರೊಂದಿಗೆ ಅವರು ಮಾತನಾಡಿದರು. ಈ ವೇಳೆ, ಸಿಂಗ್ 10 ವರ್ಷ ಸಿಂಗ್ ಪ್ರಧಾನಿಯಾಗಿದ್ದರೂ ಸಹ ಅಹಂ ಅವರ ಬಳಿ ಸುಳಿಯಲಿಲ್ಲ. ಈಗ ಯಾವುದೇ ಪಾರ್ಟಿಯಾಗಲಿ ಒಬ್ಬ ಗ್ರಾಮ ಪಂಚಾಯತಿ ಸದಸ್ಯ ಆದ್ರೂ, ಸಾಕು ಅವರ ಅಹಂ ನೋಡೋಕೆ ಆಗಲ್ಲ.



ಅದೆಲ್ಲವನ್ನೂ ಮೀರಿ ನಿಂತವರು ಸಿಂಗ್. ಅವರು ಎಂದು ರಾಜಕಾರಣ ಮಾಡಿಲ್ಲ, ಎಲ್ಲರ ಜೊತೆ ಬಹಳ ಸೌಜನ್ಯದಿಂದ ನಡೆದುಕೊಳ್ಳುತ್ತಿದ್ದರು ಎಂದು ಹೇಳಿದ್ದಾರೆ.

ಮನಮೋಹನ್ ಸಿಂಗ್ ಅವರು ಪ್ರಧಾನಿ ಸ್ಥಾನದ ಘನತೆ ಉಳಿಸಿಕೊಂಡಿದ್ದರು. ಅವರ ವಿರುದ್ಧ ತಿರುಗಿ ಬಿದ್ದರೂ ವಿಚಲಿತರಾಗದೆ ಗೌರವಯುತವಾಗಿ ನಡೆದುಕೊಳ್ಳುತ್ತಿದ್ದರು. ಅವರು ದೇಶದ ಉತ್ಕೃಷ್ಟ ರಾಜಕಾರಣಿ. ಅವರ ಅಗಲುವಿಕೆ ದೇಶಕ್ಕೆ ತುಂಬಲಾರದ ನಷ್ಟ ಎಂದು ಹೇಳಿದ್ದಾರೆ.

ಸೋನಿಯಾ ಗಾಂಧಿ, ಇಂದಿರಾ ಗಾಂಧಿಯವರ ಕೈಗೊಂಬೆ ಎಂದು ಅನಿಸಿಕೊಂಡ್ರೂ, ಸಹ, ಅಂತಹ ಪರಿಸ್ಥಿತಿಯನ್ನು ದೇಶದ ಹಿತಾಸಕ್ತಿಗೆ ಪೂರಕವಾಗಿ ಅವರು ಪರಿವರ್ತಿಸಿದ್ದರು ಎಂದಿದ್ದಾರೆ.

Printed, Published & Owned by N.Venugopal Krishna, Printed at DASHAPRAMATHI MUDRANALAYA, No.433/1, Chikkavitalenahalli Village, Thagachagere Post, Kasaba Hobli, Channapatna Taluk, Ramanagar District, Pin-562160. Published at No.15, Ground Floor, 12th Block, 5th Main, Kumara Park (West), Behind BDA Head Office, Bengaluru-560020. Editor: N.Venugopal Krishna, Mobile No.+91 94835 89085, email: sanjemugilu@gmail.com